ಸಂಪುಟ: 14 Volume | ಸಂಚಿಕೆ: 07 Issue | ಪುಟಗಳು 08 Pages | ಬುಧವಾರ 08 ಏಪ್ರಿಲ್ 2026 | ₹4 | PRGINO.120927 (RNINO:KARKAN/2011/48371) | BDR/054/2026-2027 | mallammanudi@gmail.com | www.mallammanudi.in | 9448604450, 9845028349

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper

ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ | ಪ್ರಧಾನ ಸಂಪಾದಕರು: ಮಾಣಿಕರೆಡ್ಡಿ, ಕೌಡಾಳೆ

**ಬೆಳಗು**

ಮತ್ತೆ ಮತ್ತೆ ಯಾವ ಪುಸ್ತಕ ಓದುತ್ತೇವೆಯೋ ಅದು ಉತ್ತಮವಾದ ಪುಸ್ತಕ.

–ಜಾನ್ ರಸ್ಕಿನ್

ನೀರಿಗೆ ಸಮಸ್ಯೆಯಾಗದಿರಲಿ: ಸಿಇಒ 6

ಮತದಾನ ದಿನ ಸಂತೆ ರದ್ದು 7

ಯೋಜನೆ ಪೂರ್ಣಕ್ಕೆ ಅಧಿಕಾರಿಗಳಿಗೆ ಎಚ್ಚರಿಕೆ 8



ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬಾಗಲಕೋಟೆ ಉಪ ಚುನಾವಣೆಯ ಪ್ರಚಾರ ಸಭೆ ಪೂರೈಸಿದ ಬಳಿಕ ಹಳೆ ಬಾಗಲಕೋಟೆಯಲ್ಲಿರುವ ಕಿಲ್ಲಾದ ಶ್ರೀ ಕೋತ್ತಲೇಶ ದೇವಸ್ಥಾನಕ್ಕೆ ಭೇಟಿ ನೀಡಿ ದೇವರ ದರ್ಶನ ಪಡೆದು ಪೂಜೆ ಸಲ್ಲಿಸಿದರು.

## ಹಣ ಕೇಳಿದ್ದಕ್ಕೆ ಶಿಕ್ಷಕಿ ಮಟಾಶ್

**ಕಲಬುರಗಿ:** ಜಿಲ್ಲೆಯ ಕಮಲಾಪುರ ತಾಲೂಕಿನ ಕಲಮೂಡ ಬಳಿ ಸುಟ್ಟ ಸ್ಥಿತಿಯಲ್ಲಿ ಮಹಿಳೆ ಶವ ಪತ್ತೆಯಾದ ಪ್ರಕರಣವನ್ನು ಪೊಲೀಸರು ಭೇದಿಸಿದ್ದಾರೆ. ಮೃತ ಮಹಿಳೆಯನ್ನು ಕಲಬುರಗಿ ನಗರದ ಎಸ್.ಬಿ.ಕಾಲೇಜು ಎದುರಿನ ಆನಂದನಗರ ನಿವಾಸಿ ಭಾಲ್ಕಿ ತಾಲೂಕಿನ ವಾಂಜರಖೇಡದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಶಿಕ್ಷಕಿಯಾಗಿದ್ದ ಜ್ಯೋತಿ ಕಪಾಳೆ ಎಂದು ಗುರುತಿಸಲಾಗಿದೆ. ಚಿಂಚೋಳಿ ತಾಲ್ಲೂಕಿನ ಭುಂಯಾರ ಗ್ರಾಮದ ಅಮರ ಮಲ್ಲಪ್ಪ ಕುಡಳ್ಳಿ (27) ಕೊಲೆ ಆರೋಪಿಯಾಗಿದ್ದು, ಆತನನ್ನು ಪೊಲೀಸರು ಬಂಧಿಸಿದ್ದಾರೆ. ಜ್ಯೋತಿ ಅವರಿಂದ ಅಂದಾಜು 14 ಲಕ್ಷ ಹಣ ಪಡೆದಿದ್ದ. ಅದನ್ನು ಕೊಡಿ ಎಂದುದಕ್ಕೆ ಕೊಲೆ ಮಾಡಲಾಗಿದೆ ಎಂದು ತಿಳಿದು ಬಂದಿದೆ. ಕೇಸ್ ದಾಖಲಾಗಿದ್ದು ತನಿಖೆ ನಡೆಯುತ್ತಿದೆ.



## ಶ್ರೀಗಳ ವಿರುದ್ಧ ಲೈಂಗಿಕ ಕಿರುಕುಳ ಆರೋಪ

**ಬಾಗಲಕೋಟೆ:** ಕೂಡಲಸಂಗಮದ ಪಂಚಮಸಾಲಿ ಪೀಠದ ಬಸವ ಜಯಮೃತ್ಯುಂಜಯ ಸ್ವಾಮೀಜಿ ವಿರುದ್ಧ ಮಹಿಳೆಯೊಬ್ಬರು ಲೈಂಗಿಕ ಕಿರುಕುಳ ಆರೋಪ ಮಾಡಿದ್ದಾರೆ. ಈ ಬಗ್ಗೆ ರಾಜ್ಯ ಮಹಿಳಾ ಆಯೋಗಕ್ಕೆ ದೂರು ನೀಡಿದ್ದಾರೆ. ಪಂಚಮಸಾಲಿ ಸಮುದಾಯಕ್ಕೆ 2ಂ ಮೀಸಲಾತಿ ಹೋರಾಟದ ನೇತೃತ್ವವಹಿಸಿಕೊಂಡಿದ್ದ ಜಯಮೃತ್ಯುಂಜಯ ಸ್ವಾಮೀಜಿ ವಿರುದ್ಧ ಬೆಂಗಳೂರಿನ ಮಹಿಳೆ ದೂರು ನೀಡಿ, ಸ್ವತಃ ಸ್ವಾಮೀಜಿ ನನ್ನ ಖಾಸಗಿ ವಿಡಿಯೋ ಮಾಡಿ ಲೈಂಗಿಕವಾಗಿ ಸಹಕರಿಸುವಂತೆ ಕಿರುಕುಳ ನೀಡುತ್ತಿದ್ದಾರೆ ಎಂದು ಆರೋಪಿಸಿದ್ದಾರೆ.

## ಕುಡಿಯುವ ನೀರಿನ ಸಮಸ್ಯೆ ತೀವ್ರ

**ಬೀದರ:** ದಕ್ಷಿಣ ಕ್ಷೇತ್ರದ ಕಾಡವಾದ ಗ್ರಾಮ ಪಂಚಾಯತಿ ವ್ಯಾಪ್ತಿಯ ಖಾಶೆಂಪೂರ (ಪಿ) ಗ್ರಾಮದಲ್ಲಿ 25 ದಿನಗಳಿಂದ ಕುಡಿಯುವ ನೀರಿನ ತೀವ್ರ ಸಮಸ್ಯೆ ಉಂಟಾಗಿದೆ. ಗ್ರಾಮಸ್ಥರು ಪರದಾಡುತ್ತಿರುವ ಬಗ್ಗೆ ಇಂಡಿಯನ್ ನ್ಯಾಷನಲ್ ಭೀಮ ಆರ್ಮಿ ವತಿಯಿಂದ ಅಧಿಕಾರಿಗಳಿಗೆ ಮನವಿ ಸಲ್ಲಿಸಲಾಗಿದೆ. ಗ್ರಾಮದಲ್ಲಿ 3500 ರಿಂದ 4000 ಜನಸಂಖ್ಯೆ ಇದ್ದು, ಕುಡಿಯುವ ನೀರಿನ ಕೊರತೆಯಿಂದ ಸಾರ್ವಜನಿಕರು ಹಾಗೂ ಪಶುಗಳು ಸಂಕಷ್ಟಕ್ಕೆ ಸಿಲುಕಿವೆ. ಮೋಟಾರ್ ದುರಸ್ತಿ ನೆಪ ಹೇಳಿ ಸಮಸ್ಯೆಯನ್ನು ಪರಿಹರಿಸದೇ ವಿಳಂಬ ಮಾಡಲಾಗುತ್ತಿದೆ ಎಂದು ಗ್ರಾಮಸ್ಥರು ಆರೋಪಿಸಿದ್ದಾರೆ.

## ಭ್ರಷ್ಟ ಅಧಿಕಾರಿಗಳಿಗೆ ಲೋಕ ಶಾಕ್

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು




ಅಕ್ರಮ ಆಸ್ತಿ ಗಳಿಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ಕರ್ನಾಟಕ ಲೋಕಾಯುಕ್ತ ಅಧಿಕಾರಿಗಳು ಭ್ರಷ್ಟ ಅಧಿಕಾರಿಗೆ ಶಾಕ್ ನೀಡಿದ್ದಾರೆ. ರಾಜ್ಯಾದ್ಯಂತ ಎಂಟು ಕಡೆ ಏಕಕಾಲದಲ್ಲಿ ದಾಳಿ ನಡೆಸಿದ್ದಾರೆ.

ಲೋಕಾಯುಕ್ತ ಮೂಲಗಳ ಪ್ರಕಾರ, ಕೊಡಗು, ಬೀದರ್, ಬಳ್ಳಾರಿ, ಚಿತ್ರದುರ್ಗ ಮತ್ತು ಮೈಸೂರು ಸೇರಿದಂತೆ ವಿವಿಧ ಇಲಾಖೆ ಹಾಗೂ ಜಿಲ್ಲೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಕನಿಷ್ಠ ಎಂಟು ಅಧಿಕಾರಿಗಳ ಮನೆ, ಕಚೇರಿಗಳ ಮೇಲೆ ಇಂದು ಬೆಳಗ್ಗೆ ದಾಳಿ ನಡೆಸಲಾಗಿದೆ. ಕೊಡಗು ಜಿಲ್ಲೆಯ ಹಾರಂಗಿ ಅಣೆಕಟ್ಟು ಉಪವಿಭಾಗದಲ್ಲಿ ನಿಯೋಜಿಸಲಾದ ಸಹಾಯಕ ಕಾರ್ಯನಿರ್ವಾಹಕ ಎಂಜಿನಿಯರ್ ಐಕೆ ಪುಟ್ಟಸ್ವಾಮಿ ಅವರ ನಿವಾಸ ಹಾಗೂ ಕಚೇರಿ ಮೇಲೆ ದಾಳಿ ನಡೆಸಲಾಗಿದೆ. ಚಿತ್ರದುರ್ಗ ನಿರ್ಮಿತಿ ಕೇಂದ್ರದ ಅಸಿಸ್ಟೆಂಟ್ ಅಕೌಂಟೆಂಟ್ ಸುಶೀಲಮ್ಮ ಮನೆ ಮೇಲೆ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿದ್ದಾರೆ. ಬಳ್ಳಾರಿಯಲ್ಲೂ ಮೀನುಗಾರಿಕ ಇಲಾಖೆ ಸಹಾಯಕ ನಿರ್ದೇಶಕ ಶಿವಣ್ಣ ಮನೆ ಮತ್ತು ಕಚೇರಿ ಮೇಲೆ ದಾಳಿ ಮಾಡಲಾಗಿದೆ. ಶಿವಮೊಗ್ಗದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಶೋಭಾ ಅವರ ಕಚೇರಿ, ನಿವಾಸದ ಮೇಲೆ ಅಧಿಕಾರಿಗಳ ದಾಳಿ ನಡೆದಿದೆ.

## ವೃತ್ತಿ ಜೀವನದ ಮಹತ್ವ ತಿರುವು

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು



ಇಂಡಿಯನ್ ಪ್ರೀಮಿಯರ್ ಲೀಗ್ 2025ರಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡಕ್ಕೆ ಮರಳಿದ್ದು ತನ್ನ ವೃತ್ತಿಜೀವನದಲ್ಲಿ ಒಂದು ಮಹತ್ವದ ತಿರುವು ಎಂದು ಭಾರತೀಯ ಕ್ರಿಕೆಟಿಗ ದೇವದತ್ ಪಡಿಕ್ಕಲ್ ತಿಳಿಸಿದ್ದಾರೆ. ಹರಾಜು ನನ್ನ ವೃತ್ತಿಜೀವನದ ಮಹತ್ವದ ತಿರುವು ಎಂದು ನಾನು ಭಾವಿಸುತ್ತೇನೆ. ನಾನು ಯಾವ ರೀತಿಯ ಕ್ರಿಕೆಟ್ ಆಡಲು ಬಯಸುತ್ತೇನೆ, ಯಾವ ರೀತಿಯ ಕ್ರಿಕೆಟಿಗನಾಗಬೇಕೆಂದು ಬಯಸುತ್ತೇನೆ ಎಂಬುದಕ್ಕೆ ನಿಜವಾಗಿಯೂ ಬದ್ಧನಾಗಬೇಕಾದ ಹಂತದಲ್ಲಿ ಇದ್ದೆ. ಆರ್‌ಸಿಬಿಗೆ ಮರಳುವುದು ನಾನು ಆಡಲು ಬಯಸುವ ಕ್ರಿಕೆಟ್‌ನ ಬ್ರ್ಯಾಂಡ್‌ನತ್ತ ನನ್ನ ಹಾದಿಯನ್ನು ಸುಗಮಗೊಳಿಸಿತು ಎಂದು ಸಂತಸ ವ್ಯಕ್ತಪಡಿಸಿದ್ದಾರೆ.

# ಹೈವೋಲ್ಟೇಜ್ ಪ್ರಚಾರಕ್ಕೆ ಬೈ

### ಎರಡೂ ಬೈಎಲೆಕ್ಷನ್ ಭರ್ಜರಿ ಪ್ರಚಾರಕ್ಕೆ ಇಂದು ತೆರೆ | ಕಾಂಗ್ರೆಸ್–ಬಿಜೆಪಿ ನಾಯಕರು ಪರಸ್ಪರ ವಾಕ್ಸಮರ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ದಿ.ಶಾಮನೂರು ಶಿವಶಂಕರಪ್ಪ ಮತ್ತು ಮೇಟಿ ನಿಧನದ ಬಳಿಕ ದಾವಣಗೆರೆ ದಕ್ಷಿಣ, ಬಾಗಲಕೋಟೆ ಕ್ಷೇತ್ರಗಳಿದೆ ಉಪಚುನಾವಣೆ ನಡೆಯುತ್ತಿದ್ದು ಬಹಿರಂಗ ಪ್ರಚಾರ ಮಂಗಳವಾರ ಸಂಜೆ 5 ಗಂಟೆಗೆ ಕೊನೆಗೊಂಡಿದೆ. ಘಟಾನುಘಟಿಗಳು ಬಂದು ಮತದಾರರಲ್ಲಿ ಹುರುಪು ತುಂಬಿದ್ದು, ಪ್ರಚಾರಕ್ಕೆ ತೆರೆ ಬಿದ್ದಿದೆ. ಸಿಎಂ ಸಿದ್ದ ರಾಮಯ್ಯ,ಡಿಸಿಎಂ ಡಿಕೆಶಿ, ಮಾಜಿ ಸಿಎಂ ಯುಡಿಯೂರಪ್ಪ,ಪ್ರತಿಪಕ್ಷ ನಾಯಕ ಅಶೋಕ್, ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಸಭೆ ನಡೆಸಿ ಪ್ರಚಾರಕ್ಕೆ ತೆರೆ ಎಳೆದಿದ್ದಾರೆ.

**ಮುಖ್ಯಮಂತ್ರಿ ವಾಗ್ದಾಳಿ:** ತಮ್ಮ ಹೈ–ವೋಲ್ಟೇಜ್ ಪ್ರಚಾರದ ಸಮಯದಲ್ಲಿ, ಸಿಎಂ ಅವರು, ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ. ತೆರಿಗೆ ವಿಕೇಂದ್ರೀಕರಣದಲ್ಲಿ ಕೇಂದ್ರವು ಕರ್ನಾಟಕಕ್ಕೆ ಮಲತಾಯಿ ಧೋರಣೆ ತೋರುತ್ತಿದೆ. ನೀರಾವರಿ ಯೋಜನೆ ಜಾರಿಯಲ್ಲಿ ರಾಜ್ಯಜೊತೆಗೆ ಸಹಕರಿಸುತ್ತಿಲ್ಲ ಎಂದು ದೂರಿದ್ದಾರೆ.

**ಕಾಂಗ್ರೆಸ್ ವಿರುದ್ಧ ಕಿಡಿ:** 83 ವರ್ಷದ ಪಕ್ಷದ ಹಿರಿಯ ಮತ್ತು ಮಾಜಿ ಸಿಎಂ ಬಿಎಸ್ ಯಡಿಯೂರಪ್ಪ ವ್ಯಾಪಕ ಪ್ರಚಾರ ನಡೆಸಿ, ಸಿಎಂ ಹಾಗೂ ಕಾಂಗ್ರೆಸ್ ವಿರುದ್ಧ ಕಿಡಿಕಾರಿದ್ದಾರೆ. ರಾಜ್ಯ ಘಟಕದ ಮುಖ್ಯಸ್ಥ ಬಿ.ವೈ. ವಿಜಯೇಂದ್ರ, ಪ್ರತಿಪಕ್ಷದ ನಾಯಕ ಆರ್. ಅಶೋಕ, ಕೇಂದ್ರ ಸಚಿವ ಜೋಶಿ, ತರರು ಸೇರಿದಂತೆ ಇತರ ಬಿಜೆಪಿ ನಾಯಕರು ಪ್ರಚಾರ ನಡೆಸಿದ್ದಾರೆ.







### ಸತೀಶ್ ಮೌನ ಕಾರ್ಯಾಚರಣೆ

ಸಮೀಕ್ಷೆ ಪ್ರಕಾರ, ಬಾಗಲಕೋಟೆಯಲ್ಲಿ ನೆಕ್‌ಟು ನೆಕ್‌ಫೈಟ್ ಇದೆ. ಇದಕ್ಕಾಗಿ ಸಿಎಂ ಸಿದ್ದರಾಮಯ್ಯ, ಎಂಎಲ್ಸಿ ಯತೀಂದ್ರ, ಸಚಿವ ಸತೀಶ್ ಜಾರಕಿಹೊಳಿ ಕೂಡ ಆಡಳಿತ ವಿರೋಧಿ ಅಂಶವನ್ನು ತಟಸ್ಥಗೊಳಿಸಲು ಅಲ್ಲಿಯೇ ಬೀಡುಬಿಟ್ಟಿದ್ದರು. ಅಭ್ಯರ್ಥಿ ವೀರಣ್ಣ ಚರಂತಿಮಠ ಅವರನ್ನು ವಿರೋಧಿಸುವ ಬಿಜೆಪಿ ನಾಯಕರ ಬೆಂಬಲಕ್ಕಾಗಿ ಸತೀಶ್ ತಂತ್ರ ರೂಪಿಸಿದ್ದು, ಮೌನ ಕಾರ್ಯಾಚರಣೆ ನಡೆಸಿದ್ದಾರೆ.

### ಗೆಲುವಿಗೆ ಕಾರಣ?

ಗ್ರಾಮೀಣ ಪ್ರದೇಶಗಳಲ್ಲಿ ಕಾಂಗೆಸ್ ಶಕ್ತಿ ನಂಬಿದ್ದರೆ, ಬಿಜೆಪಿ ನಗರ ಪ್ರದೇಶಗಳಲ್ಲಿ ತನ್ನ ಪ್ರಮುಖ ಮತಗಳ ಕ್ರೋಡೀಕರಣವನ್ನು ನಂಬಿದೆ. ಬಾಗಲಕೋಟೆಯಿಂದ ಗೆಲ್ಲುವ ವಿಶ್ವಾಸ ಹೊಂದಿರುವ ಚರಂತಿಮಠ, ಜಾತಿ ಲೆಕ್ಕಿಸದೆ ಹಿಂದೂ ಒಗ್ಗೂಡಿ ತಮಗೆ ಮತ ಹಾಕುತ್ತಾರೆ ಎಂದಿದ್ದಾರೆ. ದಾವಣಗೆರೆ ದಕ್ಷಿಣದಲ್ಲಿ ಕಾಂಗ್ರೆಸ್ ತನ್ನ ಗೆಲುವಿನ ಓಟವನ್ನು ಮುಂದುವರಿಸುತ್ತದೆಯೇ ? ಉತ್ತರಕ್ಕೆ ಕಾಯಬೇಕು.

### ಜನಪ್ರಿಯತೆಗೆ ಲೇವಡಿ

ಕಾಂಗ್ರೆಸ್ ಅಭ್ಯರ್ಥಿ ಪರ ಕಣಕ್ಕಿಳಿದ ವಸತಿ ಸಚಿವ ಜಮೀರ್ ಅಹ್ಮದ್ ಖಾನ್, ಕೇಂದ್ರ ಸಚಿವ ಕುಮಾರಸ್ವಾಮಿ ಅವರ ಜನಪ್ರಿಯತೆಯನ್ನು ಬಾಗಲಕೋಟೆಯಲ್ಲಿ ಲೇವಡಿ ಮಾಡಿದ್ದಾರೆ. ಉಮೇಶ ಮೇಟಿ ಪರ ಬಿರುಸಿನ ಪ್ರಚಾರ ಕೈಗೊಂಡ ಜಮೀರ್, ಈಗ ಎಲ್ಲ ಕಡೆಯೂ ಸಿಎಂ ಸಿದ್ದರಾಮಯ್ಯ ಬೇಕು ಬೇಕು ಎಂಬ ಬೇಡಿಕೆ ಹೆಚ್ಚಾಗಿದೆ. ದಿಗಳದಂತೆ ಎಚ್ಡಿಕೆ ಜನಪ್ರಿಯತೆ ಕಡಿಮೆ ಆಗುತ್ತೆ. ಮುಖ್ಯಮಂತ್ರಿಗೆ ಜಾಸ್ತಿಯೇ ಆಗ್ತಿದೆ ಎಂದು ತುಲನೆ ಮಾಡಿದ್ದಾರೆ.

### ಸಿಕ್ತು ಜಮೀರ್ ಉತ್ತರ

ಪರಿಸ್ಥಿತಿ ಕೈಮೀರುವ ಹಂತದಲ್ಲಿ ಸ್ವತಃ ಎಸ್‌ಎಸ್ ಮಲ್ಲಿಕಾರ್ಜುನ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಮೂಲಕ ಸಂಧಾನ ಪ್ರಯತ್ನ ನಡೆಸಿ ಸಕ್ಸಸ್ ಆಗಿದ್ದಾರೆ. ದಾವಣಗೆರೆ ದಕ್ಷಿಣಕ್ಕೆ ಬರುವಂತೆ ಮುಖ್ಯಮಂತ್ರಿ ಸೂಚಿಸಿದ್ದಕ್ಕೆ ಜಮೀರ್ ಕೇರಳದಿಂದ ನೇರವಾಗಿ ದಾವಣಗೆರೆಯಲ್ಲಿ ಇಳಿದು ರೋಡ್ ಶೋ ಮಾಡಿ ಒಗ್ಗಟ್ಟು ತೋರಿದ್ದಾರೆ. ಈ ಮೂಲಕ ದಾವಣಗೆರೆ ದಕ್ಷಿಣಕ್ಕೂ ಜಮೀರ್‌ಗೂ ಏನು ಸಂಬಂಧ ಎಂಬ ಪ್ರಶ್ನೆಗೆ ಉತ್ತರ ಕೊಟ್ಟಿದ್ದಾರೆ.

### ಬಿಜೆಪಿ ಜೊತೆಗೆ ಎಚ್ಡಿಕೆ!

ಉಪಚುನಾವಣೆ ಪ್ರಚಾರದಲ್ಲಿ ರೆಬೆಲ್ ನಾಯಕರು ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಅವರಿಗೆ ಸಾಥ್ ನೀಡದ ಎಚ್‌ಡಿ ಕುಮಾರಸ್ವಾಮಿ ಜೊತೆ ಇದ್ದು ಕುತೂಹಲ ಕೆರಳಿಸಿದ್ದಾರೆ. ರೆಬೆಲ್ ನಾಯಕರಾದ ರಮೇಶ್ ಜಾರಕಿಹೊಳಿ, ಜಿಎಂ ಸಿದ್ದೇಶ್ವರ, ಕುಮಾರ್ ಬಂಗಾರಪ್ಪ, ಬಿಪಿಹರೀಶ್ ಅವರು ವಿಜಯೇಂದ್ರ ಜೊತೆ ಅಂತರ ಕಾಯ್ದುಕೊಂಡಿ–ದ್ದಾರೆ. ಪ್ರಚಾರದಲ್ಲಿ ಎಚ್‌ಡಿಕೆ ಜೊತೆಗೆ ಕಾಣಿಸಿಕೊಂಡಿದ್ದು ಬಿಜೆಪಿ ಪಾಳಯದಲ್ಲಿ ಚರ್ಚೆಗೆ ಗ್ರಾಸವಾಗಿದೆ.

## ನವೋದ್ಯಮಗಳಿಗೆ ಹೆಚ್ಚಿನ ಉತ್ತೇಜನ

• ಮಲ್ಲಮ್ಮ ನುಡಿ ವಾರ್ತೆ ನವದೆಹಲಿ



ಪ್ರಧಾನಿ ನರೇಂದ್ರ ಮೋದಿ ಅವರು 2023ರ ಹೊತ್ತಿಗೆ ವಾರ್ಷಿಕ 300 ದಶಲಕ್ಷ ಟನ್ ಉಕ್ಕನ್ನು ದೇಶೀಯವಾಗಿ ಉತ್ಪಾದನೆ ಮಾಡಬೇಕು ಎಂದು ಗುರಿ ನಿಗದಿ ಮಾಡಿದ್ದಾರೆ. ಆ ಗುರಿಯನ್ನು ಮುಟ್ಟಲು ಈ ಕ್ಷೇತ್ರದಲ್ಲಿ ಸಂಶೋಧನೆ, ಅಭಿವೃದ್ಧಿ, ನಾವಿನ್ಯತೆಗೆ ಇನ್ನೂ ಹೆಚ್ಚು ಒತ್ತು ನೀಡಬೇಕು ಎಂದು ಕೇಂದ್ರದ ಬೃಹತ್ ಕೈಗಾರಿಕೆ ಮತ್ತು ಉಕ್ಕು ಸಚಿವ ಎಚ್.ಡಿ. ಕುಮಾರಸ್ವಾಮಿ ಪ್ರತಿಪಾದಿಸಿದ್ದಾರೆ.

ಮಂಗಳವಾರ ಸಚಿವರು ಉಕ್ಕು ಕ್ಷೇತ್ರದಲ್ಲಿನ ಸಂಶೋಧನೆ ಮತ್ತು ಅಭಿವೃದ್ಧಿಯ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿ, ಇದಕ್ಕೆ ಪೂರಕವಾಗಿ ಕೇಂದ್ರ ಸರಕಾರವು ಈಗಾಗಲೇ ಉಕ್ಕು ವಲಯದಲ್ಲಿ ಸಂಶೋಧನೆಗೆ ಉತ್ತೇಜನ ನೀಡಿದೆ. ಮುಂದಿನ ದಿನಗಳಲ್ಲಿ ಮತ್ತಷ್ಟು ಪ್ರೋತ್ಸಾಹ ನೀಡಲಾಗುವುದು ಎಂದು ಹೇಳಿದ್ದಾರೆ. ಸಂಶೋಧನೆ ಮತ್ತು ನಾವೀನ್ಯತೆಯನ್ನು ಪರಿಣಾಮಕಾರಿ ಕೈಗಾರಿಕಾ ಫಲಿತಾಂಶವನ್ನಾಗಿ ಪರಿವರ್ತಿಸುವ ಅಗತ್ಯವನ್ನು ಒತ್ತಿ ಹೇಳಿದರು.

## ಅಕ್ರಮ ಗಾಂಜಾ ಬೆಳೆ ಪತ್ತೆ: ಇಬ್ಬರು ಸೆರೆ

• ಮಲ್ಲಮ್ಮ ನುಡಿ ವಾರ್ತೆ ಕಂಪ್ಲಿ

ಪಟ್ಟಣದ ಅಕ್ಕಿಗಿರಣಿಯೊಂದರಲ್ಲಿ ಕೆಲಸ ಮಾಡುತ್ತಿದ್ದ ಬಿಹಾರ ಮೂಲದ ಇಬ್ಬರು ಕಾರ್ಮಿಕರು ಅಕ್ರಮವಾಗಿ ಗಾಂಜಾ ಬೆಳೆದಿರುವುದು ಬೆಳಕಿಗೆ ಬಂದಿದೆ. ಕಂಪ್ಲಿ ಪೊಲೀಸರು ದಾಳಿ ನಡೆಸಿ ಆರೋಪಿಗಳನ್ನು ಬಂಧಿಸಿದ್ದಾರೆ.

ಬಂಧಿತರನ್ನು ದಿನೇಶ್ ಮತ್ತು ಸಿಂದೇಶ್ ಎಂದು ಗುರುತಿಸಲಾಗಿದೆ. ಇವರು ಅಕ್ಕಿಗಿರಣಿಯ ಹಿಂಭಾಗದ ಪ್ರದೇಶದಲ್ಲಿ ಗುಪ್ತವಾಗಿ ಗಾಂಜಾ ಬೆಳೆಸುತ್ತಿದ್ದರು ಎಂದು ತಿಳಿದುಬಂದಿದೆ. ಈ ಕುರಿತು ಖಚಿತ ಮಾಹಿತಿ ಪಡೆದ ಪೊಲೀಸರು ತಕ್ಷಣ ಕಾರ್ಯಾಚರಣೆ ಕೈಗೊಂಡಿದ್ದಾರೆ.



## ಆಧುನಿಕ ಅಭಿನವ ಮಂಟಪ ಹಾರಕೂಡ ಮಠ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ಉತ್ತಮ ಅವಕಾಶಗಳನ್ನು ಕಲ್ಪಿಸಿಕೊಡುವ ಮೂಲಕ ಕವಿ, ಕಲಾವಿದ, ಸಾಹಿತಿಗಳಿಗೆ ಸಲಹುವಂತಹ ಶ್ರೇಷ್ಠ ಕಾರ್ಯ ಹಾರಕೂಡ ಶ್ರೀಮಠದಿಂದ ಸಾಗಿ ಬರುತ್ತಿದೆ ಎಂದು ಸಿದ್ದಬಸವ ಕಬೀರ ಸ್ವಾಮಿಗಳು ತಿಳಿಸಿದ್ದಾರೆ.

ತಾಲೂಕಿನ ಹಾರಕೂಡ ಶ್ರೀಮಠದಲ್ಲಿ ಆಯೋಜಿಸಿದ ಧಾರ್ಮಿಕ ಸಭೆಯ ನೇತೃತ್ವ ವಹಿಸಿ ಮಾತನಾಡಿದ ಸ್ವಾಮಿಗಳು, ಹಾರಕೂಡ ಮಠವೆಂದರೆ ಇದೊಂದು ಅಭಿನವ ಅನುಭವ ಮಂಟಪ. ಇಲ್ಲಿ ಸರ್ವಜಾತಿ ಜನಾಂಗದ, ಸರ್ವಧರ್ಮಗಳ ಬೆಸುಗೆಯ ಸುಂದರ ಸೌಹಾರ್ದ ಆಚಾರ ವಿಚಾರ ತಾಣ ಸಿಗುತ್ತದೆ ಎಂದು ಕೊಂಡಾಡಿದ್ದಾರೆ. ಕಾರ್ಯಕ್ರಮದಲ್ಲಿ ಚಿಗರಹಳ್ಳಿ ಸಿದ್ದಬಸವ ಕಬೀರ ಸ್ವಾಮಿಗಳಿಗೆ ಹಾಗೂ ಬಿಡಿಪಿಸಿ ನೂತನ ಪದಾಧಿಕಾರಿಗಳಿಗೆ ಹಾರಕೂಡ ಶ್ರೀ ಮಠದ ವತಿಯಿಂದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರು ಸತ್ಕರಿಸಿ ಗೌರವಿಸಿದರು. ಮಲ್ಲಿನಾಥ ಹಿರೇಮಠ ಸ್ವಾಗತಿಸಿದರು. ಕಾರ್ತಿಕ ಸ್ವಾಮಿ ಯಲದಗುಂಡಿ, ಶರಣಪ್ಪ ಜಮಾದಾರ ಸಂಗೀತ ಸೇವೆ ಸಲ್ಲಿಸಿದರು. ಭಕ್ತ ಕುಂಬಾರ ಕಾರ್ಯಕ್ರಮ ನಿರೂಪಣೆ ಮಾಡಿದರು.

ಹಾರಕೂಡ ಮಠದ ಭೇಟಿ ಹಾಗೂ ಚನ್ನವೀರ ಶಿವಾಚಾರ್ಯರ ದರ್ಶನಾಶೀರ್ವಾದದಿಂದ ನನ್ನಲ್ಲಿ ಹೊಸ ಆಧ್ಯಾತ್ಮಿಕ ಚೈತನ್ಯ ಮೂಡಿದೆ ಎಂದು ಹರ್ಷದಿಂದ ನುಡಿದರು.

ಹಾರಕೂಡ ಶ್ರೀಮಠದ ಪೀಠಾಧಿಪತಿಗಳಾದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರು ಸಾನಿಧ್ಯ ವಹಿಸಿದ್ದರು. ಬಸವಕಲ್ಯಾಣ ದೇವಸ್ಥಾನ ಪಂಚಕಮಿಟಿ, ಆಡಳಿತ ಮಂಡಳಿಯ ಅಧ್ಯಕ್ಷರಾದ ಶ್ರೀ ಅನಿಲಕುಮಾರ ವೈಜಿನಾಥಪ್ಪಾ ರಗಟೆ, ಉಪಾಧ್ಯಕ್ಷರಾದ ಶ್ರೀ ಮಲ್ಲಿಕಾರ್ಜುನ ಶಾಂತಪ್ಪಾ ಕುರಕೋಟೆ, ಕೋಶಾಧ್ಯಕ್ಷರಾದ ಶ್ರೀ ಜಗನ್ನಾಥ ಚನ್ನಬಸಪ್ಪಾ ಖೂಬಾ ಉಪಸ್ಥಿತರಿದ್ದರು.



### ಸಮಾಜಕ್ಕೆ ಚಿಂತನೆ ಮೂಲಕ ಆದರ್ಶ

ಪೂಜ್ಯ ಡಾ. ಚನ್ನವೀರ ಶಿವಾಚಾರ್ಯರು, ಬಸವಣ್ಣನವರನ್ನು, ಬಸವಾದಿ ಶರಣರನ್ನು ತಮ್ಮ ಅಂತರಂಗದಲ್ಲಿ ಇರಿಸಿಕೊಂಡು ಬಸವ ಚಿಂತನೆಯನ್ನು ಸಮಾಜಕ್ಕೆ ಪ್ರಖರವಾಗಿ ಮುಟ್ಟಿಸುವ ಆದರ್ಶ ಶಿವಾಚಾರ್ಯರಾಗಿದ್ದಾರೆ. ಇಂತಹ ಮಹಾನ್ ಯತಿವರ್ಯರನ್ನು ಪಡೆದ ಈ ನೆಲವೇ ಧನ್ಯ ಎಂದು ಮನದುಂಬಿ ನುಡಿದಿದ್ದಾರೆ.


## ಮಂಜುನಾಥ ರೆಡ್ಡಿ ಮತ್ತೆ ವಿಜಯ ಭೇರಿ

• ಮಲ್ಲಮ್ಮ ನುಡಿ ವಾರ್ತೆ ಹುಮನಾಬಾದ್

ವಕೀಲರ ಸಂಘದ ಅಧ್ಯಕ್ಷರ, ಉಪಾಧ್ಯಕ್ಷರ ಹಾಗೂ ಕಾರ್ಯದರ್ಶಿಗಳ ಚುನಾವಣೆ ನಡೆಯಿತು. ಈ ಚುನಾವಣೆಯಲ್ಲಿ ಅಧ್ಯಕ್ಷ ಸ್ಥಾನಕ್ಕೆ ಮಂಜುನಾಥ್ ರೆಡ್ಡಿ ಮುಸ್ತರಿವಾಡಿ ಚುನಾವಣೆಗೆ ಸ್ಪರ್ಧಿಸಿದ್ದರು. ಇವರ ವಿರುದ್ಧ ಶಂಭುಲಿಂಗ ಸ್ಪರ್ಧಿಸಿದ್ದರು. ಈ ಚುನಾವಣೆಯಲ್ಲಿ ಮಂಜುನಾಥ್ ರೆಡ್ಡಿ 109 ಮತಗಳು ಪಡೆದು ಭಾರಿ ಬಹುಮತಗಳಿಂದ ಆಯ್ಕೆಗೊಂಡಿದ್ದಾರೆ. ಇವರ ಎದುರಾಳಿ ಶಂಭುಲಿಂಗ 52 ಮತಗಳು ಪಡೆದು ಸೋಲನ್ನು ಅನುಭವಿಸಿದ್ದಾರೆ. ಈ ಹಿಂದೆಯೂ ಮಂಜುನಾಥ ರೆಡ್ಡಿ ಅವರು ಅಧ್ಯಕ್ಷರಾಗಿ ಸೇವೆ ಸಲ್ಲಿಸಿರುವ ಅನುಭವ ಇದೆ.

**ಆಯ್ಕೆಗೆ ವಕೀಲರ ಸಂಘದ ಸದಸ್ಯರು ಹರ್ಷ:** ಮುಸ್ತರಿ ಗ್ರಾ.ಪಂ. ಉಪಾಧ್ಯಕ್ಷರಾಗಿ ಕೂಡ ಸೇವೆ ಸಲ್ಲಿಸಿದ್ದಾರೆ. ಇವರ ಆಯ್ಕೆಗೆ ವಕೀಲರ ಸಂಘದ ಸದಸ್ಯರು ಹರ್ಷ ವ್ಯಕ್ತಪಡಿಸಿದ್ದಾರೆ. ಉಪಾಧ್ಯಕ್ಷೆಯಾಗಿ ಅನೀತಾ ಪ್ರಭಾ, ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಕಾರ್ಯದರ್ಶಿ ಸ್ಥಾನಕ್ಕೆ ವಿಜಯಕುಮಾರ್ ನಾತೆ ಮತ್ತು ಪಾಂಡುರಂಗ ಸ್ಪರ್ಧಿಸಿದ್ದು, ಈ ಸ್ಪರ್ಧೆಯಲ್ಲಿ ವಿಜಯಕುಮಾರ್ ನಾತೆ ಜಯಗಳಿಸಿದ್ದಾರೆಂದು ಚುನಾವಣಾ ಅಧಿಕಾರಿ ರೇವಣಸಿದ್ದಪ್ಪ ತಿಳಿಸಿದ್ದಾರೆ.

**ಅಧ್ಯಕ್ಷರಾಗಿ 2 ಬಾರಿಗೆ ಮಂಜುನಾಥ ರೆಡ್ಡಿ ಆಯ್ಕೆ**





ನನಗೆ 2ನೇ ಬಾರಿಗೆ ಅಧ್ಯಕ್ಷರಾಗಿ ಆಯ್ಕೆ ಮಾಡಿದ ವಕೀಲ ಸೊಹೋದರರಿಗೆ ಧನ್ಯವಾದಗಳು ಸಲ್ಲಿಸುತ್ತೇನೆ. ನನ್ನ ಮೇಲೆ ವಿಶ್ವಾಸ ಇಟ್ಟು ಆಯ್ಕೆಗೊಳಿಸಿದ್ದಾರೆ. ಅವರ ವಿಶ್ವಾಸಕ್ಕೆ ಧಕ್ಕೆ ಬರದಂತೆ ಕೆಲಸ ನಿರ್ವಹಿಸುತ್ತೇನೆ. ವಕೀಲರ ಸಮಸ್ಯೆಗಳ ನಿವಾರಣೆಗೆ ಸ್ಪಂದಿಸುತ್ತೇನೆ. –ಮಂಜುನಾಥ ರೆಡ್ಡಿ, ಅಧ್ಯಕ್ಷರು ವಕೀಲರ ಸಂಘದ ಹುಮನಾಬಾದ್

## ಜಾತಿಗಳು, ಧರ್ಮಗಳ ನಡುವೆ ವಿಷಬೀಜ ಬಿತ್ತಿ ಮತಬ್ಯಾಂಕ್ ನಿರ್ಮಾಣ ಮಾಡಿದ್ದೇ ಕಾಂಗ್ರೆಸ್‌ನ ಸಾಧನೆ: ಗೋವಿಂದ ಕಾರಜೋಳ

# ಬಸವತತ್ವ ಪ್ರಚಾರಕ್ಕೆ ಬದುಕು ಮುಡಿಪು




• **ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ**

ಡಾ.ಬಸವಲಿಂಗ ಪಟ್ಟದ್ದೇವರು ತಮ್ಮ ಇಡಿ ಬದುಕು ಬಸವತತ್ವ ಪ್ರಚಾರಪ್ರಸಾರಕ್ಕೆಮುಡಿಪಾಗಿಟ್ಟಿದ್ದಾರೆ ಎಂದು ಹಂದಿಗುಂದ ಸಿದ್ದೇಶ್ವರ ಮಠದ ಶಿವಾನಂದ ಸ್ವಾಮೀಜಿ ಹೇಳಿದರು.

ಪಟ್ಟಣದ ಚನ್ನಬಸವಾಶ್ರಮ ಪರಿಸರದಲ್ಲಿ ಡಾ.ಬಸವಲಿಂಗ ಪಟ್ಟದ್ದೇವರ ಅಮೃತ ಮಹೋತ್ಸವ ನಿಮಿತ್ತ ಹಿರೇಮಠ ಸಂಸ್ಥಾನ ಮತ್ತು ಅಭಿನಂದನಾ ಸಮಿತಿ ವತಿಯಿಂದ ಆಯೋಜಿಸಿದ್ದ ಅಮೃತ ಜಲ ಅರವಟ್ಟಿಗೆ ಚಾಲನೆ ಸಭೆಯ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ಡಾ.ಬಸವಲಿಂಗ ಪಟ್ಟದ್ದೇವರು ಬಸವಣ್ಣನವರ ವಿಚಾರಧಾರೆ ಮೈಗೂಡಿಸಿಕೊಂಡು ಕರ್ನಾಟಕ ಸೇರಿ ಅಂತರ ರಾಜ್ಯಗಳಲ್ಲಿ ಬಸವತತ್ವ ಪ್ರಚಾರಕ್ಕಾಗಿ ಅವಿರತವಾಗಿ ಶ್ರಮಿಸುತ್ತಿದ್ದಾರೆ.ಜತೆಗೆ ಶೈಕ್ಷಣಿಕ ಮತ್ತು ಸಾಮಾಜಿಕ ಕ್ಷೇತ್ರದಲ್ಲಿ ವಿಶಿಷ್ಟ ಕೊಡುಗೆ ನೀಡುತ್ತಿದ್ದಾರೆ. ಅಂತಹ ಪೂಜ್ಯರು ಅಮೃತ ಮಹೋತ್ಸವ ಆಚರಿಸಿ ಕೊಳ್ಳುತ್ತಿರುವುದು ಅಭಿಮಾನದ ಸಂಗತಿ ಎಂದರು. ಅಮೃತ ಮಹೋತ್ಸವ ನಿಮಿತ್ತ ಈಗಾಗಲೇ ವಿವಿಧ ರಾಜ್ಯಗಳಿಂದ ಭಕ್ತರು ಆಗಮಿಸುತ್ತಿದ್ದಾರೆ. ವಿವಿಧ ಕಾರ್ಯಕ್ರಮಗಳು ಜರಗುತ್ತಿವೆ.

ಇಂತಹ ಸಂದರ್ಭದಲ್ಲಿ ಭಕ್ತರಿಗೆ ನೀರಿನ ದಾಹ ತಣಿಸಲು

ಚನ್ನಬಸವಾಶ್ರಮ ಪರಿಸರದಲ್ಲಿ ಅಮೃತ ಜಲ ಹೆಸರಿನಲ್ಲಿ ನೀರಿನ ಅರವಟ್ಟಿಗೆ ತೆರೆದಿರುವುದು ಸೂಕ್ತವೆನಿಸಿದೆ ಎಂದು ತಿಳಿಸಿದರು

ಪ್ರಭುಲಿಂಗ ಸ್ವಾಮೀಜಿ ಸಮ್ಮುಖ ವಹಿಸಿದ್ದರು. ರಾಜ್ಯಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಮಾಜಿ ಅಧ್ಯಕ್ಷ ಶಶಿಧರ ಕೋಸಂಬೆ, ದಾಸೋಹ ಸಮಿತಿ ಅಧ್ಯಕ್ಷರು, ಪುರಸಭೆ ಮಾಜಿ ಅಧ್ಯಕ್ಷರು ಆಗಿರುವ ಚಂದ್ರಕಾಂತ ಪಾಟೀಲ್, ವಾಲಿಬಾಲ್ ಪಂದ್ಯಾವಳಿ ಸಮಿತಿ ಅಧ್ಯಕ್ಷ ವಿಲಾಸ ಬಕ್ಕಾ, ಪ್ರಮುಖರಾದ ಸತ್ಯವಾನ ವೈರಾಗ್ಯ, ಶರಣಪ್ಪ ಬಿರಾದಾರ್, ಸಿದ್ದಯ್ಯ ಕವಡಿಮಠ, ವಿಶ್ವನಾಥಪ್ಪ ಬಿರಾದಾರ್, ಬಾಬುರಾವ ಹುಣಜೆ, ಚಂದ್ರಕಾಂತ ಹೈಬತಪುರೆ, ರಮೇಶ ಪಟ್ನೆ, ಶಿವಕುಮಾರ ಕಮಠಾಣೆ, ಶಾಂತಯ್ಯ ಸ್ವಾಮಿ, ಮಲ್ಲಮ್ಮ ನಾಗನಕೇರೆ, ಮಲ್ಲಮ್ಮ ಆರ್ ಪಾಟೀಲ್, ದೀಪಕ ಠಮಕೆ ಸೇರಿದಂತೆ ಹಲವರು ಇದ್ದರು.

# ಹಾರಕೂಡ ಶ್ರೀಗಳಿಂದ ಸನ್ಮಾನ

• **ಮಲ್ಲಮ್ಮ ನುಡಿ ವಾರ್ತೆ. ಬಸವಕಲ್ಯಾಣ**

ತಾಲೂಕಿನ ಸುಕ್ಷೇತ್ರ ಹಾರಕೂಡ ಸಂಸ್ಥಾನ ಹಿರೇಮಠದಲ್ಲಿ ಶ್ರೀ ಬಸವೇಶ್ವರ ದೇವಸ್ಥಾನ ಪಂಚಕಮಿಟಿ ಆಡಳಿತ ಮಂಡಳಿಯ ಅಧ್ಯಕ್ಷರಾದ ಅನೀಲಕುಮಾರ ರಗಟೆ, ಉಪಾಧ್ಯಕ್ಷರಾದ ಮಲ್ಲಿಕಾರ್ಜುನ ಕುರಕೋಟೆ, ಕೋಶಾಧ್ಯಕ್ಷರಾದ ಜಗನ್ನಾಥ ಖೂಬಾ, ಕಾರ್ಯದರ್ಶಿಗಳಾದ ಅಶೋಕ ನಾಗರಾಳೆ, ಸಹಕಾರದರ್ಶಿಗಳಾದ ಬಸವರಾಜ ಬಾಲಕೀಲೆ, ಸುನೀಲ ರಾಯವಾಡೆ ನಿರ್ದೇಶಕರುಗಳಾದ ಬಸವರಾಜ ಕೋರಕೆ, ಇರಣ್ಣಾ ಹಲಶೆಟ್ಟೆ, ಭದ್ರಿನಾಥ ಪಾಟೀಲ, ವಿವೇಕಾನಂದ ಹೊದಲೂರೆ, ಬಸವರಾಜ ತೆ-ಊಂಡಾರೆ, ಮಲ್ಲಿಕಾರ್ಜುನ ಚಿರಡೆ, ಸುನೀಲಕುಮಾರ ಹೊಳಕುಂದೆ, ರಾಜಕುಮಾರ ಹೊಳಕುಂದೆ ಹಾಗೂ ಪುಷ್ಪಾವತಿ ರಾಜಕುಮಾರ ಮಾಮಾ ಇವರನ್ನು ಹಾರಕೂಡ ಶ್ರೀಮಠದಲ್ಲಿ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರು ಸತ್ಕರಿಸಿ ಗೌರವಿಸಿದರು. ಈ ಸಂದರ್ಭದಲ್ಲಿ

ಪೂಜ್ಯಶ್ರೀ ಸಿದ್ದಬಸವ ಕಬೀರ ಸ್ವಾಮೀಜಿ, ಮಲ್ಲಿನಾಥ ಹಿರೇಮಠ ಹಾರಕೂಡ, ಎಪಿಎಂಸಿ ಮಾಜಿ ಅಧ್ಯಕ್ಷರಾದ ಸಿದ್ರಾಮಪ್ಪ ಗುದಗೆ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.



# ಪಟ್ಟದ್ದೇವರ ಮಾನವೀಯ ಕಾರ್ಯಗಳು ವರ್ಣನಾತೀತ

• **ಮಲ್ಲಮ್ಮ ನುಡಿ ವಾರ್ತೆ, ಭಾಲ್ಕಿ**

ಚನ್ನಬಸವಪಟ್ಟದ್ದೇವರ, ಬಸವಲಿಂಗ ಪಟ್ಟದ್ದೇವರ ಮಾನವೀಯ, ಶೈಕ್ಷಣಿಕ, ಸಮಾಜೋಧಾರ್ಮಿಕ ಕಾರ್ಯಗಳು ವರ್ಣನಾತೀತ ಆಗಿವೆ ಎಂದು ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಶಂಭುಲಿಂಗ ಕಾಮಣ್ಣ ಹೇಳಿದರು.

ತಾಲ್ಲೂಕಿನ ಹಲಬರ್ಗಾ ಗ್ರಾಮದಲ್ಲಿ ಚನ್ನಬಸವಪಟ್ಟದ್ದೇವರಸ್ಮರಣೋತ್ಸವ, ಬಸವಲಿಂಗ ಪಟ್ಟದ್ದೇವರ ಅಮೃತ ಮಹೋತ್ಸವ ನಿಮಿತ್ತ ಆಗಮಿಸಿದ ಬಸವ ಜ್ಯೋತಿ ಯಾತ್ರೆ ಸ್ವಾಗತ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಜಗತ್ತಿನ ಎಲ್ಲಾ ಸಮಸ್ಯೆಗಳಿಗೂ ಬಸವ ತತ್ವಗಳಲ್ಲಿ ಪರಿಹಾರವಿದೆ. ಬಸವತತ್ವ ಜಗದ ಬೆಳಕು. ಬಸವಣ್ಣನವರು, ಚನ್ನಬಸವ ಪಟ್ಟದ್ದೇವರು ಹಾಕಿಕೊಟ್ಟ ಬಸವಮಾರ್ಗದಲ್ಲಿ ಚಾಚೂ ತಪ್ಪದೇ ನಡೆಯುತ್ತಿದ್ದಾರೆ. ಅವರು ನಮ್ಮ ಭಾಗದ ಜ್ಞಾನದ ಬೆಳಕಾಗಿದ್ದಾರೆ ಎಂದು ತಿಳಿಸಿದರು. ಹಿರೇಮಠದ ಶಿವಬಸವ ಸ್ವಾಮೀಜಿ ಮಾತನಾಡಿ, ಬಸವಲಿಂಗ ಪಟ್ಟದೇವರು ತಮ್ಮ ಜೀವನದ ಅಮೂಲ್ಯ 75 ವರ್ಷಗಳ ಸಾರ್ಥಕ ಬದುಕು ಬಸವ ತತ್ವಕ್ಕಾಗಿ ಮೀಸಲಿಟ್ಟು ಸಮಾಜದಲ್ಲಿರುವ ಅಂಧಕಾರವನ್ನು ಹೊಡೆದೋಡಿಸಲು ಶ್ರಮಿಸುತ್ತಿದ್ದಾರೆ ಎಂದು ಹೇಳಿದರು.

ಪ್ರಮುಖರಾದ ಗುಂಡಪ್ಪ ಸಂಗಮಕರ್, ಬಸವರಾಜ ಪರಸಣ್ಣೆ, ನಾಗಶೆಟ್ಟಿ ಚೋಳಾ, ಕಾಶಪ್ಪ ಮೂಲ್ಗೆ, ನಾಗಯ್ಯ ಸ್ವಾಮಿ, ಮಹೇಶ ಸ್ವಾಮಿ ಮಠಪತಿ, ಅಶೋಕ ಸ್ವಾಮಿ, ಸುರೇಶ ಬಿರಾದರ, ಸುರೇಶ ಸಿ. ಬಿರಾದರ, ಸುರೇಶ ಪ್ರಭಾ, ಮಾಣಿಕ ಬಂಬುಳಗಿ, ಶಿವಶಂಕರ ಪ್ರಭಾ, ಸಂತೋಷ ಪತಂಗೆ, ಸಂತೋಷ ಜೋಜನೆ, ಪತ್ರಕರ್ತ ಬಸವರಾಜ ಎಸ್.ಪ್ರಭಾ, ಹುಲೇಪ್ಪ ಕುಪ್ಪೆ, ಉತ್ತಮ ನಾಗೂರೆ, ವೈಜಿನಾಥ ಪ್ರಭಾ, ವೈಜಿನಾಥ ಬಸಪ್ಪ ಪ್ರಭಾ, ರಾಜು ಕುಂಬಾರ, ಶರಣಪ್ಪ ಹೂಗಾರ, ಕಾಶಿನಾಥ ಧರ್ಮಣ್ಣ ಸೇರಿದಂತೆ ಇತರರು ಇದ್ದರು.



# ಜ್ಞಾನೇಶ್ವರ ಮಹಾರಾಜರ ಜೀವನ ಹಾದಿ ಎಲ್ಲರಿಗೂ ಆದರ್ಶ: ಮಹಾರಾಜ



• **ಮಲ್ಲಮ್ಮ ನುಡಿ ವಾರ್ತೆ, ಕಮಲನಗರ**

ಸಂತ ಜ್ಞಾನೇಶ್ವರ ಮಹಾರಾಜರು ಕೇವಲ ಒಬ್ಬ ವ್ಯಕ್ತಿಯಲ್ಲ, ಅವರು ಭಕ್ತಿ ಮತ್ತು ಜ್ಞಾನದ ಅಕ್ಷಯ ಭಂಡಾರ. ಅವರ ಜೀವನದ ಹಾದಿ ಮತ್ತು ಭಕ್ತಿ ಮಾರ್ಗವು ಇಂದಿನ ಯುವ ಪೀಳಿಗೆಗೆ ದಾರಿದೀಪವಾಗಿದೆ, ಎಂದು ಖ್ಯಾತ ಪ್ರವಚನಕಾರರಾದ ವೈಜೀನಾಥ ಮಹಾರಾಜರು ಮಾರ್ಮಿಕವಾಗಿ ನುಡಿದರು.

ತಾಲೂಕಿನ ಹುಲಸೂರ(ಖೇಡ) ಗ್ರಾಮದಲ್ಲಿ ಹನುಮಾನ ಜಯಂತಿ ನಿಮಿತ್ತ ಹಮ್ಮಿಕೊಳ್ಳಲಾದ 20ನೇ ವರ್ಷದ ಅಖಂಡ ಹರಿನಾಮ ಸಪ್ತಾಹ ಹಾಗೂ ಜ್ಞಾನೇಶ್ವರಿ ಪಾರಾಯಣ ಕಾರ್ಯಕ್ರಮದಲ್ಲಿ ಮಂಗಳವಾರ 'ಸಂತ ಜ್ಞಾನೇಶ್ವರ ಮಹಾರಾಜರ ಜೀವನ ಚರಿತ್ರೆ' ಎಂಬ ವಿಷಯದ ಕುರಿತು ಅವರು ಪ್ರವಚನ ನೀಡಿದರು.

ಸಂಕಷ್ಟದ ಹಾದಿಯಲ್ಲಿ ಭಕ್ತಿ: ಜ್ಞಾನೇಶ್ವರ ಮಹಾರಾಜರು ಬಾಲ್ಯದಲ್ಲಿ ಸಾಮಾಜಿಕ ಬಹಿಷ್ಕಾರದಂತಹ ಕಠಿಣ ಸವಾಲುಗಳನ್ನು ಎದುರಿಸಿದರೂ, ಎಂದಿಗೂ ಅಧರ್ಮದ ಹಾದಿ ಹಿಡಿಯಲಿಲ್ಲ. ಕ್ಷಮೆ ಮತ್ತು ಪ್ರೀತಿಯ ಮೂಲಕವೇ ಜಗತ್ತನ್ನು ಗೆದ್ದರು ಎಂದು ವೈಜೀನಾಥ ಮಹಾರಾಜರು ವಿವರಿಸಿದರು.

ಜ್ಞಾನೇಶ್ವರಿಯ ಮಹತ್ವ: ಸಾಮಾನ್ಯ ಜನರಿಗೂ ಭಗವದ್ಗೀತೆಯ ಸಾರ ತಿಳಿಯಲಿ ಎಂಬ ಉದ್ದೇಶದಿಂದ ಅವರು ಮರಾಠಿ ಭಾಷೆಯಲ್ಲಿ 'ಜ್ಞಾನೇಶ್ವರಿ' ಗ್ರಂಥವನ್ನು ರಚಿಸಿದರು. ಇದು ಭಕ್ತಿ ಮಾರ್ಗದ ಶ್ರೇಷ್ಠ ಕೃತಿ ಎಂದರು.

ಶ್ರದ್ಧಾಭಕ್ತಿಯಿಂದ ಪಾಲ್ಗೊಂಡ ಭಕ್ತರು

ಗ್ರಾಮದ ದೇವಸ್ಥಾನದ ಆವರಣದಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ಸುತ್ತಮುತ್ತಲಿನ ಹಳ್ಳಿಗಳಿಂದ ನೂರಾರು ಭಕ್ತರು ಆಗಮಿಸಿ ಪ್ರವಚನದ ಲಾಭ ಪಡೆದರು. ಸಪ್ತಾಹದ ಅಂಗವಾಗಿ ಪ್ರತಿದಿನ ಭಜನೆ, ಕೀರ್ತನೆ ಮತ್ತು ಅನ್ನದಾನ ಕಾರ್ಯಕ್ರಮಗಳು ವ್ಯವಸ್ಥಿತವಾಗಿ ನಡೆಯಿತ್ತಿವೆ. ಗ್ರಾಮದ ಹಿರಿಯರು ಹಾಗೂ ಸಪ್ತಾಹ ಸಮಿತಿಯ ಸದಸ್ಯರು ಕಾರ್ಯಕ್ರಮದ ಯಶಸ್ಸಿಗೆ ಶ್ರಮಿಸಿದರು. ಪ್ರವಚನದ ನಂತರ ನೆರೆದಿದ್ದ ಭಕ್ತ ಸಮೂಹಕ್ಕೆ ತೀರ್ಥ ಪ್ರಸಾದ ವಿನಿಯೋಗಿಸಲಾಯಿತು.

# ಫೋಡಿಮುಕ್ತ ಗ್ರಾಮ ಯೋಜನೆ ಜಾರಿಗೆ ವಿಳಂಬ ಅಧಿಕಾರಿಗಳ ವಿರುದ್ಧ ಆಕ್ರೋಶ




• **ಮಲ್ಲಮ್ಮ ನುಡಿ ವಾರ್ತೆ, ಬೀದರ್**

ಫೋಡಿಮುಕ್ತ ಗ್ರಾಮ ಯೋಜನೆ ಜಾರಿಗೆ ಸಂಬಂಧಿಸಿದಂತೆ ಅಧಿಕಾರಿಗಳ ನಿರ್ಲಕ್ಷ್ಯ ಮತ್ತು ವಿಳಂಬದ ವಿರುದ್ಧ ರೈತರು ಹಾಗೂ ಸಾರ್ವಜನಿಕರಲ್ಲಿ ಅಸಮಾಧಾನ ವ್ಯಕ್ತವಾಗಿದೆ. ಈ ಕುರಿತು ಜಿಲ್ಲಾಧಿಕಾರಿಗಳಿಗೆ

ರಾಷ್ಟ್ರೀಯ ಭ್ರಷ್ಟಾಚಾರ ನಿರ್ಮೂಲನೆ ಹಾಗೂ ಕಾರ್ಯಾಚರಣೆ ಸಮತಿ ವತಿಯಿಂದ ಮನವಿ ಸಲ್ಲಿಸಲಾಗಿದ್ದು, ತಕ್ಷಣ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಲಾಗಿದೆ.

ಮನವಿಯಲ್ಲಿ ತಿಳಿಸಿದಂತೆ, ಸರ್ಕಾರ ಫೋಡಿಮುಕ್ತ ಗ್ರಾಮ ಅಭಿಯಾನ ಆರಂಭಿಸಿ ಆರು ತಿಂಗಳು ಕಳೆದರೂ ಸಹ ಇನ್ನೂ ಅನೇಕ ಕಡೆಗಳಲ್ಲಿ ಫೋಡಿ ಪ್ರಕ್ರಿಯೆ ಪೂರ್ಣಗೊಂಡಿಲ್ಲ.

ಅಧಿಕಾರಿಗಳು ವಿವಿಧ ನೆಪಗಳನ್ನು ಹೇಳಿ ಕಾಲಹರಣ ಮಾಡುತ್ತಿದ್ದಾರೆ ಎಂದು ಆರೋಪಿಸಲಾಗಿದೆ.

ಅಧಿಕಾರಿಗಳು ಗ್ರಾಮಗಳಿಗೆ ಭೇಟಿ ನೀಡಿ ಫೋಟೋ ತೆಗೆದುಕೊಂಡು ಹೋಗಿ, ನಂತರ ಜನಸಂಪರ್ಕದಲ್ಲಿರದೆ ಇರುವುದರಿಂದ ಗ್ರಾಮಸ್ಥರು ಸಂಕಷ್ಟಕ್ಕೆ ಸಿಲುಕಿದ್ದಾರೆ. ರೈತರು ತಮ್ಮ ಕೆಲಸಗಳನ್ನು ಬಿಟ್ಟು ಕಚೇರಿಗಳಿಗೆ ಅಲೆದಾಡಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಮನವಿಯಲ್ಲಿ ಉಲ್ಲೇಖಿಸಲಾಗಿದೆ.

ಇದಲ್ಲದೆ, ಕಂದಾಯ ಇಲಾಖೆಯಿಂದ ಮನೆಬಾಗಿಲಿಗೆ ಸೇವೆ ನೀಡುವುದಾಗಿ ಘೋಷಿಸಿದ್ದರೂ, ರೈತರಿಗೆ ಜಮೀನಿನ ಪಟ್ಟಾ ಪಾಸ್‌ಬುಕ್ ಹಾಗೂ ಅಗತ್ಯ ದಾಖಲೆಗಳನ್ನು ನೀಡಲಾಗಿಲ್ಲ.

ಇದರಿಂದ ರೈತರು ದಾಖಲೆಗಳಿಗಾಗಿ ಕಚೇರಿಗಳಿಗೆ ಹೋಗಬೇಕಾಗುತ್ತಿದೆ ಎಂಬ ಅಸಮಾಧಾನ ವ್ಯಕ್ತವಾಗಿದೆ.

ಆದ್ದರಿಂದ, ಉನ್ನತ ಮಟ್ಟದ ಅಧಿಕಾರಿಗಳು ತಕ್ಷಣ ಎಚ್ಚೆತ್ತುಕೊಂಡು ಫೋಡಿಮುಕ್ತ ಗ್ರಾಮ ಯೋಜನೆಯನ್ನು ಶೀಘ್ರ ಜಾರಿಗೆ ತಂದು, ರೈತರಿಗೆ ಪಟ್ಟಾ ಪಾಸ್‌ಬುಕ್ ಹಾಗೂ ದಾಖಲೆಗಳನ್ನು ಒದಗಿಸಬೇಕು ಎಂದು

ರಾಷ್ಟ್ರೀಯ ಭ್ರಷ್ಟಾಚಾರ ನಿರ್ಮೂಲನೆ ಹಾಗೂ ಕಾರ್ಯಾಚರಣೆ ಸಮತಿಯ ಜಿಲ್ಲಾಧ್ಯಕ್ಷ ಅನಂತರೆಡ್ಡಿ ಟಿ. ಮೀರ್ಜಾಪೂರ ಒತ್ತಾಯಿಸಿದ್ದಾರೆ.

# ಬಸವ ಜಯಂತಿ ಉತ್ಸವ ಸಮಿತಿಯ ಅಧ್ಯಕ್ಷರಾಗಿ ಡಾ ರಜನೀಶ ವಾಲಿ ಆಯ್ಕೆ



• **ಮಲ್ಲಮ್ಮ ನುಡಿ ವಾರ್ತೆ, ಬೀದರ್**

ಸಾಂಸ್ಕೃತಿಕ ನಾಯಕ ವಿಶ್ವಗುರು ಬಸವಣ್ಣನವರ ಜಯಂತಿಯ ಉತ್ಸವ ಸಮಿತಿಯ ಅಧ್ಯಕ್ಷರನ್ನಾಗಿ ಶರಣ ಡಾ.ರಜನೀಶ ವಾಲಿ ಅವರನ್ನು ಸರ್ವಾನುಮತದಿಂದ ಆಯ್ಕೆ ಮಾಡಲಾಗಿದೆ.

ನಗರದ ಗಾಂಧಿ ಗಂಜನ ಬಸವೇಶ್ವರ ದೇವಸ್ಥಾನದಲ್ಲಿ ಉತ್ತರ ಕರ್ನಾಟಕ ದಿನ ಪತ್ರಿಕೆಯ ಪ್ರಧಾನ ಸಂಪಾದಕರು ಹಿರಿಯ ಶರಣ ಜೀವಿಗಳಾದ ಶರಣ ಶಿವಶರಣಪ್ಪ ವಾಲಿಯವರ ಅಧ್ಯಕ್ಷತೆಯಲ್ಲಿ ಜರುಗಿದ ಸಭೆಯಲ್ಲಿ 2026 ರ ಬಸವ ಜಯಂತಿ ಉತ್ಸವ ಸಮಿತಿಯ ಅಧ್ಯಕ್ಷರನ್ನಾಗಿ ಹೈದ್ರಾಬಾದ ಕರ್ನಾಟಕ ಶಿಕ್ಷಣ ಸಂಸ್ಥೆಯ ಆಡಳಿತ ಮಂಡಳಿಯ ಸದಸ್ಯರಾದ ಡಾ ರಜನೀಶ ವಾಲಿ ಅವರನ್ನು ಅಧ್ಯಕ್ಷರನ್ನಾಗಿ ಆಯ್ಕೆ ಮಾಡಲಾಗಿದೆ.

ಸಮಿತಿಯ ಪ್ರಧಾನ ಕಾರ್ಯದರ್ಶಿಗಳಾಗಿ ಮಹಾನಗರ ಪಾಲಿಕೆಯ ಸದಸ್ಯರಾದ ಶಶಿಧರ ಹೊಸಳ್ಳಿ ಅವರನ್ನು ಮತ್ತು ಕೋಶಾಧ್ಯಕ್ಷರನ್ನಾಗಿ ಶರಣ ಸಿದ್ರಾಮಯ್ಯ ಸ್ವಾಮಿ ಅವರನ್ನು ಜೊತೆಗೆ ಮೆರವಣಿಗೆ ಸಮಿತಿಯ ಅಧ್ಯಕ್ಷರಾಗಿ ಶರಣ ಧನರಾಜ ಹಂಗರಗಿ, ಪ್ರಧಾನ ಕಾರ್ಯದರ್ಶಿಯಾಗಿ ಶರಣ ವಿಕ್ರಮ ಮುಧಾಳೆ, ಮಹಿಳಾ ಸಮಿತಿಯ ಅಧ್ಯಕ್ಷರಾಗಿ ಡಾ ದೇವಕಿ ಅಶೋಕ ನಾಗೋರೆ ಅವರನ್ನು ಸರ್ವಾನುಮತದಿಂದ ಆಯ್ಕೆ ಮಾಡಲಾಯಿತು.

ನೂತನ ಅಧ್ಯಕ್ಷರಾಗಿ ಆಯ್ಕೆಯಾದ ಡಾ.ರಜನೀಶ ವಾಲಿ ಅವರು ಮಾತನಾಡಿ, ಪ್ರತಿ ವರ್ಷದಂತೆ ಈ ವರ್ಷವು ಕೂಡ ಬಸವ ಜಯಂತಿಯನ್ನು ಅದ್ದೂರಿ ಹಾಗೂ ಅರ್ಥಪೂರ್ಣವಾಗಿ ಆಚರಿಸೋಣ ತಮ್ಮೆಲ್ಲರ ಸಹಕಾರವಿರಲಿ ಎಂದು ನುಡಿದರು.

ವೇದಿಕೆಯಲ್ಲಿ ಬೀದರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಬಸವರಾಜ ಜಾಬಶೆಟ್ಟಿ ನಗರ ಸಭೆಯ ಮಾಜಿ ಅಧ್ಯಕ್ಷ ಹಾಲಿ ಸದಸ್ಯ ಚಂದ್ರಶೇಖರ ಪಾಟೀಲ ಗಾದಗಿ ಭಾರತೀಯ ಬಸವ ಬಳಗದ ರಾಜ್ಯಾಧ್ಯಕ್ಷ ಬಾಬು ವಾಲಿ ರಾಷ್ಟ್ರೀಯ ಬಸವದಳದ ಜಿಲ್ಲಾ ಅಧ್ಯಕ್ಷ ಸೋಮಶೇಖರ ಪಾಟೀಲ ಗಾದಗಿ ಕಸಾಪ ಜಿಲ್ಲಾ ಅಧ್ಯಕ್ಷ ಸುರೇಶ ಚನಶೆಟ್ಟಿ ಜಾಗತಿಕ ಲಿಂಗಾಯತ ಮಹಾಸಭೆಯ ಅಧ್ಯಕ್ಷ ಬಸವರಾಜ ಧನ್ನೂರ ಕ ರಾ ಸ ನೌಕರರ ಸಂಘದ ನಿಕಟಪೂರ್ವ ಅಧ್ಯಕ್ಷ ರಾಜೇಂದ್ರ ಕುಮಾರಗಂದಗೆ , ಉದ್ಯಮಿ ದೀಪಕ ವಾಲಿ ,ಬಾಬುರಾವ ದಾನಿ ವಿಜಯಕುಮಾರ ಪಾಟೀಲ ಯರನಳ್ಳಿ ಡಾ ವಿಜಯಶ್ರೀ ಬಶೆಟ್ಟಿ ಶಾಂತಾ ಖಂಡ್ರೆ, ಜಯದೇವಿ ಯದಲಾಪೂರೆ ಉಲ್ಲಾಸಿನಿ ಮುಧಾಳೆ, ವಿಜಯಲಕ್ಷ್ಮಿ ಕೌಟಗೆ ಸೇರಿದಂತೆ ನೂರಾರು ಬಸವ ಭಕ್ತರು ಭಾಗವಹಿಸಿದರು.

ಆರಂಭದಲ್ಲಿ ಬಸವ ಜಯಂತಿ ಉತ್ಸವ ಸಮಿತಿಯ ನಿಕಟ ಪೂರ್ವ ಅಧ್ಯಕ್ಷ ಜೈರಾಜ ಖಂಡ್ರೆ ಹಿಂದಿನ ವರ್ಷದ ಲೆಕ್ಕ ಪತ್ರ ಮಂಡಿಸಿದರು. ರಾಷ್ಟ್ರೀಯ ಬಸವ ದಳದ ತಾಲ್ಲೂಕು ಅಧ್ಯಕ್ಷ ಸಂಜೀವಕುಮಾರ ಪಾಟೀಲ ಸ್ವಾಗತಿಸಿದರು, ರಾಷ್ಟ್ರೀಯ ಬಸವದಳದ ಪ್ರದಾನ ಕಾರ್ಯದರ್ಶಿ ಸುರೇಶ ಸ್ವಾಮಿ ನಿರೂಪಿಸಿದರೆ ಶರಣ ನಂದು ಪಾಟೀಲ ವಂದಿಸಿದರು.

# ಸಂಪಾದಕೀಯ



ಮಾಣಿಕರೆಡ್ಡಿ ಕೌಡಾಳೆ
ಪ್ರಧಾನ ಸಂಪಾದಕರು
ಮೋ: 9845028349

## ಭಾರತೀಯ ಪ್ರಜಾಪ್ರಭುತ್ವ ಕಾವಲು ಮೇಲಿದೆ ಜಾತಿ ರಾಜಕೀಯ ಹೆಚ್ಚುತ್ತಿದೆ

ಭಾರತವು ಜಗತ್ತಿನ ಅತಿ ದೊಡ್ಡ ಪ್ರಜಾಪ್ರಭುತ್ವ ರಾಷ್ಟ್ರವಾಗಿ ಹೆಸರಾಗಿದೆ. ಸಂವಿಧಾನದ ಆಧಾರದ ಮೇಲೆ ಸಮಾನತೆ, ನ್ಯಾಯ ಮತ್ತು ಸ್ವಾತಂತ್ರ್ಯದ ಮೌಲ್ಯಗಳನ್ನು ದೇಶವು ಅಳವಡಿಸಿಕೊಂಡಿದೆ. ಆದರೆ ಇತ್ತೀಚಿನ ದಿನಗಳಲ್ಲಿ ಜಾತಿ ಆಧಾರಿತ ರಾಜಕೀಯ ಹೆಚ್ಚುತ್ತಿರುವುದು ಭಾರತೀಯ ಪ್ರಜಾಪ್ರಭುತ್ವಕ್ಕೆ ದೊಡ್ಡ ಸವಾಲಾಗಿ ಪರಿಣಮಿಸಿದೆ. ಪ್ರಜಾಪ್ರಭುತ್ವದ ಮೂಲ ತತ್ವವಾದ ಸಮಾನತೆ ಮತ್ತು ಸಾಮರಸ್ಯವನ್ನು ಈ ಜಾತಿ ರಾಜಕೀಯ ನಿಧಾನವಾಗಿ ದುರ್ಬಲಗೊಳಿಸುತ್ತಿದೆ.

ರಾಜಕೀಯ ಪಕ್ಷಗಳು ಅಭಿವೃದ್ಧಿ, ಶಿಕ್ಷಣ, ಆರೋಗ್ಯ, ಉದ್ಯೋಗದಂತಹ ಜನಸಾಮಾನ್ಯರ ಸಮಸ್ಯೆಗಳ ಬಗ್ಗೆ ಚರ್ಚೆ ಮಾಡುವ ಬದಲು ಜಾತಿಯ ಆಧಾರದ ಮೇಲೆ ಮತಗಳನ್ನು ಕೇಳುವ ಪ್ರವೃತ್ತಿ ಹೆಚ್ಚುತ್ತಿದೆ. ಇದರಿಂದ ಸಮಾಜದಲ್ಲಿ ವಿಭಜನೆ ಹೆಚ್ಚುತ್ತಿದ್ದು, ಜನರ ಮಧ್ಯೆ ವೈಮನಸ್ಸು ಮೂಡುತ್ತಿದೆ. ಚುನಾವಣೆಯ ಸಮಯದಲ್ಲಿ ಜಾತಿ ಸಮೀಕರಣಗಳನ್ನು ಲೆಕ್ಕ ಹಾಕಿ ಅಭ್ಯರ್ಥಿಗಳನ್ನು ಆಯ್ಕೆ ಮಾಡುವುದು ಪ್ರಜಾಪ್ರಭುತ್ವದ ಆರೋಗ್ಯಕರ ವ್ಯವಸ್ಥೆಗೆ ಧಕ್ಕೆಯಾಗಿದೆ.

ಜಾತಿ ರಾಜಕೀಯ ಹೆಚ್ಚಿದಂತೆ ಸಮಾಜದಲ್ಲಿ ಸಮಾನತೆ ಕಡಿಮೆಯಾಗುತ್ತದೆ. ಬಡತನ, ನಿರುದ್ಯೋಗ, ಶಿಕ್ಷಣದ ಕೊರತೆ ಮುಂತಾದ ಪ್ರಮುಖ ಸಮಸ್ಯೆಗಳು ಕಡೆಗಣನೆಯಾಗುತ್ತವೆ. ಜನಪ್ರತಿನಿಧಿಗಳು ಅಭಿವೃದ್ಧಿ ಕೆಲಸಗಳಿಗಿಂತಲೂ ಜಾತಿ ಆಧಾರಿತ ಲಾಭದ ರಾಜಕೀಯದಲ್ಲಿ ತೊಡಗುವ ಸಾಧ್ಯತೆ ಹೆಚ್ಚುತ್ತದೆ.

ದೇಶದ ಮಹಾನ್ ಸಮಾಜ ಸುಧಾರಕರು ಜಾತಿ ವ್ಯವಸ್ಥೆಯನ್ನು ನಿವಾರಿಸಲು ಹೋರಾಟ ನಡೆಸಿದ್ದರು. ಸಮಾನತೆ ಮತ್ತು ಮಾನವೀಯತೆಯ ಮೌಲ್ಯಗಳನ್ನು ಸ್ಥಾಪಿಸಲು ತಮ್ಮ ಜೀವನವನ್ನೇ ಅರ್ಪಿಸಿದರು. ಆದರೆ ಇಂದಿನ ಪರಿಸ್ಥಿತಿಯಲ್ಲಿ ಅವರ ಆದರ್ಶಗಳನ್ನು ಮರೆತು ಮತ್ತೆ ಜಾತಿ ರಾಜಕೀಯದ ಕಡೆಗೆ ಸಮಾಜ ಸಾಗುತ್ತಿರುವುದು ದುಃಖಕರ ಸಂಗತಿಯಾಗಿದೆ.

ಆದ್ದರಿಂದ ಜನರು ಜಾತಿ, ಧರ್ಮ, ಭಾಷೆ ಇತ್ಯಾದಿಗಳನ್ನು ಮೀರಿ ಅಭಿವೃದ್ಧಿ ಮತ್ತು ಉತ್ತಮ ಆಡಳಿತವನ್ನು ಮುಖ್ಯವಾಗಿ ಪರಿಗಣಿಸಬೇಕು. ರಾಜಕೀಯ ನಾಯಕರು ಸಹ ಸಮಾಜವನ್ನು ವಿಭಜಿಸುವ ರಾಜಕೀಯವನ್ನು ಬಿಟ್ಟು ಜನರ ಸಮಸ್ಯೆಗಳನ್ನು ಪರಿಹರಿಸುವ ಕೆಲಸಕ್ಕೆ ಮುಂದಾಗಬೇಕು. ಆಗ ಮಾತ್ರ ಭಾರತೀಯ ಪ್ರಜಾಪ್ರಭುತ್ವ ಮತ್ತಷ್ಟು ಬಲವಾಗುತ್ತದೆ. ಜಾತಿ ರಾಜಕೀಯ ಹೆಚ್ಚುತ್ತಿರುವ ಈ ಸಂದರ್ಭದಲ್ಲಿ ದೇಶದ ಪ್ರಜಾಪ್ರಭುತ್ವವನ್ನು ಕಾಪಾಡುವುದು ಪ್ರತಿಯೊಬ್ಬ ನಾಗರಿಕನ ಜವಾಬ್ದಾರಿಯಾಗಿದೆ.

# ಮಲ್ಲಮ್ಮ ನುಡಿಯ ಯುಗಾದಿ ವಿಶೇಷಾಂಕ ಬಿಡುಗಡೆ




• **ಮಲ್ಲಮ್ಮ ನುಡಿ ವಾರ್ತೆ, ಕಮಲನಗರ**

ಪಟ್ಟಣದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ(ನಿ) ಬ್ಯಾಂಕಿನಲ್ಲಿ 'ಮಲ್ಲಮ್ಮ ನುಡಿ' ಪತ್ರಿಕೆಯ ಯುಗಾದಿ ಹಬ್ಬದ ವಿಶೇಷ ಸಂಚಿಕೆಯನ್ನು ಅದ್ದೂರಿಯಾಗಿ ಬಿಡುಗಡೆ ಮಾಡಲಾಯಿತು.

ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಬ್ಯಾಂಕಿನ ಅಧ್ಯಕ್ಷರಾದ ಗಂಗಾಧರ ಸೋಲಾಪುರೆ ಅವರು ವಿಶೇಷಾಂಕ ಬಿಡುಗಡೆ ಮಾಡಿ, ಶುಭ ಹಾರೈಸಿದರು. ಯುಗಾದಿ ಹಬ್ಬದ ಪ್ರಯುಕ್ತ ಹೊರಬಂದ ಈ ವಿಶೇಷಾಂಕವು ಓದುಗರಿಗೆ ಹಬ್ಬದ ಸಂಭ್ರಮದೊಂದಿಗೆ ಉಪಯುಕ್ತ ಮಾಹಿತಿ ನೀಡಲಿ ಎಂದು ಅವರು ಆಶಿಸಿದರು. ಈ ಸಂದರ್ಭದಲ್ಲಿ ಬ್ಯಾಂಕಿನ ಕಾರ್ಯದರ್ಶಿಗಳಾದ ಶಾಂತಪ್ಪ ಬಿರಾದಾರ ಹಾಗೂ ಪತ್ರಿಕೆಯ ಕಮಲನಗರ ವರದಿಗಾರರಾದ ಪರಮೇಶ ರಾಂಪುರೆ ಉಪಸ್ಥಿತರಿದ್ದರು.

# ಡಾ.ಬಿ.ಆರ್.ಅಂಬೇಡ್ಕರ ಡಾ.ಬಾಬು ಜಗಜೀವನರಾಮ್ ರವರ ಜಯಂತಿ

ಕಾರವಾರ: ತಾಲೂಕ ಆಡಳಿತ, ತಾಲೂಕ ಪಂಚಾಯತ್, ನಗರಸಭೆ ಭಟ್ಕಳ ಹಾಗೂ ಸಮಾಜ ಕಲ್ಯಾಣ ಇಲಾಖೆ ಭಟ್ಕಳ ಇವರ ಸಂಯುಕ್ತ ಆಶ್ರಯದಲ್ಲಿ ಮಹಾ ಮಾನವತಾವಾದಿ ಸಂವಿಧಾನ ಶಿಲ್ಪಿ ಹಾಗೂ ಭಾರತ ರತ್ನ ಡಾ.ಬಿ.ಆರ್.ಅಂಬೇಡ್ಕರ 135ನೇ ಜನ್ಮ ದಿನಾಚರಣೆ ಹಾಗೂ ಹಸಿರು ಕ್ರಾಂತಿ ಹರಿಕಾರ ಡಾ.ಬಾಬು ಜಗಜೀವನರಾಮ್ ರವರ 119ನೇ ಜನ್ಮ ದಿನಾಚರಣೆಯನ್ನು ಏ.14 ಬೆಳಗ್ಗೆ 10.30 ಗಂಟೆಗೆ ಭಟ್ಕಳದ ಅರ್ಬನ್ ಬ್ಯಾಂಕ್ ಸಭಾಭವನದಲ್ಲಿ ಹಮ್ಮಿಕೊಳ್ಳಲಾಗಿದೆ. ಕಾರ್ಯಕ್ರಮದ ಅಧ್ಯಕ್ಷತೆ ಮತ್ತು ಉದ್ಘಾಟನೆಯನ್ನು ಮೀನುಗಾರಿಕೆ ಬಂದರು ಹಾಗೂ ಒಳನಾಡು ಜಲಸಾರಿಗೆ ಸಚಿವ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಮಂಕಾಳ ಎಸ್. ವೈದ್ಯ ನೇರವೇರಿಸಲಿದ್ದಾರೆ. ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಕರ್ನಾಟಕ ರಾಜ್ಯ ಮಾರ್ಕೇಟಿಂಗ್ ಕಮ್ಯುನಿಕೇಷನ್ ಅಂಡ್ ಅಡ್ವರ್ಟೈಸಿಂಗ್ ಲಿಮಿಟೆಡ್ ಅಧ್ಯಕ್ಷ ಹಾಗೂ ಶಾಸಕ ಸತೀಶ ಕೆ. ಸೈಲ್, ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ, ವಿಧಾನ ಪರಿಷತ್ ಶಾಸಕರಾದ ಎಸ್. ವಿ.ಸಂಕನೂರು, ಶಾಂತಾರಾಮ ಬುಡ್ನ ಸಿದ್ದಿ, ಗಣಪತಿ ಡಿ.ಉಳ್ವೇಕರ, ಜಾಲಿ ಪಟ್ಟಣ ಪಂಚಾಯತ್ ಅಧ್ಯಕ್ಷೆ ಖಾಜೀಯಾ ಅಫ್ಸಾ ಹುಜೈಫಾ, ಭಟ್ಕಳ ತಾಲೂಕ ಗ್ಯಾರಂಟಿ ಸಮಿತಿ ಅಧ್ಯಕ್ಷ ರಾಜು ಮಂಜಪ್ಪ ನಾಯ್ಕ, ಭಟ್ಕಳದ ಉಪವಿಭಾಗಾಧಿಕಾರಿ ಪ್ರವೀಣ ಕರಾಂಡೆ ಮತ್ತಿತರರು ಪಾಲ್ಗೊಳ್ಳಲಿದ್ದಾರೆ. ಡಾ.ಬಿ.ಆರ್.ಅಂಬೇಡ್ಕರ್ ಕುರಿತು ಭಟ್ಕಳದ ತೆರ್ನಮಕ್ಕಿಯ ಕರ್ನಾಟಕ ಪಬ್ಲಿಕ್ ಸ್ಕೂಲ್ ಶಿಕ್ಷಕ ಗುಡ್ಡಪ್ಪ ಹರಿಜನ ಹಾಗೂ ಡಾ.ಬಾಬು ಜಗಜೀವನರಾಮ್ ಕುರಿತು ಭಟ್ಕಳದ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲ ನಾಗೇಶ ಶೆಟ್ಟಿ ಅವರು ವಿಶೇಷ ಉಪನ್ಯಾಸ ನೀಡಲಿದ್ದಾರೆ.

# ಅಲ್ಪಸಂಖ್ಯಾತರ ವಸತಿ ಶಾಲೆ 6ನೇ ತರಗತಿ ಪ್ರವೇಶ ಪರೀಕ್ಷೆ

• ಮಲ್ಲಮ್ಮ ನುಡಿ ವಾರ್ತೆ ಕಾರವಾರ

ಉತ್ತರ ಕನ್ನಡ ಜಿಲ್ಲೆಯ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಡಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ದಾಂಡೇಲಿ ತಾಲೂಕಿನ ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆ(ಸಿ.ಬಿ.ಎಸ್.ಇ) ಮತ್ತು ಮುಂಡಗೋಡ ತಾಲೂಕಿನ ಪಾಳಾ ಗ್ರಾಮದ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಗೆ 2026–27 ನೇ ಶೈಕ್ಷಣಿಕ ವರ್ಷಕ್ಕೆ ಸಂಬಂದಿಸಿದಂತೆ 6ನೇ ತರಗತಿ ರಾಜ್ಯ ಮಟ್ಟದ ಪ್ರವೇಶ ಪರೀಕ್ಷೆಯು ಏ.12 ರಂದು ನಡೆಯಲಿದೆ.

ವಿದ್ಯಾರ್ಥಿಗಳು ಪ್ರವೇಶ ಪರೀಕ್ಷೆಯ ಪ್ರವೇಶ ಪತ್ರವನ್ನು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವೆಬ್‌ಸೈಟ್ https://dom.karnataka.gov.in/ಗೆ ಭೇಟಿ ನೀಡಿ ಡೌನ್‌ಲೋಡ್ ಮಾಡಿಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆ ಪ್ರಾಂಶುಪಾಲರು ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆ, ದಾಂಡೇಲಿ–9620915496 ಮತ್ತು ಮೊರಾರ್ಜಿ ದೇಸಾಯಿ ವಸತಿ ಶಾಲೆ–9008841149 ಅಥವಾ ಜಿಲ್ಲಾ ಅಲ್ಪಸಂಖ್ಯಾತ ಕಲ್ಯಾಣ ಇಲಾಖೆ ಕಾರವಾರ ದೂ.ಸಂ– 08382–220336 ಅಥವಾ ತಾಲೂಕು ಮಾಹಿತಿ ಕೇಂದ್ರಗಳಿಗೆ ಕಚೇರಿ ಸಮಯದಲ್ಲಿ ಸಂಪರ್ಕಿಸುವಂತೆ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆ ತಿಳಿಸಿದ್ದಾರೆ.

# ಬೇಸಿಗೆ ಶಿಬಿರಕ್ಕೆ ಹೆಸರು ನೋಂದಾಯಿಸಿಕೊಳ್ಳಿ

• ಮಲ್ಲಮ್ಮ ನುಡಿ ವಾರ್ತೆ ಕಾರವಾರ

ಜಿಲ್ಲಾ ಬಾಲಭವನ ಸೊಸೈಟಿ ಅಡಿಯಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ 2026–27 ನೇ ಸಾಲಿನ ಬೇಸಿಗೆ ಶಿಬಿರವನ್ನು ಸ್ತ್ರೀಶಕ್ತಿ ಭವನ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಕಾರವಾರದಲ್ಲಿ ಮುಂದಿನ ವಾರದಿಂದ 15 ದಿನಗಳ ಕಾಲ ನಡೆಸಲಾಗುತ್ತಿದೆ.

ಈ ಶಿಬಿರದಲ್ಲಿ 5 ವರ್ಷದಿಂದ 16 ವರ್ಷದ ವಯೋಮಾನದ ಮಕ್ಕಳಿಗೆ ವಿವಿಧ ರೀತಿಯ ಚಟುವಟಿಕೆಗಳಾದ ಸಂಗೀತ, ನೃತ್ಯ, ಕರಾಟೆ, ಯೋಗ, ಚಿತ್ರಕಲೆ ತರಬೇತಿ ನೀಡಲಾಗುವುದು. ಈ ಬೇಸಿಗೆ ಶಿಬಿರವು ಸಂಪೂರ್ಣವಾಗಿ ಉಚಿತವಾಗಿದ್ದು, ಭಾಗವಹಿಸಲು ಇಚ್ಛೆಯುಳ್ಳ ಮಕ್ಕಳ ಹೆಸರನ್ನು ಏ.14 ರ ಒಳಗೆ ಕಚೇರಿಯ ವೇಳೆಯಲ್ಲಿ ನೊಂದಾಯಿಸಿಕೊಳ್ಳುಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಕಚೇರಿ ಅವಧಿಯಲ್ಲಿ ಕಾರ್ಯಕ್ರಮ ಸಂಯೋಜಕರ ದೂ.ಸಂ: 9481264737 ನ್ನು ಸಂಪರ್ಕಿಸುವಂತೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕುಮಟಾ: ವಿದ್ಯುತ್ ವ್ಯತ್ಯಯ

• ಮಲ್ಲಮ್ಮ ನುಡಿ ವಾರ್ತೆ ಕಾರವಾರ

ಕುಮಟಾ ಉಪವಿಭಾಗದ ಗೋಕರ್ಣ ಶಾಖೆಯ ಮಾದನಗೇರಿ 11ಕೆ.ವಿ ಕೇಬಲ್ ಬಿಚ್ಚಿ ಅಳವಡಿಸುವ ಕಾಮಗಾರಿಯು ಬಳಲೆ ಗ್ರಾಮದಲ್ಲಿ ಇರುವುದರಿಂದ ಅಂಕೋಲಾ ಉಪ–ವಿಭಾಗ ವ್ಯಾಪ್ತಿಯ ಬಳಲೆ, ದೇವಿಗದ್ದೆ, ಉಳವರೆ ವ್ಯಾಪ್ತಿಯ ಎಲ್ಲಾ ಭಾಗಗಳಲ್ಲಿ ಏ.8 ರ ಬೆಳಗ್ಗೆ 10 ಗಂಟೆಯಿಂದ ಸಂಜೆ 5 ಗಂಟೆಯವರೆಗೆ ವಿದ್ಯುತ್ ವ್ಯತ್ಯಯವಾಗಲಿದ್ದು, ಗ್ರಾಹಕರು ಸಹಕರಿಸುವಂತೆ ಕುಮಟಾ ಹೆಸ್ಕಾಂ, ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರು(ವಿ) ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೊನ್ನಾವರ ತಾಲೂಕಿನ ಗೇರುಸೊಪ್ಪ 33/11 ಕೆ.ವಿ ವಿದ್ಯುತ್ ವಿತರಣಾ ಕೇಂದ್ರದ 33 ಕೆವಿ ಮಾರ್ಗ ನಿರ್ವಹಣಾ ಕೆಲಸ ಇರುವುದರಿಂದ ಮಾಗೋಡ, ಉಪ್ಪೋಣಿ ರೈಟ್, ಲೇಫ್ಟ್ ಹಾಗೂ ಕಾಲೋನಿ ಫೀಡರಗಳ ವ್ಯಾಪ್ತಿಗಳಲ್ಲಿ ಹಾಗೂ ಹೊನ್ನಾವರ ಉಪ ವಿಭಾಗದ ಗ್ರಾಮೀಣ ಶಾಖೆಯ ಸಾಲ್ಕೋಡ ಹಡಿನಬಾಳ, ಕಡ್ಲೆ ಮತ್ತು ಸುಬ್ರಮಣ್ಯ ಫೀಡರ್‌ನ 11 ಕೆ.ವಿ ವ್ಯಾಪ್ತಿಯಲ್ಲಿ ಏ.8 ರಂದು ಬೆಳಗ್ಗೆ 10 ಗಂಟೆಯಿಂದ ಸಂಜೆ 4 ಗಂಟೆಯವರೆಗೆ ವಿದ್ಯುತ್ ವ್ಯತ್ಯಯವಾಗಲಿದ್ದು, ಗ್ರಾಹಕರು ಸಹಕರಿಸುವಂತೆ ಹೊನ್ನಾವರ ಹೆಸ್ಕಾಂ, ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರು(ವಿ) ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಗುದಗೆ ಆಸ್ಪತ್ರೆಯಲ್ಲಿ ಮಹಿಳೆಯರಿಗೆ ಉಚಿತ ಕ್ಯಾನ್ಸರ್ ತಪಾಸಣೆ ಶಿಬಿರ

# ಮಹಿಳೆಯರು ಆರೋಗ್ಯದ ಕಡೆ ಹೆಚ್ಚು ಗಮನ ಕೊಡಬೇಕು: ಗಂಗಾಬಿಕೆ ಅಕ್ಕ




• ಮಲ್ಲಮ್ಮ ನುಡಿ ವಾರ್ತೆ ಬೀದರ

ನಗರದ ಗುದಗೆ ಆಸ್ಪತ್ರೆಯಲ್ಲಿ ಮಹಿಳೆಯರಿಗಾಗಿ ಉಚಿತ ಕ್ಯಾನ್ಸರ್ ತಪಾಸಣೆ ಶಿಬಿರವನ್ನು ಆಯೋಜಿಸಲಾಯಿತು.ಬಸವ ಸೇವಾ ಪ್ರತಿಷ್ಠಾನದ ಅಧ್ಯಕ್ಷೆ ಡಾ.ಗಂಗಾಬಿಕೆ ಅಕ್ಕ ಅವರು ಶಿಬಿರವನ್ನು ಉದ್ಘಾಟಿಸಿ ಮಾತನಾಡಿದರು.

ಈಸಂದರ್ಭದಲ್ಲಿಅವರು,"ಆರೋಗ್ಯ ಕೆಟ್ಟರೆ ಏನು ಮಾಡಲು ಸಾಧ್ಯವಿಲ್ಲ. ಆದ್ದರಿಂದ ಮಹಿಳೆಯರು ತಮ್ಮ ಆರೋಗ್ಯದ ಕಡೆ ಹೆಚ್ಚಿನ ಗಮನ ಹರಿಸಬೇಕು. ಸಂಕೋಚವಿಲ್ಲದೆ ಪದೇಪದೇ ಕ್ಯಾನ್ಸರ್ ತಪಾಸಣೆ ಮಾಡಿಸಿಕೊಳ್ಳುವುದು ಅತ್ಯವಶ್ಯಕ" ಎಂದು ಸಲಹೆ ನೀಡಿದರು.

ಡಾ.ಶಾರದಾ ಗುದಗೆ ಹಾಗೂ ಡಾ. ಸಚಿನ್ ಗುದಗೆ ಅವರು ಮಹಿಳೆಯರಿಗಾಗಿ ಉಚಿತ ಕ್ಯಾನ್ಸರ್ ತಪಾಸಣೆ ಶಿಬಿರವನ್ನು ಏರ್ಪಡಿಸಿದ್ದು, ಕ್ಯಾನ್ಸರ್ ಪೀಡಿತ ಮಹಿಳೆಯರಿಗೆ ಚಿಕಿತ್ಸೆ ಪಡೆಯಲು ಅನುಕೂಲ ಮಾಡಿಕೊಟ್ಟಿರುವುದಕ್ಕೆ ಡಾ. ಗಂಗಾಬಿಕೆ ಅಕ್ಕ ಅವರು ಪ್ರಶಂಸೆ ವ್ಯಕ್ತಪಡಿಸಿದರು.

ಬಿ.ಕೆ.ಸವಿತಾಬಹೆನಜೀ ಮಾತನಾಡಿ, ಇಂದಿನ ದಿನಗಳಲ್ಲಿ ಮಹಿಳೆಯರು ವಿವಿಧ ರೋಗಗಳಿಂದ ಬಳಲುತ್ತಿರುವ ಹಿನ್ನೆಲೆಯಲ್ಲಿ, ಸಮಯಕ್ಕೆ ಸರಿಯಾಗಿ ಆರೋಗ್ಯ ತಪಾಸಣೆ ಮಾಡಿಸಿಕೊಂಡರೆ ರೋಗಗಳನ್ನು ನಿಯಂತ್ರಿಸಬಹುದು ಎಂದು ತಿಳಿಸಿದರು. ಮಹಿಳೆಯರು ಯಾವುದೇ ಕಾರಣಕ್ಕೂ ಕ್ಯಾನ್ಸರ್ ತಪಾಸಣೆ ಮಾಡಿಕೊಳ್ಳಲು ಭಯಪಡದೆ ವೈದ್ಯರನ್ನು ಸಂಪರ್ಕಿಸಬೇಕು ಎಂದು ಹೇಳಿದರು.

ಅಕ್ಕಪಡೆ ಉಸ್ತುವಾರಿ ಶ್ರೈನಿ ಪ್ರದೀಪ ಗುಂಟಿ ಮಾತನಾಡಿ,

ಇಂತಹ ಆರೋಗ್ಯ ತಪಾಸಣೆ ಶಿಬಿರಗಳ ಆಯೋಜನೆ ಕಡಿಮೆ ಇರುವ ಸಂದರ್ಭದಲ್ಲಿ, ಮಹಿಳೆಯರಿಗಾಗಿಯೇ ಉಚಿತವಾಗಿ ಶಿಬಿರ ಹಮ್ಮಿಕೊಂಡಿರುವುದು ಶ್ಲಾಘನೀಯ ಎಂದರು.

ಗುದಗೆ ಆಸ್ಪತ್ರೆಯ ಸ್ತ್ರೀರೋಗ ತಜ್ಞೆ ಡಾ. ಶಾರದಾ ಸಚಿನ್ ಗುದಗೆ ಮಾತನಾಡಿ, ಬಡ ಮಹಿಳೆಯರ ಹಿತದೃಷ್ಟಿಯಿಂದ ಈ ಉಚಿತ ಶಿಬಿರವನ್ನು ಹಮ್ಮಿಕೊಂಡಿದ್ದು, ಪ್ರತಿಯೊಬ್ಬ ಮಹಿಳೆಯೂ ಇದರ ಸದುಪಯೋಗ ಪಡೆಯಬೇಕು ಎಂದು ಹೇಳಿದರು.

ಡಾ.ಶ್ರೀನಿವಾಸ ತೇಜಸ್ವಿ ಆದಾದ ಅವರು ಮಾತನಾಡಿ, ಇತ್ತೀಚೆಗೆ ಮಹಿಳೆಯರಲ್ಲಿ ಸ್ತನ ಕ್ಯಾನ್ಸರ್ ಪ್ರಮಾಣ ಹೆಚ್ಚಾಗುತ್ತಿದ್ದು, ನಾಲ್ಕನೇ ಹಂತದಲ್ಲಿ ಪತ್ತೆಯಾದರೆ ಜೀವಕ್ಕೆ ಅಪಾಯವಾಗುತ್ತದೆ. ಆದ್ದರಿಂದ ಪ್ರಥಮ ಹಂತದಲ್ಲಿಯೇ ತಪಾಸಣೆ ಮಾಡಿಕೊಂಡು ಚಿಕಿತ್ಸೆ ಪಡೆದರೆ ಸಂಪೂರ್ಣ ಗುಣಮುಖರಾಗಲು ಸಾಧ್ಯ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ರೋಟರಿ ಕ್ಲಬ್ ನ್ಯೂ ಸೆಂಚೂರಿ ಅಧ್ಯಕ್ಷ ನಾಗೇಶ ಪಾಟೀಲ್, ರೋಟರಿ ಕ್ಲಬ್ ಆಫ್ ಕ್ವೀನ್ಸ್ ಅಧ್ಯಕ್ಷೆ ಡಾ.ಸುಲೋಚನಾ ಪಾಟೀಲ್, ಇನ್ನರ್‌ವೀಲ್ ಕ್ಲಬ್ ಬೀದರ ಅಧ್ಯಕ್ಷೆ ಸುನೈನಾ ಗುತ್ತಿ, ರೋಟರಿ ಕ್ಲಬ್ ಆಫ್ ಬೀದರ ಸಿಲ್ವರ್ ಸ್ಟಾರ್‌ನ ಆದೀಶ ಆರ್. ವಾಲಿ, ಶಾಂತಾ ಜೈರಾಜ್ ಖಂಡ್ರೆ ಅವರುಗಳೂ ಶಿಬಿರದ ಕುರಿತು ಮಾತನಾಡಿದರು.

ಶಿಬಿರದ ಅಧ್ಯಕ್ಷತೆಯನ್ನು ಗುದಗೆ ಆಸ್ಪತ್ರೆಯ ಅಧ್ಯಕ್ಷರಾದ ಡಾ. ಚಂದ್ರಕಾಂತ್ ಗುದಗೆ ವಹಿಸಿ ಮಾತನಾಡಿ, ಬಡ ಮಹಿಳೆಯರಿಗೆ ಕ್ಯಾನ್ಸರ್ ಚಿಕಿತ್ಸೆ ಒದಗಿಸುವ ಉದ್ದೇಶದಿಂದ ಈ ಉಚಿತ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ. ಕ್ಯಾನ್ಸರ್ ಗಂಭೀರ ಕಾಯಿಲೆಯಾಗಿದ್ದು, ಪ್ರಥಮ ಹಂತದಲ್ಲಿಯೇ ಚಿಕಿತ್ಸೆ ಪಡೆಯುವುದು ಅತ್ಯಗತ್ಯ ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಡಾ. ಸಚಿನ್ ಗುದಗೆ, ಡಾ. ಮಹೇಶ್ ತೊಂಡಾರೆ ಹಾಗೂ ಡಾ. ವಿಶ್ವನಾಥ ಪಾಟೀಲ್ ವೇದಿಕೆ ಮೇಲೆ ಉಪಸ್ಥಿತರಿದ್ದರು. ಶಿಬಿರದಲ್ಲಿ ಗುದಗೆ ಆಸ್ಪತ್ರೆಯ ವೈದ್ಯರು ಹಾಗೂ ಸಿಬ್ಬಂದಿಗಳು ಭಾಗವಹಿಸಿದ್ದರು.

ಶಿಬಿರದಲ್ಲಿ ನೂರಾರು ರೋಗಿಗಳು ಉಚಿತ ತಪಾಸಣೆ ಮಾಡಿಕೊಂಡರು.

# ಒಳ ಮೀಸಲಾತಿ ರೋಸ್ಟರ್ ಪದ್ಧತಿ ಸರಿಪಡಿಸಿ ನೇಮಕಾತಿ ನಡೆಸಿ: ಗುರುಮೂರ್ತಿ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ರಾಜ್ಯ ಸರ್ಕಾರ ನೇಮಕ ಮಾಡಲು ಉದ್ದೇಶಿಸಿರುವ 56432 ಹುದ್ದೆಗಳನ್ನು ಕಡ್ಡಾಯವಾಗಿ ಒಳ ಮೀಸಲಾತಿ ಅಡಿಯಲ್ಲಿ ರೋಸ್ಟರ್ ಪದ್ಧತಿಯನ್ನು ಸರಿಪಡಿಸಿ ನೇಮಕಾತಿಯನ್ನು ನಡೆಸಬೇಕೆಂದು ಪ್ರೊಫೆಸರ್ ಬಿ ಕೃಷ್ಣಪ್ಪ ಸ್ಥಾಪಿತ ಕರ್ನಾಟಕ ದಲಿತ ಸಂಘರ್ಷ ಸಮಿತಿಯ ರಾಜ್ಯ ಸಂಚಾಲಕರಾದ ಎಂ ಗುರುಮೂರ್ತಿ ಆಗ್ರಹಿಸಿದರು.

ಅವರು ಇಂದು ನಗರದ ಪತ್ರಿಕಾ ಭವನದಲ್ಲಿ ಪತ್ರಕರ್ತರನ್ನು ಉದ್ದೇಶಿಸಿ ಮಾತನಾಡಿ, ನಿವೃತ್ತ ನ್ಯಾಯಮೂರ್ತಿ ಡಿಎಸ್‌ಎಸ್ ನಾಗಮೋಹನ್ ದಾಸ್ ಆಯೋಗವು ಶಿಫಾರಸ್ಸು ಮಾಡಿದ ಪ್ರಕಾರ ಪರಿಶಿಷ್ಟ ಜಾತಿ ಅಲೆಮಾರಿ ಅರೆ ಅಲೆಮಾರಿ ಜಾತಿಗಳಿಗೆ ಪರಿಶಿಷ್ಟ ಜಾತಿಯ ಶೇಕಡಾ 17ರ ಪೈಕಿ ಅಲೆಮಾರಿಗಳಿಗೆ ಪ್ರತ್ಯೇಕವಾಗಿ ಒಂದು ಮೀಸಲಾತಿ ಕಲ್ಪಿಸಿ ನೂತನ ಆದೇಶವನ್ನು ಹೊರಡಿಸಬೇಕು ಈ ಒಳ ಮೀಸಲಾತಿಯ ಕುರಿತು ಯಾವುದೇ ಅವಸರ ಮತ್ತು ಅವಘಡಕ್ಕೆ ಎಡೆ ಮಾಡಿಕೊಡದೆ ಉಪಚುನಾವಣೆ ಮುಗಿದ ನಂತರ ಒಳ ಮೀಸಲಾತಿ ಮತ್ತು ರೋಸ್ಟರ್ ಪದ್ಧತಿಯನ್ನು ಸರಿಪಡಿಸಿ ನೇಮಕಾತಿಯನ್ನು ನಡೆಸಿ ಪರಿಶಿಷ್ಟ ಜಾತಿಯ ಎಲ್ಲಾ ಒಳಪಂಗಡಿಗಳಿಗೂ ಅನುಕೂಲ ಮಾಡಿಕೊಡಬೇಕೆಂದರು.



ಡಾಕ್ಟರ್ ಬಾಬಾ ಸಾಹೇಬ್ ಬಿ ಆರ್ ಅಂಬೇಡ್ಕರ್ ಅವರ ಆಶಯದಂತೆ ಸಾಮಾಜಿಕ ನ್ಯಾಯದೊಂದಿಗೆ ನಿರುದ್ಯೋಗ ನಿವಾರಿಸಿ ಎಂಬ ಧ್ಯೇಯ ವಾಕ್ಯವನ್ನು ಮುಂದಿಟ್ಟುಕೊಂಡು ಎಲ್ಲರಿಗೂ ಸಾಮಾಜಿಕ ನ್ಯಾಯವನ್ನು ಕಲ್ಪಿಸಿ ಕೊಡಬೇಕು, ಆದರೆ ಬೊಮ್ಮಾಯಿ ನೇತೃತ್ವದ ಬಿಜೆಪಿ ಸರ್ಕಾರ ಪರಿಶಿಷ್ಟ ಜಾತಿಯವರಿಗೆ ಶೇಕಡ 5ರಷ್ಟು ಪರಿಶಿಷ್ಟ ಪಂಗಡಕ್ಕೆ ಶೇಕಡಾ 4ರಷ್ಟು ಮೀಸಲಾತಿಯನ್ನು ಹೆಚ್ಚಿಸಿ ಮೂಗಿಗೆ ತುಪ್ಪ ಸವರುವ ಕೆಲಸವನ್ನು ಮಾಡಿದರು, ಈ ಹೆಚ್ಚಾದ ಮೀಸಲಾತಿಯು ಸುಪ್ರೀಂ ಕೋರ್ಟ್ ಆದೇಶದ ಪ್ರಕಾರ ಶೇಕಡ 50 ಅನ್ನು ಮೀರಿ ಹೋಗಿರುತ್ತದೆ ಆದರೂ ಸಹ ಈ ಮೀಸಲಾತಿಯನ್ನು ಸಂವಿಧಾನದ ಶೆಡ್ಯೂಲ್ 9ರ ಅಡಿಯಲ್ಲಿ ತಂದಿದ್ದರೆ ಮೀಸಲಾತಿಯನ್ನು ಜಾರಿಗೊಳಿಸಬಹುದಿತ್ತು, ಆದ–ರೆ ಬಿಜೆಪಿ ಸರ್ಕಾರ ಆ ಕೆಲಸ ಮಾಡದೆ ಪರಿಶಿಷ್ಟರ ಮೂಗಿಗೆ ತುಪ್ಪ ಸವರಿ ಅನ್ಯಾಯ ಮಾಡಿದೆ ಎಂದು ಕಿಡಿಕಾರಿದರು.

ಈಗಲೂ ಕಾಲ ಮಿಂಚಿಲ್ಲ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಸರ್ವ ಪಕ್ಷದ ಸಂಸದರ ನಿಯೋಗದೊಂದಿಗೆ ಪ್ರಧಾನಿಯನ್ನು ಭೇಟಿ ಮಾಡಿ ಶೆಡ್ಯೂಲ್ 9ರಲ್ಲಿ ಸೇರಿಸಲು ಒತ್ತಾಯಿಸಿ ಪರಿಶಿಷ್ಟ ಜಾತಿ ಮತ್ತು ಪಂಗಡಕ್ಕೆ ನ್ಯಾಯ ದೊರೆಕಿಸಿ ಕೊಡಬೇಕೆಂದು ಆಗ್ರಹಿಸಿದರು.

ಈ ಪತ್ರಿಕಾಗೋಷ್ಠಿಯಲ್ಲಿ ಶ್ರೀಧರ ಕಲಿ ವೀರ ಹನುಮಂತಪ್ಪ ಕಾಕರಗಲ್ ಬಳ್ಳಾರಿ ಜಿಲ್ಲಾ ಸಂಚಾಲಕರಾದ ಗೋವರ್ಧನ್ ಇದ್ದರು.



• ಮಲ್ಲಮ್ಮ ನುಡಿ ವಾರ್ತೆ ಕಾರವಾರ

ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ಅವರ ನಿವಾಸಕ್ಕೆ ಶಿರಸಿ ನಗರಸಭೆ ಪೌರಾಯುಕ್ತ ಪ್ರಕಾಶ ಎಂ ಚನ್ನಪ್ಪನವರ ಹಾಗೂ ಸಿಬ್ಬಂದಿಗಳು ಮತ್ತು ತಹಶೀಲ್ದಾರ ಕಚೇರಿ ಸಿಬ್ಬಂದಿಗಳು ಸೋಮವಾರ ಭೇಟಿ ನೀಡಿ ಸ್ವಯಂ ಮನೆ ಗಣತಿ ಮಾಡಲಾಯಿತು.

# ಬೆಂಬಲ ಬೆಲೆ ಗುಣಮಟ್ಟದ ಕುಸುಬೆ ಖರೀದಿ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

2026ನೇ ಸಾಲಿನಲ್ಲಿ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿ ಕುಸುಬೆ ಖರೀದಿಸಲು 2026ರ ಏಪ್ರಿಲ್ 4 ರಂದು ರಾಜ್ಯ ಸರ್ಕಾರವು ಆದೇಶ ಹೊರಡಿಸಿದ್ದು, ಜಿಲ್ಲೆಯ ರೈತ ಭಾಂದವರು ಬೆಂಬಲ ಬೆಲೆ ಯೋಜನೆಯ ಸದುಪಯೋಗ ಪಡೆದುಕೊಂಡು ತಮ್ಮ ಸಮೀಪದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ (PACS) /TAPCMS ಖರೀದಿ ಕೇಂದ್ರಗಳಿಗೆ ಭೇಟಿ ನೀಡಿ ತಾವು ಬೆಳೆದ ಎಫ್.ಎ.ಕ್ಯೂ ಗುಣಮಟ್ಟದ ಕುಸುಬೆಯನ್ನು ನಿಗದಿತ ಅವಧಿಯಲ್ಲಿ ಮಾರಾಟಕ್ಕೆ ನೋಂದಾಯಿಸಿಕೊಂಡು ಮಾರಾಟ ಮಾಡಬೇಕೆಂದು ಕಲಬುರಗಿ ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್ ಅವರು ತಿಳಿಸಿದ್ದಾರೆ.

ದಿನಾಂಕ: 22–06–2026 ರವರೆಗೆ ರೈತರ ನೋಂದಣಿ ಕಾರ್ಯವನ್ನು ಹಾಗೂ ದಿನಾಂಕ: 02–07–2026ರವರೆಗೆ ಖರೀದಿ ಪ್ರಕ್ರಿಯೆಯನ್ನು ಕೈಗೊಳ್ಳಲಾಗುತ್ತಿದೆ. ನೋಂದಣಿ ಕಾರ್ಯದ ಜೊತೆಗೆ ಖರೀದಿ ಪ್ರಕ್ರಿಯೆಯು ಸಹ ಕೈಗೊಳ್ಳಲಾಗುತ್ತಿದೆ. ರೈತರಿಂದ ಖರೀದಿಸಿದ ಉತ್ಪನ್ನದ ಮೌಲ್ಯವನ್ನು ಡಿ.ಬಿ.ಟಿ. (ಆಃಖ) ಪೋರ್ಟಲ್ ಮೂಲಕ ಪಾವತಿಸಲಾಗುತ್ತದೆ. ಕಲಬುರಗಿ ಜಿಲ್ಲೆಯಲ್ಲಿ ಬೆಂಬಲ ಬೆಲೆ ಯೋಜನೆಯಡಿ ಎಫ್.ಎ.ಕ್ಯೂ. ಗುಣಮಟ್ಟದ ಕುಸುಬೆ ಖರೀದಿಸಲು ಕರ್ನಾಟಕ ಸರ್ಕಾರವು ಸಹಕಾರ ಎಣ್ಣೆ ಬೀಜ ಬೆಳೆಗಾರರ ಮಹಾಮಂಡಳ ನಿಯಮಿತ (ಏಔಈ) ಸಂಸ್ಥೆಯನ್ನು ರಾಜ್ಯ ಖರೀದಿ ಸಂಸ್ಥೆಯನ್ನಾಗಿ ನೇಮಿಸಿದೆ.

### ಹಳೆಂಬರ ವೀರಭದ್ರಪ್ಪನವರು ಪವಾಡಗಳ ಮಹಾಪುರುಷರು


# ಶರಣ ಸಂಸ್ಕೃತಿಯ ನೆಲದಲ್ಲಿ ಅರಳಿದ ಮಹಾಸಂತನ ಕಥೆ

ಬೀದರ ಜಿಲ್ಲೆ ಶರಣ ಸಂಸ್ಕೃತಿಗೆ ಹೆಸರುವಾಸಿಯಾದ ಪವಿತ್ರ ನೆಲವಾಗಿದೆ. ಈ ಜಿಲ್ಲೆಯಲ್ಲಿ ಅನೇಕ ಋಷಿಮುನಿಗಳು, ಸಾಧು ಸಂತರು ಜನ್ಮ ತಾಳಿದ್ದು ಜನರಿಗೆ ಧಾರ್ಮಿಕ ಮಾರ್ಗದರ್ಶನ ನೀಡಿದವರಾಗಿ ಪ್ರಸಿದ್ಧರಾಗಿದ್ದಾರೆ. ಅಂತಹ ಮಹನೀಯರ ಸಾಲಿನಲ್ಲಿ ಹಳೆಂಬರ ಗ್ರಾಮದ ಪವಿತ್ರ ಸಂತ ವೀರಭದ್ರಪ್ಪರು ಪ್ರಮುಖ ಸ್ಥಾನ ಪಡೆದಿದ್ದಾರೆ.

ಬೀದರ ತಾಲೂಕಿನ ಹಳೆಂಬರ ಗ್ರಾಮದಲ್ಲಿ ಶಿವಶೇಟ್ಟಿ ಮನೆತನದಲ್ಲಿ ತಂದೆ ಜೀತಪ್ಪ ಹಾಗೂ ತಾಯಿ ಗ್ಯಾನಮ್ಮ ದಂಪತಿಗಳ ಉದರದಲ್ಲಿ ಕ್ರಿ.ಶ. 1876–77ರ ಸುಮಾರಿಗೆ ವೀರಭದ್ರಪ್ಪರು ಜನ್ಮ ತಾಳಿದರೆಂದು ಅಂದಿನ ಹಿರಿಯರು ಹೇಳಿದ ಮಾತನ್ನು ಇಂದಿನ ಗ್ರಾಮದ ಹಿರಿಯ ಜೀವಿಗಳು ಹೇಳುತ್ತಾರೆ. ಗ್ರಾಮದ ಗಂಗಾಧರ ಮಠದಲ್ಲಿ ವೀರಶೈವ ಲಿಂಗಾಯತ ಸಂಪ್ರದಾಯದ ಪ್ರಕಾರ ಅವರಿಗೆ ಲಿಂಗದೀಕ್ಷೆ ನೀಡಿ ವೀರಭದ್ರಪ್ಪ ಎಂದು ನಾಮಕರಣ ಮಾಡಲಾಯಿತು ಎಂಬ ಮಾಹಿತಿ ದೊರೆಯುತ್ತದೆ. ನಂತರದಲ್ಲಿ ಎಲ್ಲಪ್ಪ ಮುತ್ಯಾನವರು ಅವರ ಅಧ್ಯಾತ್ಮಿಕ ಗುರುಗಳಾಗಿ ಗುರುತಿಸಿಕೊಂಡಿದ್ದರು ಎಂದು ತಿಳಿಯಲಾಗಿದೆ.

ಆ ಕಾಲದಲ್ಲಿ ಈ ಪ್ರದೇಶ ನಿಜಾಮರ ಆಡಳಿತದಲ್ಲಿದ್ದ ಕಾರಣ ವೀರಭದ್ರಪ್ಪರು ತಮ್ಮ ಹುಟ್ಟೂರಾದ ಹಳೆಂಬರದಲ್ಲೇ ಉರ್ದು ಭಾಷೆಯಲ್ಲಿ ನಾಲ್ಕನೇ ತರಗತಿವರೆಗೆ ಶಿಕ್ಷಣ ಪಡೆದರು. ಬಾಲ್ಯದಿಂದಲೇ ಅವರು ಧಾರ್ಮಿಕ ಪ್ರವೃತ್ತಿಯುಳ್ಳವರಾಗಿದ್ದರು. ದಿನವಿಡೀ ತಂದೆ ತಾಯಿ ಹೇಳಿದ ಕೆಲಸಗಳನ್ನು ಮಾಡಿಕೊಂಡು ಸಾಯಂಕಾಲ ಗ್ರಾಮ ಹಿರಿಯರ ಜೊತೆ ಭಜನೆಗಳಲ್ಲಿ ಭಾಗವಹಿಸುವುದು ಅವರನಿತ್ಯದ ರೂಡಿಯಾಗಿತ್ತು. ಊಟಕ್ಕೂ ಲೆಕ್ಕಿಸದೆ ಭಜನೆಯಲ್ಲಿ ತಲ್ಲೀನರಾಗುವುದನ್ನು ಕಂಡ ತಂದೆಯವರು ಮನೆಯ ದನಕರುಗಳನ್ನು ಕಾಯುವ ಕೆಲಸವನ್ನು ಅವರಿಗೆ ಒಪ್ಪಿಸಿದರು.





ತಂದೆಯ ಮಾತಿನಂತೆ ದನಕರುಗಳನ್ನು ಅಡವಿಗೆ ಮತ್ತೆ ಅವರ ಸ್ವಂತ ಹೊಲಕ್ಕೆ ಕರೆದೊಯ್ದು ಮೇಯಲು ಬಿಟ್ಟು, ವೀರಭದ್ರಪ್ಪರು ತಾವು ಶ್ರೀಗುರು ದತ್ತನ ಧ್ಯಾನದಲ್ಲಿ ಲೀನರಾಗುತ್ತಿದ್ದರು. ಸಾಯಂಕಾಲ ಮತ್ತೆ ಗ್ರಾಮಕ್ಕೆ ಬಂದು ಭಜನೆಗಳಲ್ಲಿ ಸೇರಿಕೊಳ್ಳುತ್ತಿದ್ದರು. ಒಂದು ಬಾರಿ ತಮ್ಮ ಹೊಲದಲ್ಲಿದ್ದ ಭತ್ತದ ಬೆಳೆಯನ್ನು ದನಕರುಗಳು ಮೇಯ್ದು ಹಾಳುಮಾಡಿದವು. ಇದರಿಂದ ಕೋಪಗೊಂಡ ತಂದೆ ಜೀತಪ್ಪರು ಮಗನಿಗೆ ಬೈದು ಹೊಡೆದರು.

ಆದರೆ ಕೆಲ ದಿನಗಳ ಬಳಿಕ ಹೊಲಕ್ಕೆ ಹೋದಾಗ ಅಲ್ಲಿ ಹಾಳಾಗಿದ್ದ ಭತ್ತದ ಜಾಗದಲ್ಲಿ ಹಸಿರೆದ್ದ ಬೆಳೆ ಕಾಣಿಸಿಕೊಂಡಿತು. ಅಷ್ಟೇ ಅಲ್ಲ, ನಿರೀಕ್ಷೆಗಿಂತಲೂ ಮೂರು ಪಟ್ಟು ಬೆಳೆಯಿತು. ಇದನ್ನು ಕಂಡ ತಂದೆಗೆ ಮಗನಲ್ಲಿರುವ ದಿವ್ಯ ಶಕ್ತಿಯ ಅರಿವು ಆಗತೊಡಗಿತು.

ವೀರಭದ್ರಪ್ಪರು ಸದಾ ಧ್ಯಾನದಲ್ಲಿ ತಲ್ಲೀನರಾಗುತ್ತಿರುವುದನ್ನು ಕಂಡ ತಂದೆ, ಮನೆ ಕೆಲಸಗಳಲ್ಲಿ ಆಸಕ್ತಿ ಮೂಡಿಸಲು ಅವರ ವಿವಾಹ ಮಾಡಬೇಕೆಂದು ನಿರ್ಧರಿಸಿದರು. ಪಕ್ಕದ ರಾಜನಾಳ್ ಗ್ರಾಮದಲ್ಲಿ ತಾಯಮ್ಮ ಎಂಬ ಕನ್ನೆಯನ್ನು ನೋಡಿ ವಿವಾಹ ಮಾಡಿಸಿದರು. ಆದರೆ ವಿವಾಹದ ನಂತರವೂ ವೀರಭದ್ರಪ್ಪರು ಧ್ಯಾನ ಮತ್ತು ಭಕ್ತಿಯಲ್ಲಿ ಇನ್ನಷ್ಟು ತಲ್ಲೀನರಾದರು. ತಾಯಮ್ಮ ಕೂಡ ಪತಿಗೆ ತಕ್ಕ ಸತಿಯಾಗಿ ಅವರ ಧಾರ್ಮಿಕ ಜೀವನಕ್ಕೆ ಬೆಂಬಲವಾಗಿ ನಿಂತರು.

ಪವಾಡಗಳಿಂದ ಜನರಲ್ಲಿ ನಂಬಿಕೆ

ಒಂದು ದಿನ ಜೀತಪ್ಪರು ಮನೆ ಕೆಲಸಕ್ಕಾಗಿ ಹೊರಟಾಗ ಜೋಳದ ಹೊಲವನ್ನು ನೋಡಿಕೊಳ್ಳಲು ಮಗನಿಗೆ ಹೇಳಿದರು. ಆದರೆ ಆ ವೇಳೆಗೆ ಹಕ್ಕಿಗಳ ಗುಂಪು ಬಂದು ಜೋಳದ ತೆನೆಗಳನ್ನು ತಿನ್ನತೊಡಗಿದವು. ಅದನ್ನು ಕಂಡ ವೀರಭದ್ರಪ್ಪರು ಅವುಗಳನ್ನು ಓಡಿಸುವ ಬದಲು ಮಣ್ಣಿನ ಮಡಿಕೆಯಲ್ಲಿ ನೀರು ಇಟ್ಟು ಹಕ್ಕಿಗಳಿಗೆ ಕುಡಿಸಿದರು. ಹಕ್ಕಿಗಳು ಹೊಟ್ಟೆ ತುಂಬ ಜೋಳ ತಿನ್ನಿ ಹಾರಿ ಹೋದವು.ನಂತರ ಹೊಲಕ್ಕೆ ಬಂದ ಜೀತಪ್ಪರು ಜೋಳದ ತೆನೆಗಳು ಬರಡಾಗಿರುವುದನ್ನು ನೋಡಿ ಕಳವಳಪಟ್ಟರು. ಆದರೆ ಜೋಳವನ್ನು ಕಟಾವು ಮಾಡಿದಾಗ ನಿರೀಕ್ಷೆಗಿಂತಲೂ ಹೆಚ್ಚಿನ ರಾಶಿ ದೊರೆಯಿತು. ಈ ಘಟನೆಗಳಿಂದ ವೀರಭದ್ರಪ್ಪರ ದಿವ್ಯ ಶಕ್ತಿ ಗ್ರಾಮಸ್ಥರಲ್ಲಿ ಚರ್ಚೆಯಾಗತೆ–ೂಡಗಿತು. ಅವರ ಪವಾಡಗಳ ಸುದ್ದಿ ಸುತ್ತಮುತ್ತಲಿನ ಗ್ರಾಮಗಳಿಗೆ ಹರಡಿತು. ಹೀಗಾಗಿ ಹಳೆಂಬರ ಗ್ರಾಮಕ್ಕೆ ಭಕ್ತರ ಪ್ರವಾಹವೇ ಹರಿದುಬರತೊಡಗಿತು.

ವೀರಭದ್ರಪ್ಪರು ಗಾಯಮುಖದಲ್ಲಿ ಹುಲಿಯ ದರ್ಶನ ಪಡೆದರು ಎಂದು ಜನ ಮಾತಾಡಿಕೊಳ್ಳುತ್ತಾರೆ. ಮೈಲಾರ ಮಲ್ಲಣ ದರ್ಶನ ಪಡೆದ ನಂತರ ಬಾಳೂರು ಗ್ರಾಮದಲ್ಲಿ ನಾಲ್ಕು ಐದು ತಿಂಗಳು ಅನುಷ್ಠಾನ ಗೈದರು ಎನ್ನಲಾಗುತ್ತದೆ. ಧಾರ್ಮಿಕ ಕ್ಷೇತ್ರವಾದ ಪಾಪನಾಶ ಹಾಗೂ ನಿಡೋದಾ ಗ್ರಾಮಗಳಲ್ಲಿ ಕೂಡ ಅವರು ತಪಸ್ಸು ನಡೆಸಿದರು ಎಂಬ ಮಾತುಗಳು ಕೇಳಿಬರುತ್ತವೆ.

ಜನರಿಗಾಗಿ ಜೀವ ಸಮರ್ಪಿಸಿದ ಪವಾಡ ಪುರುಷ

ಕ್ರಿ.ಶ. 1946–47ರ ಅವಧಿಯಲ್ಲಿ ಹಳೆಂಬರ ಗ್ರಾಮದಲ್ಲಿ ಗಡ್ಡಿ ರೋಗ ಹರಡಿ ಹಲವರು ಪ್ರಾಣ ಕಳೆದುಕೊಳ್ಳುತ್ತಿದ್ದರು. ಆ ಸಮಯದಲ್ಲಿ ವೀರಭದ್ರಪ್ಪರು ಬೇರೆ ಕಡೆ ತಪಸ್ಸಿನಲ್ಲಿ ನಿರತರಾಗಿದ್ದರು. ಗ್ರಾಮದ ಜನರು ಅವರ ಬಳಿ ಹೋಗಿ ಈ ರೋಗದಿಂದ ನಮ್ಮನ್ನು ಕಾಪಾಡಿ ಎಂದು ಬೇಡಿಕೊಂಡರು.



ಆಗ ವೀರಭದ್ರಪ್ಪರು ನಿಮಗೆ ಏನೂ ಆಗುವುದಿಲ್ಲ, ನೀವು ಸುಖವಾಗಿರಿ ಎಂದು ಆಶೀರ್ವದಿಸಿ, ಈ ರೋಗ ಊರಿಗೆ ಬಾರದಿರಲಿ, ಬಂದರೆ ನನಗೆ ಬರಲಿ ಎಂದು ಶಿವನಲ್ಲಿ ಪ್ರಾರ್ಥಿಸಿದರು. ಕೆಲವು ದಿನಗಳ ನಂತರ ಅವರಿಗೆ ತೊಡೆಯ ಸಂದಿಯಲ್ಲಿ ಗಡ್ಡೆ ಉಂಟಾಗಿ ದಿನೇ ದಿನೇ ಹೆಚ್ಚಾಗತೊಡಗಿತು.ಈ ಬೇನೆಯಿಂದ ತಮ್ಮ ಜೀವನ ಹೆಚ್ಚು ಕಾಲ ಉಳಿಯುವುದಿಲ್ಲ ಎಂಬುದು ಅವರಿಗೆ ತಿಳಿಯಿತು. ನಂತರ ಅವರನ್ನು ಹಳೆಂಬರ ಗ್ರಾಮಕ್ಕೆ ಕ–ರೆತಂದು, ಕ್ರಿ.ಶ. 1948ರ ಸುಮಾರಿಗೆ ಗುರುವಾರದಂದು ಅವರು ಲಿಂಗೈಕ್ಯರಾದರೆಂದು ಹಿರಿಯರು ಹೇಳುತ್ತಾರೆ.ಇಂದಿಗೂ ಭಕ್ತರ ನಂಬಿಕೆಯ ಕೇಂದ್ರವಾದ ದೇವಾಲಯ,

ವೀರಭದ್ರಪ್ಪರ ಪಾರ್ಥಿವ ಶರೀರವನ್ನು ತಮ್ಮ ಊರಿಗೆ ಕೊಂಡೊಯ್ಯಬೇಕೆಂದು ಬಾಳೂರು ಸೇರಿದಂತೆ ಸುತ್ತಮುತ್ತಲಿನ ಗ್ರಾಮಸ್ಥರು ಮನವಿ ಮಾಡಿದರು. ಆದರೆ ಕೊನೆಯಲ್ಲಿ ಭಕ್ತರು ತೀರ್ಮಾನಿಸಿ ಹುಟ್ಟೂರಾದ ಹಳೆಂಬರ ಗ್ರಾಮದಲ್ಲೇ ಅಂತ್ಯಕ್ರಿಯೆ ನೆರವೇರಿಸಿದರು.ಇಂದು ಕೂಡ ಹಳೆಂಬರ ಗ್ರಾಮದಲ್ಲಿ ಪ್ರತಿವರ್ಷ ಏಪ್ರಿಲ್ ತಿಂಗಳಲ್ಲಿ ಭವ್ಯ ಜಾತ್ರೆ ನಡೆಯುತ್ತದೆ. ಸಾವಿರಾರು ಭಕ್ತರು ಆಗಮಿಸಿ ಶ್ರೀಗಳ ದರ್ಶನ ಪಡೆದುಕೊಳ್ಳುತ್ತಾರೆ. ಭಕ್ತರಿಗೆ ಹುಗ್ಗಿ, ಅನ್ನ, ಸಾಂಬಾರ್ ಪ್ರಸಾದ ವಿತರಣೆ ಮಾಡುವ ಪರಂಪರೆ ಮುಂದುವರಿದಿದೆ ಎಂದು ಮರಿಯಪ್ಪಾ ಹೊಸಮನಿ ಬರೆದಿರುವ ಬೀದರ್ ತಾಲೂಕಿನ ಮಹಾ ಸಂತರು ಎನ್ನುವ ಪುಸ್ತಕದ ಮಾಹಿತಿ ಅರಿತು ಈ ಲೇಖನವನ್ನು ಬರೆಯಲಾಗಿದೆ.

ವೀರಭದ್ರಪ್ಪರು ಜೀವಂತವಾಗಿದ್ದಾಗಲೇ ಧೂಳಯ್ಯ ಮುತ್ಯರಿಗೆ ದೀಕ್ಷೆ ನೀಡಿದ್ದರು ಎಂದು ಹೇಳಲಾಗುತ್ತದೆ. ನಂತರ ಮಂದಿರದ ಬೆಳವಣಿಗೆಯಲ್ಲಿ ಮುರಳಿಧರ ಮಹಾರಾಜರು ಮಹತ್ತರ ಪಾತ್ರ ವಹಿಸಿದರು. ಅವರ ನಂತರ ಬಾಬುರಾವ ಗುರುಜಿ ಮಂದಿರದ ಜವಾಬ್ದಾರಿಯನ್ನು ಹೊತ್ತುಕೊಂಡು ಶ್ರೀಗಳ ತತ್ವ, ಸಪ್ತಾಹದ ಸಿದ್ಧಾಂತ ಮತ್ತು ಪವಾಡಗಳ ಕಥೆಯನ್ನು ದೇಶದ ವಿವಿಧ ಭಾಗಗಳಿಗೆ ಪರಿಚಯಿಸುತ್ತಿದ್ದಾರೆ ಎಂದು ಭಕ್ತರು ನಂಬಿಕೆ ವ್ಯಕ್ತಪಡಿಸುತ್ತಾರೆ.



ಶರಣ ಸಂಸ್ಕೃತಿಯ ನೆಲವಾದ ಬೀದರ ಜಿಲ್ಲೆಗೆ ಕೀರ್ತಿ ತಂದ ಪವಾಡ ಪುರುಷ ವೀರಭದ್ರಪ್ಪರ ಜೀವನ ಕಥೆ ಇಂದಿಗೂ ಭಕ್ತರಲ್ಲಿ ಭಕ್ತಿ ಮತ್ತು ನಂಬಿಕೆಯನ್ನು ಉಂಟುಮಾಡುತ್ತಿದೆ. ಅವರ ಪವಿತ್ರ ಸ್ಮರಣೆ ಹಳೆಂಬರ ಗ್ರಾಮವನ್ನು ಧಾರ್ಮಿಕ ಕ್ಷೇತ್ರವಾಗಿ ಗುರುತಿಸುವಂತೆ ಮಾಡಿದೆ.

**ಚಂದ್ರಕಾಂತ ಹಳ್ಳಿಖೇಡಕರ್**

# ರಸ್ತೆ ಸಂಚಾರಿ ನಿಯಮ ಉಲ್ಲಂಘನೆ ಮಾಡಿದರೆ ಭಾರಿ ದಂಡ: ಎಚ್ಚರಿಕೆ



• ಮಲ್ಲಮ್ಮ ನುಡಿ ವಾರ್ತೆ, ಗುರುಮಠಕಲ್

ರಸ್ತೆಸಂಚಾರನಿಯಮಗಳನ್ನುಉಲ್ಲಂಘಿಸುವವರ ವಿರುದ್ಧ ಸರ್ಕಾರ ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳುತ್ತಿದೆ. ವಾಹನಸವಾರರುನಿಯಮಗಳನ್ನು ಪಾಲಿಸದೇ ಇದ್ದರೆ ಭಾರೀ ದಂಡವನ್ನು ವಿಧಿಸಲಾಗುತ್ತದೆ ಎಂದು ಗುರುಮಠಕಲ್ ಪಿ ಐ ವೀರಣ್ಣ ದೊಡಮನಿ ಮಂಗಳವಾರ ತಿಳಿಸಿದ್ದಾರೆ.

ಹೆಲ್ಮೆಟ್ ಧರಿಸದೇ ದ್ವಿಚಕ್ರ ವಾಹನ ಚಲಾಯಿಸಿದರೆ ದಂಡ, ಸೀಟ್ ಬೆಲ್ಟ್ ಹಾಕದೇ ಕಾರು ಚಲಾಯಿಸಿದರೆ ದಂಡ ವಿಧಿಸಲಾಗುತ್ತದೆ. ಮದ್ಯಪಾನ ಮಾಡಿ ವಾಹನ ಚಾಲನೆ ಮಾಡಿದರೆ ಇನ್ನಷ್ಟು ಕಠಿಣ ಶಿಕ್ಷೆ ಹಾಗೂ ಹೆಚ್ಚಿನ ದಂಡ ಎದುರಿಸಬೇಕಾಗುತ್ತದೆ.

ಅತಿವೇಗದಲ್ಲಿ ವಾಹನ ಚಲಾಯಿಸುವುದು, ಅಪ್ರಾಪ್ತರಿಂದ ವಾಹನ ಚಾಲನೆ ಮಾಡಿದರೆ ಪೋಷಕರಿಗೆ ದಂಡ ವಿಧಿಸಲಾಗುವುದು, ಮೊಬೈಲ್ ಬಳಸಿ ವಾಹನ ಚಾಲನೆ ಮಾಡುವಂತಹ ಅಪಾಯಕಾರಿ ನಡೆಗಳು ಕೂಡ ಗಂಭೀರ ಅಪರಾಧಗಳಾಗಿವೆ. ಇಂತಹ ತಪ್ಪುಗಳಿಗೆ ಸಾವಿರಾರು ರೂಪಾಯಿ ದಂಡ ಹಾಗೂ ಚಾಲನಾ ಪರವಾನಗಿ ಅಮಾನತು ಮಾಡುವ ಸಾಧ್ಯತೆಯೂ ಇದೆ ಎಂದು ಹೇಳಿದರು.

# ಪಿಂಚಣಿ ಅದಾಲತ್

• ಮಲ್ಲಮ್ಮ ನುಡಿ ವಾರ್ತೆ, ಬಳ್ಳಾರಿ

ಕಾರ್ಮಿಕರ ಭವಿಷ್ಯ ನಿಧಿ ಸಂಸ್ಥೆಯ ಬಳ್ಳಾರಿ ಪ್ರಾದೇಶಿಕ ಕಚೇರಿ ವತಿಯಿಂದ ಪಿಂಚಣಿದಾರರ ಕುಂದು ಕೊರತೆ ಆಲಿಸಿ, ಪರಿಹರಿಸಲು ಏಪ್ರಿಲ್ 13 ರಂದು ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 01 ಗಂಟೆಯವರೆಗೆ ನಗರದ ಪ್ರಾದೇಶಿಕ ಕಚೇರಿಯಲ್ಲಿ ಪಿಂಚಣಿ ಅದಾಲತ್ ಕಾರ್ಯಕ್ರಮ ಏರ್ಪಡಿಸಲಾಗಿದೆ.

ಬಳ್ಳಾರಿ, ವಿಜಯನಗರ, ಕೊಪ್ಪಳ, ಚಿತ್ರದುರ್ಗ ಜಿಲ್ಲೆಗಳ ಪಿಂಚಣಿದಾರರು ತಮ್ಮ ಕುಂದುಕೊರತೆಗಳಿದ್ದಲ್ಲಿ ಬಳ್ಳಾರಿ ಪ್ರಾದೇಶಿಕ ಕಚೇರಿಯ ಸಾರ್ವಜನಿಕ ಸಂಪರ್ಕ ಅಧಿಕಾರಿಗೆ ಪತ್ರ ಅಥವಾ ಇ-ಮೇಲ್ ಮೂಲಕ ಪಿ.ಪಿ.ಒ ಸಂಖ್ಯೆ, ವಿಳಾಸ, ದೂರವಾಣಿ, ಮೊಬೈಲ್ ಸಂಖ್ಯೆ ಮತ್ತು ಕುಂದು ಕೊರತೆಯ ಸ್ವರೂಪ ಹಾಗೂ ಇತ್ಯಾದಿಗಳನ್ನು ಅಂಚೆ ಪತ್ರದ ಮೂಲಕ ಏಪ್ರಿಲ್ 10 ರೊಳಗಾಗಿ ತಿಳಿಸಬಹುದು. ಪತ್ರ ಲಕೋಟೆ ಮೇಲೆ ಪಿಂಚಣಿ ಅದಾಲತ್ ಎಂದು ಬರೆಯಬೇಕು.

ಹೆಚ್ಚಿನ ಮಾಹಿತಿಗಾಗಿ ದೂ.08392-268943 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಪ್ರಾದೇಶಿಕ ಕಚೇರಿಯ ಸಹಾಯಕ ಭವಿಷ್ಯ ನಿಧಿ ಆಯುಕ್ತರಾದ ಮಾಲತಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸ್ವಯಂ ಉದ್ಯೋಗಕ್ಕೆ ಪ್ರೋತ್ಸಾಹ



• ಮಲ್ಲಮ್ಮ ನುಡಿ ವಾರ್ತೆ, ಭಾಲ್ಕಿ

ಮಹಿಳೆಯರ ಆರ್ಥಿಕ ಸುಧಾರಣೆಯು ಗ್ರಾಮದ ಅಭಿವೃದ್ಧಿಗೆ ಸಹಕಾರಿಯಾಗಲಿದೆ. ಈ ನಿಟ್ಟಿನಲ್ಲಿ ಸ್ವಯಂ ಉದ್ಯೋಗ ಕೈಗೊಳ್ಳಲು ಪಂಚಾಯಿತಿಯ ವಿವಿಧ ಯೋಜನೆಗಳ ಮೂಲಕ ಪ್ರೋತ್ಸಾಹಿಸಲಿದೆ ಎಂದು ಅಭಿವೃದ್ಧಿ ಅಧಿಕಾರಿ ಗೀತಾ ಪಾಟೀಲ್ ಹೇಳಿದರು.

ತಾಲೂಕಿನ ಅಂಬೆಸಾಂಗವಿ ಗ್ರಾಮ ಪಂಚಾಯಿತಿ ಕಚೇರಿಯಲ್ಲಿ ಮಂಗಳವಾರ ಆಯೋಜಿಸಿದ್ದ ಮಹಿಳಾ ಗ್ರಾಮಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಗ್ರಾಮೀಣ ಮಹಿಳೆಯರ ಸಬಲೀಕರಣಕ್ಕೆ ಸಾಕಷ್ಟು ಯೋಜನೆಗಳಿವೆ. ತರಬೇತಿ, ಆರ್ಥಿಕ ನೆರವು ಹಾಗೂ ಇನ್ನಿತರ ಸೌಲಭ್ಯಗಳು ದೊರೆಯಲಿವೆ. ಸದ್ಬಳಕೆ ಮಾಡಿಕೊಂಡು ಅಭಿವೃದ್ಧಿ ಕಂಡುಕೊಳ್ಳಬಹುದಾಗಿದೆಎಂದರು.

ಮಹಿಳಾ ಗ್ರಾಮ ಸಭೆಯ ಮೂಲಕ ಸಮಸ್ಯೆಗಳ ಬಗ್ಗೆ ಚರ್ಚಿಸಿ ಬಗೆಹರಿಸಲು ಸೂಕ್ತ ಕ್ರಮಕೈಗೊಳ್ಳಲು ಸಾಧ್ಯವಾಗುತ್ತದೆ. ಹಾಗೆಯೇ ಅವರಿಗೆ ಕಲ್ಪಿಸಿಕೊಡಬಹುದಾದ ಸೌಲಭ್ಯಗಳ ಬಗ್ಗೆ ತಿಳಿಸಿ ಜಾಗೃತಿ ಮೂಡಿಸಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ವಿವಿಧ ಸಂಘ ಸಂಸ್ಥೆಯ ಪ್ರಮುಖರು, ಮಹಿಳೆಯರು ಭಾಗವಹಿಸಿದ್ದರು.

# ಅದ್ದೂರಿ ಹಾಲಕೇರಿ ಅನ್ನದಾನೇಶ್ವರ ರಥೋತ್ಸವ



• ಮಲ್ಲಮ್ಮ ನುಡಿ ವಾರ್ತೆ, ಮುದಗಲ್

ಸಮೀಪದ ಕನಸಾವಿ ಗ್ರಾಮದ ಹಾಲಕೇರಿ ಅನ್ನದಾನ ಮಹಾ ಶಿವಯೋಗಿಗಳ 90ನೇ ಜಾತ್ರೆ ನಿಮಿತ್ತ ಮಹಾ ರಥೋತ್ಸವ ಅದ್ದೂರಿಯಿಂದ ಜರುಗಿತು.

ಗ್ರಾಮದಲ್ಲಿ 15 ದಿನಗಳ ಕಾಲ ದೇಗುಲದಲ್ಲಿ ಪುರಾಣ ಪ್ರವಚನಗಳು ಸೇರಿದಂತೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಜರುಗಿದವು. ಕೊನೆಯ ದಿನವಾದ ಭಾನುವಾರ ಅನ್ನದಾನ ಮಹಾಸ್ವಾಮಿಗಳ ಗದ್ದುಗೆಗೆ ವಿಶೇಷ ಪೂಜೆ, ಅಭಿಷೇಕ ಕಾರ್ಯಕ್ರಮ ಜರುಗಿತು. ಮಹಾರಥೋತ್ಸವದಲ್ಲಿ ಮುಪ್ಪಿನ ಬಸವಲಿಂಗ ಸ್ವಾಮೀಜಿ, ನಂದವಾಡಗಿಯ ಚನ್ನಬಸವ ದೇವರು,ಮುಖಂಡರು ಸೇರಿ ಇತರರು ಇದ್ದರು. ಆದಾಪೂರ, ಕೋಮಲಾಪೂರ, ಲೆಕ್ಕಿಹಾಳ, ನಂದವಾಡಗಿ, ಬೆಳ್ಳಿಹಾಳ, ಆಮದಿಹಾಳ, ಕಂದಗಲ್, ಸೋಮಲಾಪುರ ಸೇರಿದಂತೆ ಸಾವಿರಾರು ಭಕ್ತರು ಪಾಲ್ಗೊಂಡಿದ್ದರು.

# ಪ್ಯಾನಲ್ ವಕೀಲರ ನೇಮಕ

ಕಾರವಾರ: ಪಂಚಾಯತ ರಾಜ್ ಸಂಸ್ಥೆಗಳ ವಿರುದ್ಧ ಅಧಿನಿಯಮದ ಯಾವುದೇ ಪ್ರಕರಣ,ನಿಯಮ ಅಥವಾ ಜಿಲ್ಲಾ ಪಂಚಾಯತಿಯ ವಿರುದ್ಧ ವಿವಿಧ ನ್ಯಾಯಾಲಯಗಳಲ್ಲಿ ದಾಖಲಾಗುವ ದಾವೆ/ಮೊಕದ್ದಮೆಗಳಲ್ಲಿ ಪಂಚಾಯತ್ ರಾಜ್ ಸಂಸ್ಥೆಗಳ ಪರವಾಗಿ ವಾದವನ್ನು ಮಂಡಿಸಲು ಜಿಲ್ಲಾ ಪಂಚಾಯತ ಪರವಾಗಿ ದಾಖಲಾಗುವ ದಾವೆ/ ಮೊಕದ್ದಮೆಗಳಲ್ಲಿ ಸಮರ್ಥವಾಗಿ ಜಿಲ್ಲಾ ಪಂಚಾಯತ/ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ ರಾಜ್ ಇಲಾಖೆ ಪರವಾಗಿ ಸಮರ್ಥವಾಗಿ ವಾದ ಮಂಡಿಸಲು, ಆಕ್ಷೇಪಣಾ ಹೇಳಿಕೆಗಳು, ಪ್ರತಿರಕ್ಷಾ ಹೇಳಿಕೆ. ಕಂಡಿಕೆವಾರು ಉತ್ತರಗಳನ್ನು ಸಿದ್ಧಪಡಿಸಲು ಮತ್ತು ಒಟ್ಟಾರೆ ಪ್ರಕರಣಗಳನ್ನು ಯಶಸ್ವಿಯಾಗಿ ನಿರ್ವಹಿಸಿ ಪ್ರಕರಣಗಳು ಜಿಲ್ಲಾ ಪಂಚಾಯತ ಪರವಾಗಿ ಆಗುವಂತೆ ಕ್ರಮ ವಹಿಸಲು ಆಯಾಯ ನ್ಯಾಯಾಲಯಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಹಿರಿಯ ವಕೀಲರನ್ನು ಕಚಿಟಿಜಟ ಠಜಿ ಂಜ- ತಠಛಿಚಿಣಜ ಆಗಿ ನೇಮಿಸಿಕೊಳ್ಳಲು ಅರ್ಹ ಹಿರಿಯ ನ್ಯಾಯವಾದಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಆಸಕ್ತ ನ್ಯಾಯವಾದಿಗಳು ತಮ್ಮ ಅಗತ್ಯ ದಾಖಲೆಗಳೊಂದಿಗೆ ಹಾಗೂ ಸದರಿ ಪತ್ರದೊಂದಿಗೆ ಲಗತ್ತಿಸಿದ ಅರ್ಜಿ ನಮೂನೆಯಲ್ಲಿ ಭರ್ತಿ ಮಾಡಿ ಜಿಲ್ಲಾ ಪಂಚಾಯತ ಕಾರ್ಯಾಲಯಕ್ಕೆ ಏ.24 ರೊಳಗಾಗಿ ಸಲ್ಲಿಸಬಹುದು. ಅರ್ಜಿಯನ್ನು ಜಿಲ್ಲಾ ಪಂಚಾಯತ ವೆಬ್‌ಸೈಟ್ https://zpuk.karnataka.gov.in ನಲ್ಲಿ ಪಡೆಯಬಹುದೆಂದು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಉಚಿತ ಕೋಚಿಂಗ್: ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಕಾರವಾರ

ಅಲ್ಪಸಂಖ್ಯಾತರನಿರ್ದೇಶನಾಲಯದ ಆಯ್ದ ಕಾಲೇಜುಗಳಲ್ಲಿ (CEN-TEROFEXCELLANCE) 2026-27ನೇ ಶೈಕ್ಷಣಿಕ ಸಾಲಿನಿಂದ ವಸತಿಯುತ ಎರಡು ವರ್ಷಗಳ ಪಿ.ಯು.ಸಿ ಶಿಕ್ಷಣದೊಂದಿಗೆ ಓಇಇಖ/ ಖಖಖ-ಎಇಇ/ ಏ-ಅಇಖ /ಖಅಂಖ /ಅಗಇಖ / ಅಂ-ಈಔಗಓಆಂಖಖಔಓ / ಅಐಂಖ ಪರೀಕ್ಷೆಗಳಿಗೆ ಪರೀಕ್ಷಾ ಪೂರ್ವ ಉಚಿತ ಕೋಚಿಂಗ್ ನೀಡಲು ಪ್ರವೇಶಾತಿಗಾಗಿ ಮತೀಯ ಅಲ್ಪಸಂಖ್ಯಾತರ ಸಮುದಾಯದ (ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್ಖ್ ಮತ್ತು ಪಾರ್ಸಿ) ಅರ್ಹ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.ವಿದ್ಯಾರ್ಥಿಗಳುಅರ್ಜಿ ಸಲ್ಲಿಸಲು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಾಲತಾಣ https://dom.karnataka.gov.in/ಮೂಲಕ ಅರ್ಜಿ ಸಲ್ಲಿಸಲು ಏ.21 ಕೊನೆಯ ದಿನವಾಗಿದೆ.ವಿದ್ಯಾರ್ಥಿಗಳು ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಲ್ಪಸಂಖ್ಯಾತ ಕಲ್ಯಾಣ ಇಲಾಖೆ ಕಾರವಾರ ದೂರವಾಣಿ ಸಂಖ್ಯೆ 08382-220336 ಅಥವಾ ತಾಲೂಕು ಮಾಹಿತಿ ಕೇಂದ್ರಗಳಿಗೆ ಕಚೇರಿ ಸಮಯದಲ್ಲಿ ಸಂಪರ್ಕಿಸುವಂತೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಉಚಿತ ಕುರಿ ಸಾಕಾಣಿಕೆ ತರಬೇತಿಗೆ ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಕಾರವಾರ

ಹಳಿಯಾಳದ ಕೆನರಾ ಬ್ಯಾಂಕ್ ದೇಶಪಾಂಡೆ ಆರ್‌ಸೆಟ್ ತರಬೇತಿ ಸಂಸ್ಥೆಯಲ್ಲಿ 18 ರಿಂದ 50 ವಯಸ್ಸಿನ ಗ್ರಾಮೀಣ ಭಾಗದ ನಿರುದ್ಯೋಗ ಯುವಕ ಯುವತಿಯರಿಗಾಗಿ ಏಪ್ರಿಲ್ ತಿಂಗಳಿನಲ್ಲಿ ಕುರಿ ಸಾಕಾಣಿಕೆ ಉಚಿತ ತರಬೇತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ಅಭ್ಯರ್ಥಿಗಳು ತಮ್ಮ ಹೆಸರು, ವಿಳಾಸವನ್ನು ನೋಂದಾಯಿಸಿಕೊಳ್ಳಲು ಏ.15ಕೊನೆಯ ದಿನವಾಗಿದೆ. ತರಬೇತಿ ಅವಧಿಯಲ್ಲಿ ಊಟ ವಸತಿ ಸಂಪೂರ್ಣ ಉಚಿತವಾಗಿರುತ್ತದೆ.ಮೊದಲುಬಂದವರಿಗೆ ಹಾಗೂ ಗ್ರಾಮೀಣ ಭಾಗದವರಿಗೆ ಮೊದಲ ಆದ್ಯತೆ ನೀಡಲಾಗುವುದು. ತರಬೇತಿಯಲ್ಲಿ ಕೌಶಲ್ಯ, ಸಾಧನಾ ಪ್ರೇರಣಾ ತರಬೇತಿ, ಉದ್ಯಮಶೀಲತೆಯ ದಕ್ಷ ಗುಣಗಳು, ಹೊಸ ಉದ್ಯಮದ ಸ್ಥಾಪನೆ ಬಗ್ಗೆ, ಮಾಹಿತಿ ಮಾರುಕಟ್ಟೆ ಸಮೀಕ್ಷೆ, ಮಾರಾಟದ ತಂತ್ರಗಳು, ಉದ್ಯಮಗಳಿಂದ ಅನುಭವ ಹಂಚಿಕೆ, ಕ್ಷೇತ್ರ ಭೇಟಿ, ಸಾಫ್ಟ್ ಸ್ಕಿಲ್ಸ್, ಯೋಗ ತರಬೇತಿ, ಬ್ಯಾಂಕಿನಿಂದ ಸಾಲ ಪಡೆದು ಸ್ವಉದ್ಯೋಗ ಪ್ರಾರಂಭಿಸಲು ಬೇಕಾದ ಜ್ಞಾನ, ಸರ್ಕಾರಿ ಯೋಜನೆಗಳು ಮತ್ತು ಯೋಜನಾ ವರದಿ ತಯಾರಿಕೆ ಇನ್ನಿತರ ಮಾಹಿತಿಗಳನ್ನು ಉಚಿತವಾಗಿ ನೀಡಲಾಗುವುದು.ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 8217236973, 9483485489, 9482188780 ನ್ನು ಸಂಪರ್ಕಿಸಬಹುದು ಎಂದು ಹಳಿಯಾಳ ಕೆನರಾ ಬ್ಯಾಂಕ್ ದೇಶಪಾಂಡೆ ಆರ್‌ಸೆಟ್ ಸಂಸ್ಥೆಯ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಾಮಗಾರಿಗೆ ರೈತರ ಅಡ್ಡಿ ಸಮಸ್ಯೆ ಬಗೆಹರಿಸಿದ ಅಧಿಕಾರಿಗಳು

• ಮಲ್ಲಮ್ಮ ನುಡಿ ವಾರ್ತೆ, ಮುದಗಲ್

ಹುನಗುಂದ ರಾಯಚೂರು ಸಂಪರ್ಕಿಸುವ ರಾಷ್ಟ್ರೀಯ ಹೆದ್ದಾರಿ ಕಾಮಗಾರಿ ವೇಳೆ ಪರಿಹಾರ ಸಿಗಲಿಲ್ಲವೆಂದು ಆಕ್ರೋಶ ವ್ಯಕ್ತಪಡಿಸಿದ ರೈತರು ಕೆಲಸಕ್ಕೆ ಅಡ್ಡಿಪಡಿಸಿದ ಘಟನೆ ಮುದಗಲ್ ಸಮೀಪದಲ್ಲಿ ನಡೆದಿದೆ.

ಜಮೀನುಗಳ ಸಮರ್ಪಕ ಪರಿಹಾರ ನೀಡದ ಹಿನ್ನೆಲೆಯಲ್ಲಿ ಕೆಲ ಭೂಮಾಲಿಕರು ರಸ್ತೆ ನಿರ್ಮಾಣವನ್ನು ತಡೆಯಲು ಮುಂದಾಗಿದ್ದರು.

ಸ್ಥಳಕ್ಕೆ ಆಗಮಿಸಿದ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳು ರೈತರೊಂದಿಗೆ ಮಾತುಕತೆ ನಡೆಸಿ ಸಮಸ್ಯೆ ಆಲಿಸಿದರು. ಅಧಿಕಾರಿಗಳಾದ ಗುರುಸಿದ್ದಯ್ಯ ಹಿರೇಮಠ ರೈತರೊಂದಿಗೆ ಅವರು ಮಾತನಾಡಿ, ಈಗಾಗಲೇ ಅನೇಕ ರೈತರಿಗೆ ಪರಿಹಾರದ ಹಣ ಜಮಾ ಮಾಡಲಾಗಿದೆ. ಕೆಲವರ ಪ್ರಕರಣಗಳಲ್ಲಿ ತಾಂತ್ರಿಕ ಅಡಚಣೆಗಳು ಹಾಗೂ ನ್ಯಾಯಾಲಯದ ದಾವೆಗಳು ಬಾಕಿ ಇರುವುದರಿಂದ ವಿಳಂಬವಾಗಿದ್ದು, ಉಳಿದವರಿಗೆ ಕೂಡ ಶೀಘ್ರದಲ್ಲಿ ಪರಿಹಾರ ನೀಡಲಾಗುವುದು ಎಂದು ಭರವಸೆ ನೀಡಿದರು.

ಯಾವುದೇ ಕಾರಣಕ್ಕೂ ರೈತರಿಗೆ ಅನ್ಯಾಯವಾಗದಂತೆ ಕ್ರಮ ಕೈಗೊಳ್ಳಲಾಗುವುದು ಎಂದು ಅವರು ಸ್ಪಷ್ಟಪಡಿಸಿದರು. ಅಧಿಕಾರಿಗಳ ಭರವಸೆಯಿಂದ ರೈತರು ತಾತ್ಕಾಲಿಕವಾಗಿ ಪ್ರತಿಭಟನೆ ಕೈಬಿಟ್ಟು ಕಾಮಗಾರಿಗೆ ಸಹಕಾರ ನೀಡಿದರು.

ಈ ವೇಳೆ ಮಸ್ಕಿ ಸಿಪಿಐ ಆರ್ ವೈ ಜಳಗೇರಾ ಮುದಗಲ್ ನಾಡತಹಸೀಲ್ದಾರ್ ತುಳಜರಾಮ ಸಿಂಗ್, ಗ್ರಾಮ ಆಡಳಿತಾಧಿಕಾರಿ ದೀಪಿಕಾ ರಾಠೋಡ್, ಪಿಎ□□□ ವೆಂಕಟೇಶ ಮಾಡಗಿರಿ ಹಾಗೂ ಕಾಮಗಾರಿಯನ್ನು ನಿರ್ವಹಿಸುತ್ತಿರುವ ಕಂಪನಿ ಅಧಿಕಾರಿಗಳು ಸೇರಿದಂತೆ ಹಲವರು ಉಪಸ್ಥಿತರಿದ್ದರು.



# ಮಧ್ಯವರ್ತಿ ಕೈಯಲ್ಲಿ ಉಪನೋಂದಣಿ ಕಚೇರಿ: ಸಾರ್ವಜನಿಕರ ಪರದಾಟ

• ಮಲ್ಲಮ್ಮ ನುಡಿವಾರ್ತೆ, ಕೊಪ್ಪಳ



ಜಿಲ್ಲಾ ಕೇಂದ್ರವಾದ ಕೊಪ್ಪಳ ನಗರದಲ್ಲಿರುವ ಉಪನೋಂದಣಿ ಕಾರ್ಯಾಲಯ ಸಂಪೂರ್ಣ ಮಧ್ಯವರ್ತಿಗಳ ಕೈಯಲ್ಲಿ ಸಿಲುಕಿ-ಕೊಂಡಿದ್ದು ಇದರಿಂದ ದಿನ ನಿತ್ಯದ ಕಾರ್ಯಗಳಿಗೆ ಕಚೇರಿಗೆ ಆಗಮಿಸುವ ಸಾರ್ವಜನಿಕರು ಪರದಾಡುವ ಪರಿಸ್ಥಿತಿ ನಿರ್ಮಾಣಗೊಂಡಿರುತ್ತದೆ. ಇದೆಲ್ಲಾ ಗೊತ್ತಿದ್ದರೂ ಸಹಿತ ಕಾರ್ಯಾಲಯದ ಒಳಗಡೆ ನೆಮ್ಮದಿಯಿಂದ ಉಪನಂದನಾಧಿಕಾರಿ ಪ್ರದೀಪ್ ಕುಮಾರ್ ಜಾಣ ಕುರುಡುತನ ಪ್ರದರ್ಶಿಸುತ್ತಿದ್ದಾರೆ ಎಂದು ಸಾರ್ವಜನಿಕರು ಆರೋಪ ಮಾಡಿರುತ್ತಾರೆ.

ಬಿಸಿಲಿನ ಬೇಗೆಯಿಂದ ಕರೆಯಲಕ್ಕೆ ತಮ್ಮ ಕೆಲಸಗಳ ನಿಮಿತ್ತ ಆಗಮಿಸುವ ಸಾರ್ವಜನಿಕರಿಗೆ ಕನಿಷ್ಠಹ ಕುಳಿತುಕೊಳ್ಳಲು ಸಹ ಸರಿಯಾದ ವ್ಯವಸ್ಥೆ ಇಲ್ಲದೆ ಪರದಾಡುವ ದೃಶ್ಯಗಳು ಇಲ್ಲಿ ದಿನನಿತ್ಯದ ಸಹಜ ದೃಶ್ಯಾವಳಿಗಳಾಗಿವೆ.

ಮಧ್ಯವರ್ತಿಗಳ ಕೈಯಲ್ಲಿ ಕಚೇರಿ ಸೀಲುಗಳು

ಸರ್ಕಾರದ ಕೆಲಸ ದೇವರ ಕೆಲಸ ಎಂದು ಕೇವಲ ಮಾತಿಗಷ್ಟೇ ಸೀಮಿತವಾಗಿದ್ದು ಇಲ್ಲಿ ಪವಿತ್ರವಾದ ಸರಕಾರಿ ಕಾರ್ಯಾಲಯದ ಕಚೇರಿ ಸೀಲು ಹಾಗೂ ಉಪ ನೋಂದಣಾಧಿಕಾರಿಗಳ ಸೀನುಗಳು ಅಧಿಕಾರಿಗಳ ಮೇಜಿನ ಮೇಲೆ ಇರದೆ ಸದಾ ಮಧ್ಯವರ್ತಿಗಳ ಕೈಯಲ್ಲಿ ಇರುವುದು ಆಶ್ಚರ್ಯಕರ ಸಂಗತಿಯಾಗಿದ್ದು ಸಾರ್ವಜನಿಕರು ಕಾಯುತ್ತಾ ಇದ್ದರೂ ಸಹ ಮಧ್ಯವರ್ತಿಗಳು ತಮಗೆ ಬೇಕಾದ ಕಡತಗಳಿಗೆ ಮಾತ್ರ ಸೀಲು ಹಾಕಿ ಉಳಿದವರನ್ನು ಕಾಯಿಸುವುದು ಇಲ್ಲಿ ದಿನನಿತ್ಯದ ಕಾಯಕವಾಗಿದೆ. ಸೀಲುಗಳೇ ಮಧ್ಯವರ್ತಿಗಳ ಕೈಯಲ್ಲಿ ಇರೋದು ಗಮನಿಸಿದಾಗ ಕಚೇರಿ ಸರ್ಕಾರದ್ದು ಅಥವಾ ದಲ್ಲಾಳಿಗಳದ್ದು ಎಂಬ ಅನುಮಾನ ಮೂಡುವುದನ್ನು ಸಹಜ.

ಯಾರಾದರೂ ಬಡ ಸಾರ್ವಜನಿಕರು ತಮ್ಮ ಕೆಲಸಕ್ಕಾಗಿ ಕಷ್ಟಗಳನ್ನು ಹೇಳಿಕೊಳ್ಳುತ್ತಿದ್ದರೆ ಇಲ್ಲಿ ಅಧಿಕಾರಿಗಳು ಮಾತ್ರ ತಮಗೆ ಸಂಬಂಧವಿಲ್ಲ ಎಂಬಂತೆ ಅಸಡ್ಡೆಯಿಂದ ಫೋನಿನಲ್ಲಿ ಮಾತನಾಡುವುದು ಅಥವಾ ಕಂಪ್ಯೂಟರ್‌ನಲ್ಲಿ ಮುಳುಗುವುದು ಸಹಜವಾಗಿದ್ದು ಯಾರಾದರೂ ಪ್ರಶ್ನೆ ಕೇಳಿದರೆ ಸಾಕು ಇವಳಗಿನ ಹಿಟ್ಲರ್ ಜಾಗೃತವಾಗಿ ನಿನ್ನ ಕೆಲಸ ಆಗಲ್ಲ ಏನು ಮಾಡಿಕೊಳ್ಳುತ್ತಿ ಮಾಡಿಕೋ ಇಲ್ಲವೇ ನಾಳೆ ಬಾ ನೋಡೋಣ ಎಂಬ ಸಿದ್ದ ಉತ್ತರ ಎದುರಿಸಬೇಕಾದ ಅನಿವಾರ್ಯತೆ ಎಲ್ಲರದ್ದಾಗಿದೆ

ಇನ್ನು ಸಾರ್ವಜನಿಕರು ಕೇವಲ ಅರ್ಜಿ ಸಲ್ಲಿಸಿ ಕುಳಿತರೆ ಸಾಲದು ಅದರ ಬದಲಾಗಿ ಗರಿಗರಿ ನೋಟು ನೀಡಿದಾಗ ಮಾತ್ರ ಕಡತಗಳು ಕಚೇರಿಯ ದಾಖಲಾತಿಗಳತ್ತ ಸಾಗುತ್ತವೆ ಇಲ್ಲವಾದಲ್ಲಿ ಖಚಿತ.

ಇಲ್ಲಿನ ಅಧಿಕಾರಿಗಳು ಗಮನಿಸಬೇಕಾದ ವಿಷಯವೇನೆಂದರೆ ಯಾರಿಗೆ ಆದರೂ ಅಧಿಕಾರ ಶಾಶ್ವತವಲ್ಲ ಸರ್ಕಾರ ನೀಡಿರುವ ಹುದ್ದೆಯನ್ನು ಸರಿಯಾಗಿ ನಿಭಾಯಿಸದೆ ಕಡತಗಳು ಮತ್ತು ಸೀಲುಗಳನ್ನು ಮಧ್ಯವರ್ತಿ ಗಳ ಕೈಯಲ್ಲಿ ಕೊಟ್ಟು ಪಾರದರ್ಶಕ ಆಡಳಿತ ನೀಡಲು ಹೇಗೆ ತಾನೇ ಸಾಧ್ಯ....? ತಮ್ಮ ಅಧಿಕಾರ ಮುಗಿದ ತಕ್ಷಣ ತಾವು ಮಾಡಿದ ತಪ್ಪಿನ ಅರಿವು ತಮಗೆ ಆಗುತ್ತದೆ ಎಂದು ಸಾರ್ವಜನಿಕರು ಇಡಿ ಶಾಪ ಹಾಕುವ ದೃಶ್ಯಗಳು ಇಲ್ಲಿ ಸಾಮಾನ್ಯವಾಗಿದ್ದು ಇದನ್ನೆಲ್ಲ ಗಮನಿಸಿ ಮೇಲಾಧಿಕಾರಿಗಳು ಎಂಬುದನ್ನು ಕಾದು ನೋಡಬೇಕಾಗಿದೆ.

# ಭಿಕ್ಷಾಟನೆ ನಿಷೇಧಿಸಲು ತಹಸಿಲ್ದಾರ್‌ಗೆ ಒತ್ತಾಯ



• ಮಲ್ಲಮ್ಮ ನುಡಿ ವಾರ್ತೆ , ಸಿಂಧನೂರಿ

ಇಂದು ದಲಿತ ವಿದ್ಯಾರ್ಥಿ ಪರಿಷತ್ತು ತಾಲೂಕ ಸಮಿತಿ ಸಿಂಧನೂರ್ ವತಿಯಿಂದ ತಾಲೂಕು *ದಂಡಾಧಿಕಾರಿಗಳಾದ ಅರುಣ ದೇಸಾಯಿ* ಇವರಿಗೆ ಮನವಿ ಸಲ್ಲಿಸಿದ ಮುಖಂಡರು, ಸರ್ಕಾರಗಳು ಹಲವಾರು ಯೋಜನೆಗಳ ಮುಖಾಂತರ ಮಾನವ ಅಭಿವೃದ್ಧಿಯನ್ನು ಉನ್ನತೀಕರಿಸುವ ಪ್ರಯತ್ನವನ್ನು ನಿರಂತರವಾಗಿ ಮಾಡುತ್ತಾ ಬರುತ್ತಿವೆ.

ಆದರೂ ಸಮಾಜದಲ್ಲಿ ಇನ್ನೂವರೆಗೂ ಮಾನವ ಅಭಿವೃದ್ಧಿಯ ಗರಿಷ್ಠತೆ ಸಾಧಿಸಲು ಸಾಧ್ಯವಾಗಿಲ್ಲ ಜೊತೆಗೆ ಕಾನೂನು ಸಮರ್ಪಕವಾಗಿ, ಕಟ್ಟುನಿಟ್ಟಾಗಿ ಪರಿಪಾಲನೆ ಆಗುತ್ತಿಲ್ಲ.

ಆ ಹಿನ್ನೆಲೆಯಲ್ಲಿ ಇಂದು ಭಿಕ್ಷಾಟನೆ ಎನ್ನುವ ಆತಂಕಕಾರಿ ಬೆಳವಣಿಗೆ ಸಮಾಜದಲ್ಲಿ ಮಿತಿಮೀರಿದೆ.

ಕರ್ನಾಟಕ ಭಿಕ್ಷಾಟನೆ ಅಧಿನಿಯಮ 1975 ರಾಜ್ಯದಲ್ಲಿ ಭಿಕ್ಷಾಟನೆಯನ್ನು ಕಾನೂನುಬಾಹಿರಗೊಳಿಸಿದ್ದು , ಸಾರ್ವಜನಿಕ ಸ್ಥಳಗಳಲ್ಲಿ ಭಿಕ್ಷೆ ಬೇಡುವುದನ್ನು ನಿಷೇಧಗೊಳಿಸಿದೆ. ಈ ಕಾಯ್ದೆಯಡಿ ಪೊಲೀಸರು ಭಿಕ್ಷುಕರನ್ನು ಬಂಧಿಸಿ ಪುನರ್ವಸತಿ ಕೇಂದ್ರಗಳಿಗೆ (ನಿರಾಶ್ರಿತರ ಪರಿಹಾರ ಕೇಂದ್ರ) ಕಳುಹಿಸಲು ಅಧಿಕಾರವನ್ನು ಹೊಂದಿದೆ.

ಆದರೆ ಈ ಕಾನೂನು ಸಿಂಧನೂರಿನಲ್ಲಿ ಸಮರ್ಪಕವಾಗಿ ಜಾರಿಯಾಗದಿರುವುದು ತಾಲೂಕ ಆಡಳಿತದ ವೈಫಲ್ಯಕ್ಕೆ ಹಿಡಿದ ಕನ್ನಡಿಯಂತೆ ಕಾಣುತ್ತಿದೆ.

ಯಾಕೆಂದರೆ ಪ್ರತಿನಿತ್ಯ ಸಿಂಧನೂರಿನ ಸಾರ್ವಜನಿಕ ಪ್ರದೇಶಗಳಲ್ಲಿ ನೂರಾರು ಮಕ್ಕಳು, ವೃದ್ಧರು, ಮಹಿಳೆಯರು ನಗರದಲ್ಲಿ ಭಿಕ್ಷಾಟನೆ ಮಾಡುತ್ತಿದ್ದು, ಸಿಂಧನೂರಿನ ಸಾರ್ವಜನಿಕ ಬಸ್ ನಿಲ್ದಾಣದಲ್ಲಿ ಖಾಯಂ ಭಿಕ್ಷುಕರು ಕಾಣಸಿಗುತ್ತಿದ್ದು, ಪ್ರಯಾಣಿಕರು ಮುಜುಗರಕ್ಕೆ ಒಳಪಡುವ ಪರಿಸ್ಥಿತಿಗಳು ನಿರ್ಮಾಣವಾಗಿದೆ.

ಅದರಲ್ಲೂ ಚಿಕ್ಕ ಮಕ್ಕಳು ಪ್ರತಿನಿತ್ಯ ಬೇರೊಂದು ಸ್ಥಳ ಮತ್ತು ಪಟ್ಟಣಗಳಿಂದ ಸಿಂಧನೂರಿಗೆ ಭಿಕ್ಷಾಟನೆಗೆ ಬರುತ್ತಿರುವುದು ನಿರಂತರವಾಗಿ ಕಾಣುತ್ತದೆ.

ಇದರಿಂದಾಗಿ ಮಕ್ಕಳು ಶಾಲೆಯಿಂದ ಹೊರಗುಳಿದಿರುವ ಆತಂಕವು ನಮ್ಮಲ್ಲಿ ಕಾಡುತ್ತಿದೆ. ಆದ್ದರಿಂದಾಗಿ ನಗರದಲ್ಲಿ ಭಿಕ್ಷಾಟನೆ ಮಾಡುವ ಮಹಿಳೆಯರಿಗೆ, ವೃದ್ಧರಿಗೆ ಮತ್ತು ಮಕ್ಕಳಿಗೆ ಪರ್ಯಾಯ ವ್ಯವಸ್ಥೆಯನ್ನು ಕಲ್ಪಿಸಿ ಅಥವಾ ಅನಾಥರು, ನಿರಾಶ್ರಿತರು ಇದ್ದರೆ ಅವರಿಗೆ ಸೂಕ್ತ ರಕ್ಷಣೆಯನ್ನು ನೀಡಿ ಸರ್ಕಾರದಿಂದ ದೊರೆಯುವ ಸೌಕರ್ಯಗಳನ್ನು ಕಲ್ಪಿಸಿ ಶಾಲೆಯಿಂದ ಹೊರಗುಳಿದ ಮಕ್ಕಳಿಗೆ ಉಚಿತ ವಸತಿ ಮತ್ತು ಶಿಕ್ಷಣವನ್ನು ನೀಡಿ ಸಿಂಧನೂರಿನಲ್ಲಿ ಮುಂದೆಂದು ಯಾರೂ ಭಿಕ್ಷಾಟನೆ ಮಾಡದಂತೆ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದರು. ಈ ಸಂದರ್ಭದಲ್ಲಿ ತಾಲೂಕ ಅಧ್ಯಕ್ಷರಾದ *ದುರುಗೇಶ ಕಲಮಂಗಿ, ನರಸಪ್ಪಬಡಿಗೇರ್, ಶಿವಪುತ್ರ ಅಮರಾಪುರ, ದೇವರಾಜ್, ರಾಜು ಹುಲಗುಂಚಿ ಇದ್ದರು.

# ಸಾರ್ವಜನಿಕ ಜೀವನದಲ್ಲಿ ಅಧಿಕಾರ ಶಾಶ್ವತವಲ್ಲ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ



ಯಾವುದೇ ವ್ಯಕ್ತಿಗೆ ಸಹಾಯ ಮಾಡಲು ಸಾರ್ವಜನಿಕ ಜೀವನದಲ್ಲಿ ಅಧಿಕಾರ ಮುಖ್ಯವಲ್ಲ ಮಾನವೀಯ ತುಡಿತ ಮುಖ್ಯ ಎಂದು ತಾ.ಪಂ. ಮಾಜಿ ಉಪಾಧ್ಯಕ್ಷ ಕಳಕಪ್ಪ ಕಂಬಳಿ ಹೇಳಿದರು.

ತಾಲೂಕಿನ ಕರಮುಡಿ ಗ್ರಾಮದ ಕರವೀರಬದ್ರೇಶ್ವರ ಆವರಣದಲ್ಲಿ ಶ್ರೀ ಹುಚ್ಚೀರೇಶ್ವರ ಜಾತ್ರಾಮಹೋತ್ಸವದ ಅಂಗವಾಗಿ ಯಲಬುರ್ಗಾದ ಶ್ರೀ ವೀರಬದ್ರೇಶ್ವರ ವಿಕಲ ಚೇತನರ ಗ್ರಾ.ಅ. ಹಾಗೂ ಶಿ.ಸಂಸ್ಥೆ (ರಿ) ಕುಕನೂರಿನ ವಿ.ಎಚ್.ತಳವಾರ ಗ್ರಾ.ಅ.ಹಾಗೂ ಶಿ.ಸಂಸ್ಥೆ ಸ್ಥಳೀಯ ಕರ್ನಾಟಕ ಯುವಕ ಮಂಡಳ ಹಾಗೂ ಗ್ರಾ.ಪಂ. ಇವುಗಳ ಸಂಯುಕ್ತ ಆಶ್ರಯದಲ್ಲಿ ಶಿಕ್ಷಣ ಪ್ರೇಮಿ ದಿ.ಕಾಶೀನಾಥ ಕುಕನೂರ ಇವರ ಸ್ಮರಣಾರ್ಥವಾಗಿ ಹಿರಿಯ ನಾಗರಿಕರ ಹಾಗೂ ವಿಕಲ ಚೇತನರಿಗೆ ಉಚಿತ ಸಾಧನಾ ಸಲಕರಣೆಗಳ ವಿತರಣಾ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡುತ್ತಾ ಅಧಿಕಾರವಿದೆಯೆಂದು ಕೆಲವರು ತಮ್ಮನ್ನು ಆಯ್ಕೆ ಮಾಡಿದ ಮತದಾರ ಪ್ರಭುಗಳನ್ನು ಮರೆಯುತ್ತಿರುವುದು ಪ್ರಜಾ ಪ್ರಭುತ್ವ ವ್ಯವಸ್ಥೆಯ ದುರಂತ ಎಂದು ಕಳವಳ ವ್ಯಕ್ತಪಡಿಸುತ್ತಾ ವೀರಬದ್ರೇಶ್ವರ ವಿಕಲ ಚೇತನ ಸಂಸ್ಥೆಯವರು ವಿ.ಎಚ್.ತಳವಾರ ಗ್ರಾಮೀಣ ಅಭಿವೃದ್ಧಿ ಶಿಕ್ಷಣ ಸಂಸ್ಥೆಯವರ ಸಹಕಾರವನ್ನು ತೆ-ಗೆದು ಕೊಂಡು ಸ್ಥಳೀಯ ಕರ್ನಾಟಕ ಯುವಕ ಮಂಡಳ ಹಾಗೂ ಗ್ರಾಮ ಪಂಚಾಯತಿ ವತಿಯವರು ಮಾನವೀಯ ಮೌಲ್ಯಗಳನ್ನು ಹೆಚ್ಚಿಸುವ ಕೆಲಸವನ್ನು ಮಾಡುತ್ತಿರುವುದು ನಿಜಕ್ಕೂ ಸಮಾಜ ಸೇವೆಯ ಭಾಗವಾಗಿದೆ. ಇವು ಸಣ್ಣ ಪುಟ್ಟ ಕೆಲಸಗಳೆಂದು ಯಾರು ತಿಳಿಯಬಾರದು ಯಾವುದೇ ಒಂದು ಓಟದ ಸ್ಪರ್ಧೆಯಲ್ಲಿ ಒಬ್ಬವ್ಯಕ್ತಿ ಪ್ರಥಮ ಬಂದಿದ್ದಾನೆ ಎಂದರೆ ಆತನ ಪ್ರಥಮ ಹೆಜ್ಜೆಯೆ ಯಶಸ್ಸಿಗೆ ಸಾಕ್ಷಿಯಾಗಿರುತ್ತದೆ ಎಂದು ಯಾರು ಮರೆಯಬಾರದು ಎಂದರು. ವಿ.ಎಚ್.ತಳವಾರ ಗ್ರಾ.ಅ. ಹಾಗೂ ಶಿಕ್ಷಣ ಸಂಸ್ಥೆಯ ಸಂಸ್ಥಾಪಕರಾದ ಸಮಾಜಸೇವಕರಾದ ಟಿ.ರತ್ನಾಕರರವರು ಮಾತನಾಡಿ ನಮ್ಮ ಸಂಸ್ಥೆವತಿಯಿಂದ ಹಲವಾರು ವಿಧಾಯಕ ಕಾರ್ಯಕ್ರಮವನ್ನು ಈಗಾಗಲೆ ಆಯೋಜಿಸಲಾಗಿದೆ ಸಾರ್ವಜನಿಕರಿಗೆ ಅನುಕೂಲ ಕಲ್ಪಿಸಿಕೊಡಲು ಸದಾ ಸಿದ್ಧವಾಗಿದೆ ಎಂದರು ರತ್ನಾಕರ ಟಿ. ಶಕುಂತಲಾ ಪಾಟೀಲ! ಸಂಗಪ್ಪಬಂಡಿ ವೀರಪ್ಪ ಪತ್ತಾರ ಬಸವರಾಜ ಉಳ್ಳಾಗಡ್ಡಿ ಶರಣಪ್ಪಗೌಡ ಪೊ.ಪಾಟೀಲ ಮುತ್ತಣ್ಣ ಫರಸಪ್ಪ ಇಮಾಮ ವೀರಣ್ಣ ಮಾನಶೆಟ್ಟಿ ಗೌಡಪ್ಪ ಬಲಕುಂದಿ ಮಂಜುನಾಥ

ಉಳ್ಳಾಗಡ್ಡಿ ಕಳಕಪ್ಪರಾಟಿ ವೀರಮ್ಮ ಕವಲೂರ ವಿಜಯ ಕರೆಕುರಿ ಇನ್ನೂ ಮುಂತಾದವರು ಮಾತನಾಡಿದರು ತೊದೇವಪ್ಪ ತೊಂಡಿಹಾಳ ಮುಂತಾದವರು ಉಪಸ್ಥಿತರಿದ್ದರು

ಡಾ!ಬಸವರಾಜ ಕುಕನೂರ ಅಧ್ಯಕ್ಷತೆ ವಹಿಸಿದ್ದರು ವಿರುಪಾಕ್ಷಪ್ಪ ಉಳ್ಳಾಗಡ್ಡಿ ಪ್ರಾಸ್ತಾವಿಕವಾಗಿ ನುಡಿದರು ನಿಖಿಲ್ ಗೊಂಗಡಶೆಟ್ಟಿ ಸ್ವಾಗತಿಸಿದರು ಉಮೇಶ ಕುಕನೂರ ಪ್ರಾರ್ಥಿಸಿದರು. ಭೀಮಪ್ಪ ಹವಳಿ ನಿರೂಪಿಸಿ ವಂದಿಸಿದರು

# ಹಡಪದ್ ಅಪ್ಪಣ್ಣ ನವರ ಮೂರ್ತಿ ಮರುಸ್ಥಾಪನೆ ಮಾಡಬೇಕು: ಭೀಮಣ್ಣ



• ಮಲ್ಲಮ್ಮ ನುಡಿ ವಾರ್ತೆ, ಸಿಂಧನೂರು:

ಬೀದರ್ ಜಿಲ್ಲೆಯ ಬಸವಕಲ್ಯಾಣದ ಅನುಭವ ಮಂಟಪದ ತ್ರಿಪುರಾಂತಕ ಕೆರೆ ಹತ್ತಿರ ಇರುವ ಹಡಪದ ಅಪ್ಪಣ್ಣನವರ ಅರಿವಿನ ಗವಿಯಲ್ಲಿ ಮೂರ್ತಿ ಪ್ರತಿಷ್ಠಾಪನೆ ಮಾಡಬೇಕೆಂದು ಅಖಿಲ ಕರ್ನಾಟಕ ಹಡಪದ ಸೇವಾ ಸಂಘ ತಾಲೂಕು ಘಟಕ ಹಡಪದ ಸಮಾಜದ ವತಿಯಿಂದ ಪ್ರತಿಭಟನೆ ನಡೆಸಿದರು ನಂತರ ತಾಲೂಕು ತಹಶೀಲ್ದಾರ್ ಮೂಲಕ ಮಾನ್ಯ ಮುಖ್ಯಮಂತ್ರಿಗಳು ಸಿದ್ದರಾಮಯ್ಯನವರ ಮನವಿ ಪತ್ರ ಸಲ್ಲಿಸಿ ಒತ್ತಾಯಿಸಿದರು.

ಪ್ರತಿಭಟನೆ ಕುರಿತು ಮಾತನಾಡಿದ ನಾರಾಯಣ ಬೆಳೆಗುರ್ಕಿ ಸಾಮಾಜಿಕ ಹೋರಾಟಗಾರ ಅವರು ಹಡಪದ ಬೀದರ್ ಜಿಲ್ಲೆಯ ಬಸವಕಲ್ಯಾಣದಲ್ಲಿರುವ ಅನುಭವ ಮಂಟಪದ ತ್ರಿಪುರಾಂತಕ ಕೆರೆ ಹತ್ತಿರ 12ನೇ ಶತಮಾನದ ಅನೇಕ ಬಸವಾದಿ ಶರಣರ ಅರಿವಿನ ಗವಿಗಳು ಇರುವುದಾಗಿ ಇತಿಹಾಸ ಸಾರುತ್ತದೆ. ಅದೇ ರೀತಿ ವಿಶ್ವಗುರು, ಸಾಂಸ್ಕೃತಿಕ ನಾಯಕ ಬಸವಣ್ಣನವರ ಆಪ್ತ ಕಾರ್ಯದರ್ಶಿಯಾಗಿದ್ದ ಶಿವಶರಣ ಹಡಪದ ಅಪ್ಪಣ್ಣನವರ ಅರಿವಿನ ಗವಿಯೂ ಅಲ್ಲಿ ಅಸ್ತಿತ್ವದಲ್ಲಿದೆ.

ಆದರೆ, ಶಿವಶರಣ ಹಡಪದ ಅಪ್ಪಣ್ಣನವರ ಅರಿವಿನ ಗವಿಯನ್ನು ಬಸವೇಶ್ವರ ದೇವಸ್ಥಾನದ ಪಂಚಕಮಿಟಿಯವರು ಅಕ್ರಮವಾಗಿ ಹಸ್ತಕ್ಷೇಪ ಮಾಡಿ, ಅನ್ಯ ಶರಣರ ಮೂರ್ತಿ ಪ್ರತಿಷ್ಠಾಪನೆ ಮಾಡಿರುವುದು ಗಮನಾರ್ಹ ಸಂಗತಿ.

ಇದರಿಂದ ಶಿವಶರಣ ಹಡಪದ ಅಪ್ಪಣ್ಣನವರಿಗೆ ಮತ್ತು ನಮ್ಮ ಸಮುದಾಯದ ಭಕ್ತಿಭಾವನೆಗಳಿಗೆ ತೀವ್ರ ಅನ್ಯಾಯವಾಗಿದ್ದು, ನಮ್ಮ ಇತಿಹಾಸದ ಮೌಲ್ಯ ಕುಗ್ಗುವಂತಾಗಿದೆ.

ಹಡಪದ ಅಪ್ಪಣ್ಣನವರ ವಂಶಸ್ಥರು ಮತ್ತು ಸಮಾಜದ ಭಕ್ತರಾದ ನಾವು, ನಮ್ಮ ಶರಣರ ಇತಿಹಾಸ ಹಾಗೂ ಅರಿವಿನ ಗವಿಯನ್ನು ಕಳೆದುಕೊಳ್ಳುವ ಪ್ರಶ್ನೆಯೇ ಇಲ್ಲ. ಈ ಘಟನೆ ನಮ್ಮ ಭಾವನೆಗಳಿಗೆ ಗಂಭೀರ ಧಕ್ಕೆ ಉಂಟು ಮಾಡಿದೆ.

ನಂತರ ಬಸವಕೇಂದ್ರದ ಬಸಲಿಂಗಪ್ಪ ಬಾದರ್ಲಿ ಅವರು ಮಾತನಾಡಿದ ಅವರು ಹಡಪದ ಅಪ್ಪಣ್ಣ ಸಮಾಜ ಹಿಂದೆ ಲಿಂಗಾಯತ ಸಮಾಜ ಇದೆ. ಈಗಾಗಲೇ ಸಮಾಜದ ಮುಖಂಡರು, ಭಕ್ತರು ಹಲವಾರು ಬಾರಿ ಸಂಬಂಧಪಟ್ಟ ಅಧಿಕಾರಿಗಳಿಗೆ ಮನವಿ ಸಲ್ಲಿಸಿದ್ದು, ಪ್ರತಿಭಟನೆಗಳನ್ನು ಕೂಡ ನಡೆಸಲಾಗಿದೆ. ಅನೇಕ ಮಠಾಧೀಶರು ಹಾಗೂ ನಾಯಕರು ಸಹ ಹಡಪದ ಅಪ್ಪಣ್ಣನವರ ಪರವಾಗಿ ಹೋರಾಟ ನಡೆಸಿದರೂ, ಇನ್ನೂ ನ್ಯಾಯ ದೊರಕಿಲ್ಲ. ಎಂದು ಹೇಳಿದರು

ಆದುದರಿಂದ, ತಾವು ದಯವಿಟ್ಟು ಈ ಅಕ್ರಮ ಕೃತ್ಯದಲ್ಲಿ ಭಾಗಿಯಾದ ಪಂಚಕಮಿಟಿ ಮತ್ತು ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ತಕ್ಷಣ ಕ್ರಮ ಕೈಗೊಂಡು, ಯಥಾಸ್ಥಿತಿಗೆ ತರಬೇಕು. ಹಾಗೆಯೇ ಹಡಪದ ಅಪ್ಪಣ್ಣನವರ ಅರಿವಿನ ಗವಿಯಲ್ಲಿ ಅವರ ಮೂರ್ತಿಯನ್ನು ಪುನಃ ಪ್ರತಿಷ್ಠಾಪನೆ ಮಾಡಿ, ಆ ಸ್ಥಳವನ್ನು ಬಸವಕಲ್ಯಾಣ ಅಭಿವೃದ್ಧಿ ಪ್ರಾಧಿಕಾರಕ್ಕೆ ಸೇರಿಸಿ ಸಮರ್ಪಕವಾಗಿ ಅಭಿವೃದ್ಧಿಪಡಿಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ಈ ಮೂಲಕ ಸಮಸ್ತ ಸಾಮಾಜದ ಒತ್ತಾಯಿಸುತ್ತದೆ. ಈ ಸಂದರ್ಭದಲ್ಲಿ . ಅಧ್ಯಕ್ಷ ಭೀಮಣ್ಣ ಬಾಲಾಜಿ. ಈರಣ್ಣ ರಮೇಶ್. ರಾಘವೇಂದ್ರ ಬಸವರಾಜ ಮುದುಕಪ್ಪ ಜಗದೀಶ್ ಇಂದಿರಾನಗರ ಮಲ್ಲಯ್ಯ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಕಾರ್ಮಿಕ ಇಲಾಖೆಯ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆ

# ಬಾಲ ಕಾರ್ಮಿಕ ಪದ್ಧತಿ ತಡೆಗೆ ವಿವಿಧ ಇಲಾಖೆಗಳು ಸಹಕಾರ ಕೋಡಿ: ಎಡಿಸಿ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು



ಬಾಲ ಕಾರ್ಮಿಕ ಪದ್ಧತಿಯು ಒಂದು ಸಾಮಾಜಿಕ ಪಿಡುಗಾಗಿದ್ದು ಇದರ ನಿರ್ಮೂಲನೆ ಎಲ್ಲರೂ ಕೈಜೋಡಿಸಬೇಕೆಂದು ಅಪರ ಜಿಲ್ಲಾಧಿಕಾರಿ ಶಿವಾನಂದ ಅವರು ಸಂಬಂಧಿಸಿದ ವಿವಿಧ ಇಲಾಖೆಯ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಏಪ್ರಿಲ್ 07ರ ಮಂಗಳವಾರದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕಾರ್ಮಿಕ ಇಲಾಖೆಯ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕ ಪದ್ಧತಿಯನ್ನು ನಿರ್ಮೂಲನೆ ಮಾಡಲು ಎಲ್ಲಾ ಇಲಾಖೆಗಳ ಸಹಕಾರ ಹಾಗೂ ಸಮನ್ವಯದ ಅಗತ್ಯವಿದೆ. ಆದ್ದರಿಂದ ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕ ನಿಷೇಧ ಮತ್ತು ನಿಯಂತ್ರಣ ಕಾಯ್ದೆಯಡಿ ಅಧಿಸೂಚಿಸಲ್ಪಟ್ಟ ಹನ್ನೊಂದು ಇಲಾಖೆಗಳ ಅಧಿಕಾರಿಗಳು ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕರ ತಪಾಸಣೆ ಅಥವಾ ಹಠಾತ್ ದಾಳಿ ಕೈಗೊಳ್ಳುವ ಸಂದರ್ಭಗಳಲ್ಲಿ ತಂಡದೊಂದಿಗೆ ಸಕ್ರಿಯವಾಗಿ ಭಾಗವಹಿಸಿ ಮಕ್ಕಳ ರಕ್ಷಣೆ ಹಾಗೂ ಪುನರ್‌ವಸತಿಗಾಗಿ ಕ್ರಮ ಕೈಗೊಂಡು ಈ ಮಕ್ಕಳನ್ನು ಕೆಲಸಕ್ಕೆ ನೇಮಿಸಿಕೊಂಡ ಮಾಲೀಕರ ವಿರುದ್ಧ ಸಂಬಂಧಪಟ್ಟ ಪೊಲೀಸ್ ಠಾಣೆಗಳಲ್ಲಿ ಬಾಲ ಕಾರ್ಮಿಕ ಹಾಗೂ ಕಿಶೋರ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ ಹಾಗೂ ತಿದ್ದುಪಡಿ ಕಾಯ್ದೆಯಡಿ ಪ್ರಕರಣ ದಾಖಲಿಸಬೇಕೆಂದು ಸಂಬಂಧಿಸಿದ ಅಧಿಕಾರಿಗಳಿಗೆ ಅಪರ ಜಿಲ್ಲಾಧಿಕಾರಿ ನಿರ್ದೇಶನ ನೀಡಿದರು.

ಕಾರ್ಮಿಕ ಇಲಾಖೆ ಅಧಿಕಾರಿಗಳು ನಿಯಮಿತವಾಗಿ ತಪಾಸಣೆ ನಡೆಸಿ ಬಾಲ ಕಾರ್ಮಿಕರನ್ನು ರಕ್ಷಿಸಿ, ಪುನರ್ವಸತಿ ಕಲ್ಪಿಸಬೇಕು. ಗ್ಯಾ-ರೇಜ್, ಕಾರ್ಖಾನೆ, ಹೋಟೆಲ್, ಅಂಗಡಿ, ಮತ್ತಿತರ ಅಪಾಯಕಾರಿ ಉದ್ಯೋಗದ ಸ್ಥಳಗಳಲ್ಲಿ ತಪಾಸಣೆ ಹೆಚ್ಚಿಸಬೇಕು. ತಪಾಸಣೆ ತೀವ್ರವಾದರೆ ಬಾಲ ಕಾರ್ಮಿಕರನ್ನು ಕೆಲಸದಲ್ಲಿ ತೊಡಗಿಸಿಕೊಳ್ಳಲು ಉದ್ಯೋಗದಾತರು ಹೆದರುತ್ತಾರೆ. ಪತ್ತೆ ಹಚ್ಚಿದ ಬಾಲ ಕಾರ್ಮಿಕರಿಗೆ ಪುನರ್ವಸತಿ ಕಲ್ಪಿಸಿ ಮುಖ್ಯವಾಹಿನಿಗೆ ತಂದರೆ ಭವಿಷ್ಯ ರೂಪಿಸಿಕೊಳ್ಳಲು ಸಹಕಾರಿಯಾಗುತ್ತದೆ ಎಂದು ಹೇಳಿದರು.

ಜಿಲ್ಲೆಯಲ್ಲಿ ಬಾಲ ಕಾರ್ಮಿಕರ ನಿಷೇಧ ಕಾಯ್ದೆಯನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಿದರೆ ಮಕ್ಕಳು ಬಾಲ ಕಾರ್ಮಿಕರಾಗುವುದನ್ನು ತಪ್ಪಿಸಬಹುದು. ಇಲ್ಲವಾದರೆ ಮಕ್ಕಳು ಕೊನೆಯವರೆಗೂ ಕಾರ್ಮಿಕರಾಗಿಯೇ ಉಳಿದುಬಿಡುತ್ತಾರೆ. ಬಾಲಕಾರ್ಮಿಕತೆ ಅಥವಾ ಬಿಡುಗಡೆಗೊಳಿಸಿದ ಮಕ್ಕಳ ಕುಟುಂಬಗಳಿಗೆ ಸಾಮಾಜಿಕ ಭದ್ರತೆ ಯೋಜನೆಯ ಸೌಲಭ್ಯಗಳನ್ನು ಒದಗಿಸುವ ಮುಖಾಂತರ ಈ ಮಕ್ಕಳ ಕುಟುಂಬಗಳನ್ನು ಆರ್ಥಿಕವಾಗಿ ಸದೃಡರನ್ನಾಗಿಸಲು ವಿವಿಧ ಸೌಲಭ್ಯಗಳನ್ನು ಒದಗಿಸಲು ಸಂಬಂಧಿಸಿದ ಅಧಿಕಾರಿಗಳಿಗೆ ಇಲಾಖೆಯಿಂದ ಸೂಕ್ತ ನಿರ್ದೇಶನಗಳನ್ನು ನೀಡಬೇಕು ಅಪರ ಜಿಲ್ಲಾಧಿಕಾರಿ ಸೂಚಿಸಿದರು.

ಬಾಲ್ಯ ವಿವಾಹ ನಿಷೇಧ ಕಾಯ್ದೆ-2006ರ ಪ್ರಕಾರ 18 ವರ್ಷದೊಳಗಿನ ಯಾವುದೇ ಹೆಣ್ಣು ಮಕ್ಕಳಿಗೆ ಹಾಗೂ 21 ವರ್ಷದೊಳಗಿನ ಗಂಡು ಮಕ್ಕಳಿಗೆ ಮದುವೆಯಾದಲ್ಲಿ ಅದನ್ನು ಬಾಲ್ಯ ವಿವಾಹ ಎಂದು ಪರಿಗಣಿಸಲಾಗಿದೆ. ಕಾಯ್ದೆಯ ಪ್ರಕಾರ ಬಾಲ್ಯ ವಿವಾಹ ಆದಲ್ಲಿ ಹುಡುಗ, ಹುಡುಗಿಯ ತಂದೆ ತಾಯಿ ಅಲ್ಲದೇ ಸಂಬಂಧಟ್ಟ ಎಲ್ಲರ ವಿರುದ್ಧ ತಪ್ಪಿತಸ್ಥರಿಗೆ ಕಾರಾಗೃಹವಾಸ ಹಾಗೂ ದಂಡ ವಿಧಿಸುವ ಅವಕಾಶವಿದ್ದು, ಕಾಯ್ದೆ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಬೇಕು ಎಂದರು.

ಹೆಚ್ಚುವರಿ ಜಿಲ್ಲಾ ಪೊಲೀಸ ವರಿಷ್ಠಾಧಿಕಾರಿ ಕುಮಾರಸ್ವಾಮಿ ಅವರು ಮಾತನಾಡಿ, ಪೊಲೀಸ್ ಇಲಾಖೆಯಿಂದ ಬಾಲ ಕಾರ್ಮಿಕರ ಪದ್ಧತಿ ನಿರ್ಮೂಲನೆಗೆ ಅಗತ್ಯ ಸಹಕಾರ ನೀಡಲಾಗುವುದು. ಜಿಲ್ಲೆಯ ಯಾವುದೇ ಠಾಣೆಯಲ್ಲಿ ಇಂತಹ ಪ್ರಕರಣಗಳನ್ನು ದಾಖಲಿಸಲು ಹಿಂದೇಟು ಹಾಕಿದ್ದಲ್ಲಿ, ತಕ್ಷಣ ನಮ್ಮ ಗಮನಕ್ಕೆ ತರಬೇಕೆಂದು ಕಾರ್ಮಿಕ ಇಲಾಖೆಯ ಅಧಿಕಾರಿಗಳಿಗೆ ತಿಳಿಸಿದರು.

ಸಭೆಯಲ್ಲಿ ರಾಯಚೂರು ಸಹಾಯಕ ಆಯುಕ್ತ ಡಾ.ಹಂಪಣ್ಣ ಸಜ್ಜನ್, ಕಾರ್ಮಿಕ ಇಲಾಖೆಯ ಜಿಲ್ಲಾ ಅಧಿಕಾರಿ ಆರತಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ಸುರೇಂದ್ರ ಬಾಬು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಸುನೀತಾ, ಕೃಷಿ ಇಲಾಖೆಯ ಸಹಾಯಕ ನಿರ್ದೇಶಕಿ ಪುಷ್ಪ, ರಾಯಚೂರು ಶಿಶು ಅಭಿವೃದ್ಧಿ ಯೋಜನಾಧಿಕಾರಿ ಮಂಜುನಾಥ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

# ವಿವಿಧ ಹುದ್ದೆಗಳ ಆಯ್ಕೆ ನೇರ ಸಂದರ್ಶನ

• ಮಲ್ಲಮ್ಮ ನುಡಿ ವಾರ್ತೆ , ರಾಯಚೂರು

ರಾಯಚೂರು ಜಿಲ್ಲೆಯ ಲಿಂಗಸುಗೂರು ತಾಲೂಕಿನಲ್ಲಿ ನೂತನವಾಗಿ ನಿರ್ಮಾಣಗೊಂಡ 100 ಹಾಸಿಗೆಗಳ ತಾಯಿ ಮತ್ತು ಮಕ್ಕಳ ಆಸ್ಪತ್ರೆಯಲ್ಲಿ ಖಾಲಿ ಇರುವ ವಿವಿಧ ಹುದ್ದೆಗಳಿಗೆ ರೋಷ್ಟರ್ ಮತು ಮೇರಿಟ್ ಆಧರಿಸಿ ಎನ್.ಹೆಚ್.ಎಮ್ ನಿಬಂಧನೆಗೊಳಪಟ್ಟು ಆರ್ಹ ಅಭ್ಯರ್ಥಿಗಳಿಂದ ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಲು ನೇರ ಸಂದರ್ಶನಕ್ಕೆ ಅರ್ಜಿ ಆಹ್ವಾನಿಸಲಾಗಿದೆ.

ಸ್ತ್ರೀರೋಗ ತಜ್ಞ 01 ಹುದ್ದೆಗೆ ಎಂ.ಬಿ.ಬಿ.ಎಸ್. ಎಂ.ಎಸ್ ಓಬಿಜಿ ವಿದ್ಯಾರ್ಹತೆ ಹೊಂದಿರಬೇಕು. 45 ವರ್ಷದೊಳಗಿರಬೇಕು. ಜನರಲ್ ಮೆಡಿಸಿನ್ 01 ಹುದ್ದೆಗೆ ಎಂ.ಬಿ.ಬಿ.ಎಸ್ ಡಿ.ಸಿ.ಹೆಚ್, ಎಂ.ಡಿ ಪೀಡಿಯಾಟ್ರಿಕ್, ಡಿಎನ್ ಬಿ ಪೀಡಿಯಾಟ್ರಿಕ್ ವಿದ್ಯಾರ್ಹತೆ ಹೊದಿರಬೇಕು. 45 ವರ್ಷದೊಳಗಿರಬೇಕು. ವೈದ್ಯಾಧಿಕಾರಿ 03 ಹುದ್ದೆಗೆ ಎಂ.ಬಿ.ಬಿ.ಎಸ್ ವಿದ್ಯಾರ್ಹತೆ ಹೊಂದಿರಬೇಕು. 45 ವರ್ಷದೊಳಗಿರಬೇಕು. ಈ ಹುದ್ದೆಗಳಿಗೆ ಎನ್.ಹೆಚ್.ಎಂ ಮಾರ್ಗಸೂಚಿಗಳ ಪ್ರಕಾರ ದಿನಾಂಕ: 10-04-2026 ರಂದು ವಾಕ್-ಇನ್ ಸಂದರ್ಶನ ನಡೆಸಲಾಗುವುದು.

ಸ್ಟಾಫ್ ನರ್ಸ್ 28 ಹುದ್ದೆಗಳಿಗೆ ಜಿ.ಎನ್.ಎಂ ಅಥವಾ ಬಿ.ಎಸ್.ಸಿ ನರ್ಸಿಂಗ್ + 2 ವರ್ಷ ಅನುಭವದ ಎನ್.ಹೆಚ್.ಎಂ ಮಾರ್ಗಸೂಚಿಗಳ ಪ್ರಕಾರ ಮಾರ್ಗಸೂಚಿಗಳ ಪ್ರಕಾರ ಏಪ್ರಿಲ್ 16ರವರೆಗೆ ಕಚೇರಿ ಸಮಯದಲ್ಲಿ ಅರ್ಜಿ ಸಲ್ಲಿಸಬಹುದು. ನಂತರ ಬಂದ ಆರ್ಜಿಗಳನ್ನು ಸ್ವೀಕರಿಸುವುದಿಲ್ಲ.

ಹುದ್ದೆಗಳ ನೇಮಕಾತಿ ಸಂದರ್ಭದಲ್ಲಿ ಚಾಲ್ತಿಯಲ್ಲಿರುವ ಎನ್.ಹೆಚ್.ಎಮ್ ನಿಯಮಾನುಸಾರ ಹಾಗೂ ಟಿ.ಓ.ಆರ್ ಮೇರೆಗೆ ರೋಷ್ಟರ್ ಮತು ಮೇರಿಟ್ ಆಧರಿಸಿ ನೇಮಕಾತಿ ಮಾಡಲಾಗುವುದು. ಆಯ್ಕೆ ಪ್ರಕ್ರಿಯೆಯಲ್ಲಿ ನೇಮಕಾತಿ ಸಮಿತಿಯ ತೀರ್ಮಾನವೇ. ಅಂತಿಮವಾಗಿರುತ್ತದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸದಸ್ಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿವಿಧ ಜಯಂತಿಗಳ ಪೂರ್ವಭಾವಿ ಸಭೆ

• ಮಲ್ಲಮ್ಮ ನುಡಿ ವಾರ್ತೆ , ರಾಯಚೂರು

ಜಿಲ್ಲೆಯಲ್ಲಿ ಜಿಲ್ಲಾಡಳಿತದ ವತಿಯಿಂದ ಎಪ್ರಿಲ್ 20ರಂದು ಬಸವ ಜಯಂತಿ, ಏಪ್ರಿಲ್ 21ರಂದು ಶ್ರೀಶಂಕರಾಚಾರ್ಯ ಜಯಂತಿ, ಏಪ್ರಿಲ್ 23ರಂದು ಭಗಿರಥ ಜಯಂತಿ ಹಾಗೂ ಮೇ. 01ರಂದು ಭಗವಾನ್ ಬುದ್ಧ ಜಯಂತಿ ನಡೆಯಲಿವೆ.

ಈ ಜಯಂತಿಗಳ ಅಂಗವಾಗಿ ಏಪ್ರಿಲ್ 09ರ ಬೆಳಿಗ್ಗೆ 10ಗಂಟೆಗೆ ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಅಪರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಪೂರ್ವಭಾವಿ ಸಭೆ ಹಮ್ಮಿಕೊಳ್ಳಲಾಗಿದ್ದು, ವಿವಿಧ ಸಮಾಜದ ಮುಖಂಡರು, ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿ ಸೂಕ್ತ ಸಲಹೆ ಸೂಚನೆ ನೀಡಿ ಸಭೆಯನ್ನು ಯಶಸ್ವಿಗೊಳಿಸಬೇಕೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಉತ್ತರಾದೇವಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಾರವಾರ: ವಿದ್ಯುತ್ ವ್ಯತ್ಯಯ.

• ಮಲ್ಲಮ್ಮ ನುಡಿ ವಾರ್ತೆ ಕಾರವಾರ

ಕಾರವಾರ ಉಪ ವಿಭಾಗದ ವ್ಯಾಪ್ತಿಯಲ್ಲಿ ಹೆಚ್‌ಟಿ ವಾಹಕ ಬದಲಾವಣೆ ಕಾಮಗಾರಿ ಇರುವುದರಿಂದ , ತೇಲಂಗರೋಡ ಫೀಡರಿನ ವಿವಿಧ ಪ್ರದೇಶಗಳಲ್ಲಿ ಏ.8 ರಂದು ಬೆಳಗ್ಗೆ 9.30 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ಹಾಗೂ ಕಾರವಾರ ಟೌನ್ ಫೀಡರಿನ ವಿವಿಧ ಪ್ರದೇಶಗಳಲ್ಲಿ ಬೆಳಗ್ಗೆ 10 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ವಿದ್ಯುತ್ ವ್ಯತ್ಯಯವಾಗಲಿದ್ದು, ಗ್ರಾಹಕರು ಸಹಕರಿಸುವಂತೆ ಕಾರವಾರ ಹೆಸ್ಕಾಂ, ಕಾರ್ಯ ಮತ್ತು ಪಾಲನಾ ಉಪವಿಭಾಗದ ಸಹಾಯಕ ಕಾರ್ಯನಿರ್ವಹಕ ಇಂಜಿನೀಯರ್ (ವಿ) ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಏ.23 ರಿಂದ ಮೇ.22 ರವರೆಗೆ ಲಸಿಕಾ ಕಾರ್ಯಕ್ರಮ

# ರೈತರು ಜಾನುವಾರುಗಳಿಗೆ ಲಸಿಕೆ ಹಾಕಿಸಿ: ಜಿಲ್ಲಾಧಿಕಾರಿ



• ಮಲ್ಲಮ್ಮ ನುಡಿ ವಾರ್ತೆ ಬೀದರ

ಕೇಂದ್ರಪುರಸ್ಕೃತ ಯೋಜನೆಯಡಿ ಜಾನುವಾರುಗಳಿಗೆ 9ನೇ ಸುತ್ತಿನ ಓಂಆಅಕ-ಈಓಆ-ಅಕ ಕಾಲು ಮತ್ತು ಬಾಯಿ ಜ್ವರ ಸಾಮೂಹಿಕ ಲಸಿಕಾ ಕಾರ್ಯಕ್ರಮವನ್ನು ಬೀದರ ಜಿಲ್ಲೆಯಾದ್ಯಂತ ಏಪ್ರಿಲ್.23 ರಿಂದ ಮೇ.22 ರವರೆಗೆ ಹಮ್ಮಿಕೊಳ್ಳಲಾಗಿರುತ್ತದೆಂದು ಜಿಲ್ಲಾಧಿಕಾರಿ ಹಾಗೂ ಕಾಲು ಬಾಯಿ ಜ್ವರ ಲಸಿಕಾ ಕಾರ್ಯಕ್ರಮದ ಜಿಲ್ಲಾ ನಿರ್ವಹಣಾ ಸಮಿತಿಯ ಅಧ್ಯಕ್ಷರಾದ ಶಿಲ್ಪಾ ಶರ್ಮಾ ತಿಳಿಸಿದರು.

ಅವರು ಮಂಗಳವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ರಾಷ್ಟ್ರೀಯ ಜಾನುವಾರು ರೋಗ ನಿಯಂತ್ರಣಾ ಕಾರ್ಯಕ್ರಮದ 9ನೇ ಸುತ್ತಿನ ಲಸಿಕಾ ಕಾರ್ಯಕ್ರಮದ ಕುರಿತು ಕರೆದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಜಾನುವಾರು ಮಾಲೀಕರು ತಪ್ಪದೇ ತಮ್ಮ ದನ, ಎಮ್ಮೆಗಳ ಜಾನುವಾರುಗಳಿಗೆ ಕಾಲು ಬಾಯಿ ಜ್ವರ ಲಸಿಕೆ ಹಾಕಿಸಿಕೊಂಡು ಈ ಕಾರ್ಯಕ್ರವನ್ನು ಸಂಪೂರ್ಣ ಯಶಸ್ವಿಗೊಳಿಸಬೇಕು. ಈ ಅವಧಿಯಲ್ಲಿ ಪ್ರತಿಯೊಂದು ಗ್ರಾಮದಲ್ಲಿ ಇಲಾಖೆಯ ಪಶುವೈದ್ಯರು ಹಾಗೂ ಸಿಬ್ಬಂದಿಗಳು ರೈತರ ಮನೆ ಬಾಗಿಲಿಗೆ ತೆರಳಿ ಜಾನುವಾರುಗಳಿಗೆ ಲಸಿಕೆ ಹಾಕಲಿದ್ದಾರೆಂದು ತಿಳಿಸಿದರು.

ಈ ಸಭೆಯಲ್ಲಿ ಉಪ ನಿರ್ದೇಶಕರು, ಪಶು ಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆ ಬೀದರನ ಡಾ: ನರಸಪ್ಪ ಎ.ಡಿ., ಜಿಲ್ಲಾ ಮಟ್ಟದ ನಿರ್ವಹಣಾ ಸಮಿತಿಯ ಸರ್ವಸದಸ್ಯರು ಹಾಗೂ ತಾಲ್ಲೂಕಿನ ಎಲ್ಲಾ ಮುಖ್ಯ ಪಶುವೈದ್ಯಾಧಿಕಾರಿಗಳು ಉಪಸ್ಥಿತರಿದ್ದರು.

# ಬಸವ ಜಯಂತಿ ಆಚರಣೆಗೆ ಅಗತ್ಯ ಸಿದ್ಧತೆ ಕೈಗೊಳ್ಳಿ: ಡಿಸಿ

• ಮಲ್ಲಮ್ಮ ನುಡಿ ವಾರ್ತೆ , ವಿಜಯನಗರ

ಏ.06: ಸಾಂಸ್ಕೃತಿಕ ನಾಯಕ ಬಸವಣ್ಣನವರ ಜಯಂತಿಯನ್ನು ಏಪ್ರಿಲ್ 20ರಂದು ವಿಜೃಂಭಣೆಯಿಂದ ಮತ್ತು ಅರ್ಥಪೂರ್ಣವಾಗಿ ಆಚರಿಸಲಾಗುವುದು ಎಂದು ಜಿಲ್ಲಾಧಿಕಾರಿ ಕವಿತಾ ಎಸ್, ಮನ್ನಿಕೇರಿ ತಿಳಿಸಿದರು.

ಸೋಮವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬಸವ ಜಯಂತಿ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ವಿಶ್ವಗುರು ಸಾಂಸ್ಕೃತಿಕ ನಾಯಕರಾದ ಬಸವಣ್ಣನವರ ಜಯಂತಿಯನ್ನು ಸಂಭ್ರಮ ಹಾಗೂ ವಿಜೃಂಭಣೆಯಿಂದ ಆಚರಿಸಲಾಗುಗವುದು. ಅಂ-ದು ಬಸವಣ್ಣನವರ ಪುತ್ಥಳಿಗೆ ಮಾಲಾರ್ಪಣೆ ಮಾಡಲಾಗುವುದು, ನಂತರ ಕೊಟ್ಟೂರ ಮಠದಲ್ಲಿ ವೇದಿಕೆ ಕಾರ್ಯಕ್ರಮ ಆಯೋಜಿಸಲಾಗುವುದು. ಜಯಂತಿಯನ್ನು ಸರ್ಕಾರದ ಶಿಷ್ಟಾಚಾರದಂತೆ ಆಹ್ವಾನ ಪತ್ರಿಕೆ ಮುದ್ರಿಸಿ ಗಣ್ಯರನ್ನು ಆಹ್ವಾನಿಸಬೇಕು. ನಗರದ ಪ್ರಮುಖ ವೃತ್ತಗಳಲ್ಲಿ ವಿದ್ಯುತ್ ದೀಪಗಳಿಂದ ಅಲಂಕರಿಸಬೇಕು. ಬಸವಣ್ಣನವ ತತ್ವದಾರ್ಶಗಳನ್ನು ಇಂದಿನ ಯುವ ಪೀಳಿಗೆಗೆ ತಿಳಿಸಲು ಉಪನ್ಯಾಸ ಆಯೋಜಿಸಬೇಕು ಎಂದರು. ಜಯಂತಿ ಅಂಗವಾಗಿ ಭವ್ಯ ಮೆರವಣಿಗೆ: ಜಯಂತಿ ಅಂಗವಾಗಿ ಬೃಹತ್ ಮೆರವಣಿಗೆ ಕಾರ್ಯ ಹಮ್ಮಿಕೊಂಡಿದ್ದು, ಸಣ್ಣಕ್ಕಿ ವೀರಭದ್ರೇಶ್ವರ ದೇವಸ್ಥಾನದಿಂದ ಆರಂಭವಾದ ಮೆರವಣಿಗೆಯು ನಗರದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಕೊಟ್ಟೂರು ಮಠದ ಹತ್ತಿರ ಮುಕ್ತಾಯಗೊಳ್ಳಲಿದೆ. ಈ ವೇಳೆ ಯಾವುದೇ ತೊಂದರೆ ಆಗದಂತೆ ಶಾಂತಿಯುತವಾಗಿ ಮತ್ತು ಸೌಹಾರ್ದಯುತವಾಗಿ ನಡೆಸಲು ಪ್ರತಿಯೊಬ್ಬರು ಸಹಕರಿಸಬೇಕು. ಇದಕ್ಕೆ ಸಮಾಜದ ಸಹಕಾರವು ಅತ್ಯಗತ್ಯ ಎಂದರು. ಈ ಸಂದರ್ಭದಲ್ಲಿ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಮಂಜುನಾಥ್, ಅಪರ ಜಿಲ್ಲಾಧಿಕಾರಿ ಇ.ಬಾಲಕೃಷ್ಣ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು, ಸಂಘ ಸಂಸ್ಥೆಯ ಪದಾಧಿಕಾರಿಗಳು ಇದ್ದರು.



# ಜೋಳ ಖರೀದಿ: ರೈತರ ಮೇಲೆ ಗೂಂಡಾ ವರ್ತನೆ

• ಮಲ್ಲಮ್ಮ ನುಡಿ ವಾರ್ತೆ, ಸಿಂಧನೂರು



ಇಂದು ಸಹಕಾರಿ ಕೃಷಿ ಪತ್ತಿನ ಸಹಕಾರ ಸಂಘ ಬೂದಿಹಾಳ ಜೋಳ ಖರೀದಿ ಕೇಂದ್ರದಲ್ಲಿ ಗ್ರೇಡರ್ ಹಣದಾಸೆಗೆ ಇಲ್ಲಸಲ್ಲದ ಕಾರಣ ವಡ್ಡಿ ಜೋಳ ಖರೀದಿ ಮಾಡದೇ ರಿಜೆಕ್ಟ್ ಮಾಡಿ ನಂತರ ರೈತರೊಂದಿಗೆ ಮಾತುಕತೆ ನಡೆಸಿ ಪ್ರತಿ ಕ್ವಿಟಲ್ ಗೆ 10 ರೂಪಾಯಿ ಹಣ ಕೊಡಿ ಅಲ್ಲಿ ಬೇರೆ ಬೇರೆ ಖರ್ಚು ಗಳು ಇರುತ್ತವೆ ಎಂದು ಹೇಳಿ ಪ್ರತಿ ಕ್ವಿಂಟಾಲ್ ಗೆ 10 ರೂ ಸಾಕು ಯಾವುದೆ ರೈತರು ಜೋಳವನ್ನು ರಿಜೆಕ್ಟ್ ಮಾಡದೇ ಆಗಿ ಜೋಳ ಖರೀದಿ ಮಾಡುತ್ತಾರೆ ಎಂದು ಅಲ್ಲಿನ ನೂರಾರು ರೈತರು ಗ್ರೇಡರ್ ಮೇಲೆ ಆರೋಪ ಮಾಡಿದರು.

ಇಂತದ್ದೊಂದು ವಿಷಯ ಕೇಳಿದ್ದಕ್ಕಾಗಿ ರೈತರು ಆಕ್ರೋಶ ಮಾತಿನ ವಾಗ್ ವಾದ ಅತಿರೇಕೆ ಹೋಗಿ ದಿಢೀರನೆ ಬಳ್ಳಾರಿ ಹೆದ್ದಾರಿ ರಸ್ತೆ ತಡೆದು ಪ್ರತಿಭಟನೆ ನಡೆಸಿದರು. ನಂತರ ಸ್ಥಳಕ್ಕೆ ಸಿಪಿಐ ವಿನಯಕುಮಾರ್ ಭೇಟಿ ನೀಡಿದರು. ಆದರೆ ರೈತರ ಸಮಸ್ಯೆ ಆಲಿಸಲು ತಾಲೂಕು ತಹಶೀಲ್ದಾರ್ ನಿರಾಕರಿಸಿದ್ದಾರೆ. ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ರಾಜ್ಯ ಪ್ರಧಾನ ಕಾರ್ಯದರ್ಶಿ ಬಸವರಾಜ ಗುಡಿಹಾಳ ಆರೋಪಿಸಿದರು.

ಬೂದಿವಾಳ ಸಹಕಾರಿ ಕೃಷಿ ಪತ್ತಿನ ಸಹಕಾರ ಸಂಘ ಜೋಳ ಖರೀದಿ ಕೇಂದ್ರದಲ್ಲಿ ಗ್ರೇಟರ್ ಪ್ರತಿ ಕ್ವಿಟಲ್ ಗೇ ರೂ.10 ಬೇಡಿಕೆ ಇಟ್ಟ ಕಾರಣ ಹಣ ಕೊಡಲು ಆಗದ ರೈತರ ಜೋಳ ಖರೀದಿ ಮಾಡುವದಿಲ್ಲ ಎಂದ ಕಾರಣಕ್ಕೆ ರೈತರು ಗ್ರೇಡರ್ ಜೊತೆ ಮಾತಿನ ಚಕಮಕಿ ನಡೆದ ಕಾರಣ ಏಕಾಏಕಿ ಗ್ರೇಟರ್ ರೈತರಾದ ರಾಜಪ್ಪ ಹರೇಟನೂರು ಇವರ ಮೇಲೆ ಹಲ್ಲೆ ಮಾಡಿ ರೈತನ ಮೈಮೇಲಿನ ಬಟ್ಟೆ ಅರಿದಿರುತ್ತಾರೆ ಈ ಘಟನೆಯ ವಿಚಾರವಾಗಿ ತಹಶೀಲ್ದಾರರಿಗೆ ಫೋನ್ ಕರೆ ಮಾಡಿದರೆ ಕರೆಗೆ ಸ್ಪಂದನೆ ಮಾಡದೆ ಫೋನ್ ಕಟ್ ಮಾಡಿದರು ರೈತರು ಆಕ್ರೋಶಗೊಂಡು ರಸ್ತೆಗೆ ಜೋಳ ತುಂಬಿದ ಟ್ಯಾಕ್ಟರ್ ನಿಲ್ಲಿಸಿ ಪ್ರತಿಭಟನೆ ನಡೆಸಲಾಯಿತು ರೈತನ ಮೇಲೆ ಹಲ್ಲೆ ಮಾಡಿದ ಗ್ರೇಡರ್ ನನ್ನು ಕೆಲಸದಿಂದ ಅಮಾನತ್ತು ಗಳಿಸಬೇಕು. ಸರ್ಕಾರ ಖರೀದಿ ಕೇಂದ್ರ ತಡವಾಗಿ ಪ್ರಾರಂಭ ಮಾಡಿ ಇಲ್ಲ ಸಲ್ಲದ ನೆಪವಡ್ಡಿ ರೈತರಿಂದ ಹಣ ಸುಲಿಗೆ ಮಾಡುತ್ತಿರುವುದು ಜಿಲ್ಲೆಯ ಪ್ರತಿ ಖರೀದಿ ಕೇಂದ್ರದಲ್ಲೊ ನಡೆಯುತ್ತಿದೆ ಇದಕ್ಕೆಲ್ಲಾ ಸರ್ಕಾರವೇ ನೇರ ಹೊಣೆ ಯಾಗಿದೆ ಇಂತಹ ಹಗರಣಗಳು ನಡೆಯುತ್ತಿವೆ ಜೋಳ ಖರೀದಿ ವಿಚಾರದಲ್ಲಿ ಹಾಗಾಗಿ ತಾಲೂಕಿನ ಜನಪ್ರತಿನಿಧಿಗಳಾದವರು ಮಧ್ಯಪ್ರವೇಶ ಮಾಡಿ ರೈತರಿಂದ ಸುಲಿಗೆ ಮಾಡುತ್ತಿರುವುದನ್ನು ತಡೆಗಟ್ಟಬೇಕೆಂದು ಕರ್ನಾಟಕ ರೈತ ಸಂಘದ ಹಸಿರು ಸೇನೆ ರಾಜ್ಯ ಪ್ರಧಾನ ಕಾರ್ಯದರ್ಶಿ ಬಸವರಾಜ ಗುಡಿಹಾಳ ಆಗ್ರಹಿಸಿದರು. ನಂತರ ಪ್ರತಿಭಟನೆ ವಿಷಯ ತಿಳಿದ ಪ್ರತಿಭಟನಾ ಸ್ಥಳಕ್ಕೆ ಸಿಪಿಐ ವಿನಯಕುಮಾರ್ ಆಗಮಿಸಿ ಪ್ರತಿಭಟನೆ ತಿಳಿಗೊಳಿಸಿದರು. ಈ ಸಂದರ್ಭದಲ್ಲಿ: ರಾಜಶೇಖರ್ ಪಾಸುಪತಿ ರಂಗಪ್ಪ ನಾಯಕ್ ಶರಣಪ್ಪ ಕಟಲಿ ವಿರೇಶ್ ನಾಯಕ್ ಬಸವರಾಜ ಅರೇಟನೂರ್ ಕರಿಯಪ್ಪ ಕನಕಪ್ಪ ಸಿದ್ದಲಿಂಗಪ್ಪ ಈರಣ್ಣ ದೇವಿಪುರ ನೂರಾರು ರೈತರು ಇದ್ದರು

# 2ನೇ ಸಮ್ಮೇಳನಾಧ್ಯಕ್ಷರಾಗಿ ಶ್ರೀನಿವಾಸ ಚಿತ್ರಗಾರ ಆಯ್ಕೆ

• ಮಲ್ಲಮ್ಮ ನುಡಿವಾರ್ತೆ ಕೊಪ್ಪಳ

ಕೊಪ್ಪಳ ತಾಲೂಕ ಎರಡನೇ ಚುಟುಕು ಸಾಹಿತ್ಯ ಸಮ್ಮೇಳನ ಸವಾ9ಧ್ಯಕ್ಷರಾಗಿ ಶಿಕ್ಷಕ ಹಾಗೂ ಕವಿ ಶ್ರೀನಿವಾಸ ಚಿತ್ರಗಾರ ಅವರನ್ನು ಆಯ್ಕೆ ಮಾಡಲಾಗಿದೆ .

ತಾಲೂಕಿನ ಕಿನ್ನಾಳ ಗ್ರಾಮದ ಇವರು ಯತ್ನಟ್ಟಿಯ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಶಿಕ್ಷಕರಾಗಿ ಸೇವೆ ಸಲ್ಲಿಸುತ್ತಿದ್ದಾರೆ, 58 ರ ಹರೆಯದ ಹಿರಿಯ ಕವಿ 15ಕ್ಕೂ ಅಧಿಕ ಮಕ್ಕಳ ಸಾಹಿತ್ಯ ಸೇರಿದಂತೆ ಇತರೆ ಪುಸ್ತಕಗಳನ್ನು ಪ್ರಕಟಿಸಿದ್ದಾರೆ. ಜೊತೆಗೆ ನಾಡಿನ ವಿವಿಧೆಡೆ ನೂರಾರು ಕವಿಗೋಷ್ಠಿಗಳಲ್ಲಿ ಭಾಗವಹಿಸಿದ್ದು, ಹಲವಾರು ಕಾರ್ಯಕ್ರಮಗಳ ಸಭೆ ಸಮಾರಂಭಗಳ

ಉದ್ಘಾಟಕರಾಗಿ, ಅಧ್ಯಕ್ಷರಾಗಿ ಉಪನ್ಯಾಸಕಾರರಾಗಿ ಉಪನ್ಯಾಸ ನೀಡಿದ್ದಾರೆ.

ಸ್ಥಳೀಯ ಸಾಹಿತ್ಯ ಸಮ್ಮೇಳನಗಳ ಕೆಲವು ಸ್ಮರಣ ಸಂಚಿಕೆಗಳಲ್ಲಿ ಸಂಪಾದಕ ಮಂಡಳಿಯ ಸದಸ್ಯರಾಗಿ ಕಾರ್ಯನಿರ್ವಹಿಸಿದ್ದಾರೆ.

ಸಮ್ಮೇಳನವು ಬರುವ ಮೇ ಕೊನೆ ವಾರದಲ್ಲಿ ಕೊಪ್ಪಳ ನಗರ ಅಥವಾ ಗ್ರಾಮೀಣ ಭಾಗಗಳಲ್ಲಿ ಅಚ್ಚುಕಟ್ಟಾಗಿ ನಡೆಸಲು ಸಭೆಯಲ್ಲಿ ನಿಧ9ರಿಸಲಾಯಿತು.

ಸಭೆಯಲ್ಲಿ ಪರಿಷತ್ ಜಿಲ್ಲಾಧ್ಯಕ್ಷ ರುದ್ರಪ್ಪ ಆರ್ ಭಂಡಾರಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಡಾ. ಮಹಾಂತೇಶ್ ನೆಲಾಗಣಿ, ತಾಲುಕು ಅಧ್ಯಕ್ಷ ಮೈಲಾರಪ್ಪ ಉಂಕೀ , ಪದಾಧಿಕಾರಿಗಳಾದ ಶಿವಪ್ರಸಾದ ಹಾದಿಮನಿ, ಶಿವಪ್ಪ ಕೊಗಳಿ, ಬಸವಶ್ರೀ ಸೋಮನಾಳ ಇತರರೂ ಹಾಜರಿದ್ದರು.

## 6ನೇ ಪ್ರವೇಶಾತಿಗೆ ಪರೀಕ್ಷೆ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಜಿಲ್ಲೆಯಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ (ಆಂಗ್ಲ ಮಾಧ್ಯಮ) ಶಾಲೆ ಹಾಗೂ ಡಾ.ಎ.ಪಿ.ಜೆ ಅಬ್ದುಲ್ ಕಲಾಂ ವಸತಿ (ಸಿ.ಬಿ.ಎಸ್.ಇ) ಶಾಲೆಯ ದಾಖಲಾತಿಗಾಗಿ 2026–27ನೇ ಶೈಕ್ಷಣಿಕ ವರ್ಷಕ್ಕೆ 6ನೇ ತರಗತಿಗೆ ಉಚಿತ ಪ್ರವೇಶಕ್ಕಾಗಿ ಏ.12 ರಂದು ಪ್ರವೇಶ ಪರೀಕ್ಷೆ ನಡೆಯಲಿದೆ.

ಪ್ರವೇಶ ಪತ್ರ (ಹಾಲ್ ಟಿಕೆಟ್) ಗಳನ್ನು ಡೌನ್ ಲೋಡ್ ಮಾಡಿಕೊಳ್ಳಲು ಅಲ್ಪಸಂಖ್ಯಾತರ ನಿರ್ದೇಶನಾಲಯದ ಅಧಿಕೃತ ವೆಬ್‌ಸೈಟ್ https://erp.dom.karnataka.gov.in/adm/Admission/StudentHallticket ಗೆ ಭೇಟಿ ನೀಡಬಹುದಾಗಿದೆ.

ಈಗಾಗಲೇ ಪ್ರತಿ ವಿದ್ಯಾರ್ಥಿಯ ಮೊಬೈಲ್ ಸಂಖ್ಯೆಗೂ ಕೂಡ ಪ್ರವೇಶ ಪತ್ರದ ಲಿಂಕ್ ಅನ್ನು ವೈಯಕ್ತಿಕವಾಗಿ ಕಳಿಸಲಾಗಿದೆ. ಅಲ್ಲಿಯೂ ಕೂಡ ಡೌನ್‌ಲೋಡ್ ಮಾಡಿಕೊಳ್ಳಬಹುದಾಗಿದೆ.

ಪರೀಕ್ಷಾ ಕೇಂದ್ರದ ಹೆಸರು:

ಬಳ್ಳಾರಿ ತಾಲ್ಲೂಕಿನ ಕೊಳಗಲ್ಲಿನ ಡಾ॥ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆ (ಸಿ.ಬಿ.ಎಸ್.ಇ)– 9844040035, ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ಬಾಲಕಿಯರ ಪದವಿ ಪೂರ್ವ ಕಾಲೇಜು– 7349008289.

ಬಳ್ಳಾರಿ ನಗರದ ಮುಖ್ಯ ಅಂಚೆ ಕಚೇರಿ ಹತ್ತಿರದ ಕರ್ನಾಟಕ ಪಬ್ಲಿಕ್ ಸ್ಕೂಲ್ ಬಾಲಕಿಯರ ಪ್ರೌಢ ಶಾಲಾ ಹಾಗೂ ಕಾಲೇಜು ವಿಭಾಗ–8861623814. ತೋರಣಗಲ್ಲು ಗ್ರಾಮದ ಓ.ಪಿ.ಜೆ ಸೆಂಟರ್ ಎದುರಗಡೆ–ಯ ಸರ್ಕಾರಿ ಪ್ರೌಢ ಶಾಲೆ–9480933730.ಕಂಪ್ಲಿಯ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ–7353346069. ಕುರುಗೋಡಿನ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ–988628614. ಸಿರುಗುಪ್ಪದ ತಾಲ್ಲೂಕು ಕ್ರೀಡಾಂಗಣ ಬಳಿಯ ಸರ್ಕಾರಿ ಪದವಿ ಪೂರ್ವ ಕಾಲೇಜು–9901739242.ಹೆಚ್ಚಿನ ಮಾಹಿತಿಗಾಗಿ ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರ ಹತ್ತಿರದ ಮೌಲಾನ ಅಜಾದ ಭವನದ ಜಿಲ್ಲಾ ಅಲ್ಪಸಂಖ್ಯಾತರ ಜಿಲ್ಲಾ ಅಧಿಕಾರಿಗಳ ಕಾರ್ಯಾಲಯ (ದೂ.08392–200125/224) ಅಥವಾ ಸಹಾಯವಾಣಿ ಕೇಂದ್ರ(24X7) 8277799990 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಹಿಳೆಯರ ದೃಢಸಂಕಲ್ಪ ಶಕ್ತಿಯೇ ಸಮಾಜದ ಬುನಾದಿ: ಜಯಲಕ್ಷ್ಮೀ

• ಮಲ್ಲಮ್ಮ ನುಡಿ ವಾರ್ತೆ, ಬಳ್ಳಾರಿ



ಇತಿಹಾಸದುದ್ದಕ್ಕೂ ಮಹಿಳೆಯರು ತಮ್ಮ ಅಪ್ರತಿಮ ದೃಢಸಂಕಲ್ಪ, ತ್ಯಾಗ ಮತ್ತು ಶಕ್ತಿಯ ಮೂಲಕ ಸಮಾಜವನ್ನು ರೂಪಿಸುತ್ತಾ ಬಂದಿದ್ದಾರೆ ಎಂದು ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯರಾದ ಜೆ. ಜಯಲಕ್ಷ್ಮೀ ಅವರು ಅಭಿಪ್ರಾಯಪಟ್ಟರು.

ಇಲ್ಲಿಯ ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ಜೀವ ವಿಜ್ಞಾನ ಸಭಾಂಗಣದಲ್ಲಿ ಮಂಗಳವಾರ ಆಯೋಜಿಸಿದ್ದ "ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ" ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಶಿಕ್ಷಣ, ವ್ಯಾಪಾರ, ವಿಜ್ಞಾನ, ಕಲೆ, ರಾಜಕೀಯ ಸೇರಿದಂತೆ ಪ್ರತಿಯೊಂದು ಕ್ಷೇತ್ರದಲ್ಲೂ ಮಹಿಳೆಯರು ಪುರುಷರಿಗೆ ಸರಿಸಮಾನವಾಗಿ, ಕೆಲಸ ಮಾಡುತ್ತಿದ್ದಾರೆ. ಮನೆಗೆ ಬೆಳಕಾಗುವ ಹೆಣ್ಣು, ದೇಶದ ಅಭಿವೃದ್ಧಿಗೂ ಅಷ್ಟೇ ಪ್ರಮುಖ ಕೊಡುಗೆ ನೀಡುತ್ತಿದ್ದಾಳೆ ಎಂದು ತಿಳಿಸಿದರು.

ಮಹಿಳೆಗೆ ಇಂದು ಬೇಕಿರುವುದು ಕೇವಲ ಮೆಚ್ಚುಗೆಯಲ್ಲ, ಬದಲಾಗಿ ಸಮಾನ ಹಕ್ಕು ಮತ್ತು ಅವಕಾಶ. ಅದೇ ರೀತಿಯಾಗಿ ಶೋಷಿತ ಮಹಿಳೆಯರಿಗೆ ನ್ಯಾಯ ಒದಗಿಸಲು ಎಲ್ಲ ಮಹಿಳೆಯರು ಮುಂದಾಗಬೇಕು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ವಿಶ್ವವಿದ್ಯಾಲಯದ ಕುಲಪತಿ ಪ್ರೊ.ಎಂ. ಮುನಿರಾಜು ಅವರು ಮಾತನಾಡಿ, ಲಿಂಗ ಸಮಾನತೆಗಾಗಿ ಪ್ರತಿಪಾದಿಸುವುದರ ಜೊತೆಗೆ ಮಹಿಳೆಯರು ಸಾಮಾಜಿಕ, ಆರ್ಥಿಕ, ಸಾಂಸ್ಕೃತಿಕ ಮತ್ತು ರಾಜಕೀಯವಾಗಿ ಸದೃಢವಾಗಬೇಕಾಗಿದೆ ಎಂದು ಕರೆ ನೀಡಿದರು.

ಪ್ರಸ್ತುತದಲ್ಲಿ ಮಹಿಳೆಯರು ಎದುರಿಸುತ್ತಿರುವ ಸಮಸ್ಯೆ ಮತ್ತು ಸವಾಲುಗಳ ಬಗ್ಗೆ ಜಾಗೃತಿ ಮೂಡಿಸುವ ಕಾರ್ಯವಾಗಬೇಕಾಗಿದೆ. ವಿವಿಯಲ್ಲಿ ವಿದ್ಯಾರ್ಥಿನಿಯರಿಗೆ ಶಿಕ್ಷಣದ ಜೊತೆಗೆ ಕೌಶಲ್ಯಾಧಾರಿತ ಶಿಕ್ಷಣಕ್ಕೆ ಉತ್ತೇಜನ ನೀಡುವುದರ ಜೊತೆಗೆ ಮೂಲಭೂತ ಸೌಕರ್ಯ ಒದಗಿಸಲಾಗುವುದು ಎಂದು ಹೇಳಿದರು.

ವಿಶ್ವವಿದ್ಯಾಲಯದ ನೂತನ ಹಣಕಾಸು ಅಧಿಕಾರಿಯಾದ ಕೆ.ಜಿ ಸ್ಫೂರ್ತಿ ವೇದಿಕೆ ಮೇಲೆ ಉಪಸ್ಥಿತರಿದ್ದರು.

ಕಾರ್ಯಕ್ರಮದ ಸಂಯೋಜಕರಾದ ಶ್ರೀದೇವಿ ಆಲೂರು ಅತಿಥಿಗಳನ್ನು ಸ್ವಾಗತಿಸಿದರು. ಮಹಿಳಾ ಅಧ್ಯಯನ ವಿಭಾಗದ ಅತಿಥಿ ಉಪನ್ಯಾಸಕ ಸಿದ್ಧರಾಮಪ್ಪ ಪೂಜಾರಿ ನಿರೂಪಿಸಿ, ವಂದಿಸಿದರು.

ವಿವಿಧ ನಿಕಾಯಗಳ ಡೀನರು, ವಿವಿಧ ವಿಭಾಗಗಳ ಮುಖ್ಯಸ್ಥರು, ಸಂಯೋಜಕರು, ಸಂಶೋಧನಾ ವಿದ್ಯಾರ್ಥಿಗಳು, ಬೋಧಕೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಹಾಜರಿದ್ದರು.

## ವಿವಿಧೆಡೆ ವಿದ್ಯುತ್ ವ್ಯತ್ಯಯ

• ಮಲ್ಲಮ್ಮ ನುಡಿ ವಾರ್ತೆ, ವಿಜಯನಗರ

ಏ.08:66/11ಕೆ.ವಿ ವೆಂಕಟಾಪುರ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತುರ್ತು ನಿರ್ವಹಣಾ ಕಾಮಗಾರಿ ಹಮ್ಮಿಕೊಂಡಿರುವುದರಿಂದ ಏಪ್ರಿಲ್ 8ರ ಬೆಳಿಗ್ಗೆ 10ರಿಂದ ಮದ್ಯಾಹ್ನ 02ವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ. ವಿದ್ಯುತ್ ಅಡಚಣೆಯಾಗುವ ಮಾರ್ಗಗಳು: 66/11ಕೆ.ವಿ ವೆಂಕಟಾಪುರ ವಿದ್ಯುತ್ ವಿತರಣಾ ಕೇಂದ್ರದ ಮರಿಯಮ್ಮನಹಳ್ಳಿ ಶಾಖಾ ವ್ಯಾಪ್ತಿಗೆ ಬರುವ ದೇವಲಾಪುರ, ಡಣಾಯಕನಕೆರೆ, ಗೊಲ್ಲರಹಳ್ಳಿ, ನಾಗಲಾಪುರ, ನಾಗಲಾಪುರ ತಾಂಡಾ, ಗರಗ, ನಂದಿಬಂಡಿ, ಅಯ್ಯನಹಳ್ಳಿ, ವೆಂಕಟಾಪುರ ಮತ್ತು ವ್ಯಾಸನಕೆರೆ ಗ್ರಾಮಗಳಲ್ಲಿ ವಿದ್ಯುತ್ ಅಡಚಣೆ ಆಗಲಿದೆ. ನೀರಾವರಿ ಪಂಪ್ ಸೆಟ್ ರೈತರಿಗೆ ಬೆಳಗಿನ ಜಾವ 4 ರಿಂದ 10ರವರೆಗೆ ವಿದ್ಯುತ್ ಸರಬರಾಜು ಮಾಡಲಾಗುವುದು ಆದ್ದರಿಂದ ಎಲ್ಲ ರೈತ ಹಾಗೂ ಗ್ರಾಹಕರು ಸಹಕರಿಸಬೇಕೆಂದು ಜೆಸ್ಕಾಂ ಕಾರ್ಯ ಮತ್ತು ಪಾಲನಾ ಗ್ರಾಮೀಣ ಉಪ ವಿಭಾಗದ ಸಹಾಯಕ ಕಾರ್ಯನಿರ್ವಹಕ ಎಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ

## 6ನೇ ತರಗತಿಗೆ ಪ್ರವೇಶ

• ಮಲ್ಲಮ್ಮ ನುಡಿ ವಾರ್ತೆ, ವಿಜಯನಗರ

ಏ.07:2026–27ನೇ ಸಾಲಿಗೆ ಪರಿಶಿಷ್ಟ ಪಂಗಡ ವಿದ್ಯಾರ್ಥಿಗಳಿಗೆ ಪ್ರತಿಷ್ಠಿತ ಶಾಲೆಗಳಲ್ಲಿ ಅರ್ಹತಾ ಪರೀಕ್ಷೆ ಮೂಲಕ 6ನೇ ತರಗತಿಗೆ ಪ್ರವೇಶಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ. ಏಪ್ರಿಲ್ 15 ರಿಂದ ಅರ್ಜಿ ಸಲ್ಲಿಕೆ ಪ್ರಕ್ರಿಯೆ ಆರಂಭವಾಗಲಿದ್ದು, ಮೇ 4 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ.

ಅರ್ಜಿ ಸಲ್ಲಿಸುವ ವಿದ್ಯಾರ್ಥಿಯು ಪರಿಶಿಷ್ಟ ಪಂಗಡಕ್ಕೆ ಸೇರಿದವರಾಗಿದ್ದು, ಜಿಲ್ಲಾ ವ್ಯಾಪ್ತಿಗೆ ಒಪಟ್ಟಿರಬೇಕು. 5ನೇ ತರಗತಿಯಲ್ಲಿ ಶೇ.60ರಷ್ಟು ಅಂಕ ಪಡೆದಿರಬೇಕು. ಕುಟುಂಬದ ವಾರ್ಷಿಕ ಆದಾಯ ರೂ.2.50 ಲಕ್ಷ ಮೀರಿರಬಾರದು. ಗಳೊಳಗಿರುವ ಅರ್ಹ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದು. ಮೇ 19ರಂದು ಕೌನ್ಸಿಲಿಂಗ್ ನಡೆಸುವ ಮೂಲಕ ಆಯ್ಕೆ ಮಾಡಲಾಗುವುದು. ಅವಧಿ ನಂತರ ಬಂದಂತಹ ಅರ್ಜಿ ಅಥವಾ ಅಪೂರ್ಣಗೊಂಡ ಅರ್ಜಿಗಳನ್ನು ತಿರಸ್ಕರಿಸಲಾಗುವುದು. ಅರ್ಜಿ ಪಡೆಯಲು ಹಾಗೂ ಭರ್ತಿ ಮಾಡಿದ ಅರ್ಜಿಗಳನ್ನು ಸಂಬಂಧಿಸಿದ ಆಯಾ ತಾಲ್ಲೂಕು ಸಮಾಜ ಕಲ್ಯಾಣ ಇಲಾಖೆಗೆ ಸಂಪರ್ಕಿಸಬಹುದು.

ಹೆಚ್ಚಿನ ಮಾಹಿತಿಗಾಗಿ ತಾಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಹೊಸಪೇಟೆ ದೂರವಾಣಿ ಸಂಖ್ಯೆ 9901147362, 7353139094 ಗೆ ಸಂಪರ್ಕಿಸಬಹುದು ಎಂದು ತಾಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವ್ಯಕ್ತಿ ಕಾಣೆ; ಪತ್ತೆಗೆ ಮನವಿ

• ಮಲ್ಲಮ್ಮ ನುಡಿ ವಾರ್ತೆ, ಬಳ್ಳಾರಿ

ತಾಲ್ಲೂಕಿನ ಕೊಳಗಲ್ಲು ಗ್ರಾಮದ ರ್ರಿತಾತ ದೇವಸ್ಥಾನ ಹತ್ತಿರದ 3 ನೇ ವಾರ್ಡ್ನ ನಿವಾಸಿಯಾದ ಶಂಕ್ರಪ್ಪ ಎನ್ನುವ 37 ವರ್ಷದ ವ್ಯಕ್ತಿ ಫೆ.24 ರಂದು ಮನೆಯಿಂದ ಹೊರ ಹೋಗಿ ಮನೆಗೆ ಬಾರದೇ ಕಾಣೆಯಾಗಿರುವ ಕುರಿತು ಬಳ್ಳಾರಿ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪತ್ತೆಗೆ ಸಹಕರಿಸಬೇಕು ಎಂದು ಪೊಲೀಸ್ ಸಬ್ ಇನ್ಸಕ್ಟರ್ ಮನವಿ ಮಾಡಿದ್ದಾರೆ.ವ್ಯಕ್ತಿಯ ಚಹರೆ: ಎತ್ತರ 5.1 ಅಡಿ, ಕೋಲು ಮುಖ, ಕಪ್ಪು ಮೈಬಣ್ಣ, ಸಾಧಾರಣ ಮೈಕಟ್ಟು, ಕಪ್ಪು ಕೂದಲು ಹೊಂದಿದ್ದು, ಕನ್ನಡ ಭಾಷೆ ಮಾತನಾಡುತ್ತಾನೆ.ಕಾಣೆಯಾದ ಸಂದರ್ಭದಲ್ಲಿ ತುಂಬು ತೋಳಿನ ಬಿಳಿ, ಕಂದು ಬಣ್ಣದ ಚೆಕ್ಸ್ ಇರುವ ಗೋಧಿ ಬಣ್ಣದ ಅಂಗಿ ಹಾಗೂ ಕಂದು ಬಣ್ಣದ ಲುಂಗಿ ಧರಿಸಿರುತ್ತಾನೆ.ಕಾಣೆಯಾದ ವ್ಯಕ್ತಿಯ ಬಗ್ಗೆ ಯಾವುದೇ ಮಾಹಿತಿ ಸಿಕ್ಕಲ್ಲಿ, ಬಳ್ಳಾರಿ ಗ್ರಾಮೀಣ ಪೊಲೀಸ್ ಠಾಣೆ ದೂ.08392–276461, ಮೊ.9480803049 ಅಥವಾ ಬಳ್ಳಾರಿ ಪೊಲೀಸ್ ಕಂಟ್ರೋಲ್ ರೂಂ ದೂ.08392–258100 ಗೆ ಕರೆ ಮಾಡಿ ಮಾಹಿತಿ ನೀಡಬಹುದಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರಿವಿನ ಗವಿಯಲ್ಲಿ ಹಡಪದ ಅಪ್ಪಣ್ಣ ಮೂರ್ತಿಯನ್ನು ಪುನಃ ಸ್ಥಾಪಿಸಿ: ಕುಮಾರ್



• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಬೀದರ್ ಜಿಲ್ಲೆಯ ಬಸವಕಲ್ಯಾಣದ ಅನುಭವ ಮಂಟಪದ ತ್ರಿಪುರಾಂತಕ ಕೆರೆಹತ್ತಿರ ಇರುವ ಹಡಪದ ಅಪ್ಪಣ್ಣನವರ ಅರಿವಿನ ಗವಿಯಲ್ಲಿ ಶಿವಶರಣ ಹಡಪದ ಅಪ್ಪಣ್ಣ ಮೂರ್ತಿಯನ್ನು ಸ್ಥಾಪನೆ ಮಾಡಲಾಗಿತ್ತು, ಆದರೆ ಬಸವೇಶ್ವರ ದೇವಸ್ಥಾನದ ಪಂಚ ಕಮಿಟಿಯವರು ಹಸ್ತಕ್ಷೇಪ ಮಾಡಿ ಶಿವಶರಣ ಹಡಪದ ಅಪ್ಪಣ್ಣನವರ ಮೂರ್ತಿಯನ್ನು ತೆರವುಗೊಳಿಸಿ ಆ ಸ್ಥಳದಲ್ಲಿ ಅನ್ಯ ಶರಣರ ಮೂರ್ತಿಯನ್ನು ಪ್ರತಿಷ್ಠಾಪನೆ ಮಾಡಿರುವುದು ಖಂಡನೀಯ ವಿಷಯ, ಈ ಪಂಚ ಕಮಿಟಿಯವರ ಈ ನಿರ್ಧಾರ ರಾಜ್ಯದ ಎಲ್ಲಾ ಹಡಪದ ಅಪ್ಪಣ್ಣ ಸಮಾಜಕ್ಕೆ ನೋವುಂಟು ಮಾಡಿರುತ್ತದೆ, ಮೊದಲಿದ್ದಂತೆ ಅರುವಿನ ಗವಿಯಲ್ಲಿ ಪುನಃ ಯಥವತ್ತಾಗಿ ಶಿವಶರಣ ಹಡಪದ ಅಪ್ಪಣ್ಣನವರ ಮೂರ್ತಿಯನ್ನು ಸ್ಥಾಪಿಸಿ ಅಪ್ಪಣ್ಣ ಸಮಾಜದವರಿಗೆ ನ್ಯಾಯ ಒದಗಿಸಬೇಕೆಂದು ಕರ್ನಾಟಕ ರಾಜ್ಯ ಶಿವಶರಣ ಹಡಪದ ಅಪ್ಪಣ್ಣ ಸಮಾಜ ಸೇವಾ ಸಂಘದ ರಾಜ್ಯ ಸಂಘಟನಾ ಕಾರ್ಯದರ್ಶಿ ಹೆಚ್ ಶಶಿಕುಮಾರ್ ಆಗ್ರಹಿಸಿದರು.

ಈ ಕುರಿತು ಅವರಿಂದು ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಪತ್ರವನ್ನು ರವಾನಿಸಿ ಮಾತನಾಡಿ, ಬಸವಕಲ್ಯಾಣದ ಪಂಚ ಕಮಿಟಿಯವರ ನಿರ್ಧಾರ ಹಡಪದ ಅಪ್ಪಣ್ಣ ಸಮಾಜಕ್ಕೆ ನೋವು ತಂದಿದೆ, ಹಡಪದ ಅಪ್ಪಣ್ಣನವರು ವಿಶ್ವಗುರು ಸಾಂಸ್ಕೃತಿಕ ನಾಯಕ ಎಂದು ಹೆಸರಾದ ಬಸವಣ್ಣನವರ ಆಪ್ತ ಕಾರ್ಯದರ್ಶಿಯಾಗಿದ್ದರು ಈ ಸ್ಮರಣಾರ್ಥವಾಗಿ ಅಪ್ಪಣ್ಣನವರ ಮೂರ್ತಿಯನ್ನು ಅರಿವಿನ ಗವಿಯಲ್ಲಿ ಪ್ರತಿಷ್ಠಾಪಿಸಲಾಗಿತ್ತು ಆದರೆ ಇತ್ತೀಚಿಗೆ ಪಂಚ ಕಮಿಟಿ ಸದಸ್ಯರು ಹಡಪದ ಅಪ್ಪಣ್ಣನವರ ಮೂರ್ತಿಯನ್ನು ತೆರವುಗೊಳಿಸಿದ್ದಾರೆ, ಈ ವಿಷಯದ ಕುರಿತು ಸಂಬಂಧಿಸಿದ ಅಧಿಕಾರಿಗಳು ತಕ್ಷಣ ಕ್ರಮ ಕೈಗೊಂಡು ಮೊದಲಿದ್ದಂತೆ ಅದೇ ಸ್ಥಳದಲ್ಲಿ ಹಡಪದ ಅಪ್ಪಣ್ಣನವರ ಮೂರ್ತಿಯನ್ನು ಪ್ರತಿಷ್ಠಾಪಿಸಿ ನಮ್ಮ ಜನಾಂಗಕ್ಕೆ ನ್ಯಾಯ ಕೊಡಿಸಬೇಕೆಂದು ಮುಖ್ಯಮಂತ್ರಿಗಳಲ್ಲಿ ವಿನಂತಿಸಿದರು.

ಈ ವಿಷಯದ ಕುರಿತು ಈಗಾಗಲೇ ಅನೇಕ ಬಾರಿ ಮಠಾಧೀಶರು ಸಮಾಜದ ನಾಯಕರು ಹಡಪದ ಅಪ್ಪಣ್ಣ ಪರವಾಗಿ ಹಲವಾರು ಬಾರಿ ಮನವಿ ಮಾಡಿ

ಹೋರಾಟ ನಡೆಸಿದರು ಇನ್ನು ನಮಗೆ ನ್ಯಾಯ ಸಿಕ್ಕಿರುವುದಿಲ್ಲ ಕಾರಣ ಆದಷ್ಟು ಶೀಘ್ರದಲ್ಲಿ ಅರಿವಿನ ಗವಿಯಲ್ಲಿ ಹಡಪದ ಅಪ್ಪಣ್ಣನವರ ಮೂರ್ತಿಯನ್ನು ಪ್ರತಿಷ್ಠಾಪಿಸಬೇಕೆಂದರು. ಈ ಸಂದರ್ಭದಲ್ಲಿ ಬಳ್ಳಾರಿ ಜಿಲ್ಲಾ ಶ್ರೀ ಶಿವಶರಣ ಹಡಪದ ಅಪ್ಪಣ್ಣ ಸಮಾಜ ಸೇವಾ ಸಂಘದ ಜಿಲ್ಲಾಧ್ಯಕ್ಷ ಎಚ್ ರುದ್ರಪ್ಪ , ಜಿಲ್ಲಾ ಸಂಚಾಲಕ ಎಚ್ ಅಮರೇಶ್, ತಾಲೂಕ ಅಧ್ಯಕ್ಷ ಎಚ್ ಶಿವರಾಜ್ ಜಿಲ್ಲಾ ಪ್ರತಿನಿಧಿ ಎಚ್ ಸದಾಶಿವ ಸೇರಿದಂತೆ ಹಲವಾರು ಜನ ಹಡಪದ ಅಪ್ಪಣ್ಣ ಸಮಾಜದ ಜನರಿದ್ದರು.

## ಬಳ್ಳಾರಿಗೆ ಡಿಜಿಪಿ ಭೇಟಿ: ಭ್ರಷ್ಟಾಚಾರ ಮುಕ್ತ ಸೇವೆಗೆ ಕರೆ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ಸಾರ್ವಜನಿಕರೊಂದಿಗೆ ಸ್ನೇಹಪರವಾಗಿದ್ದುಕೊಂಡು, ಭ್ರಷ್ಟಾಚಾರ ಮುಕ್ತ ಮತ್ತು ನಿಷ್ಪಕ್ಷಪಾತವಾಗಿ ಕರ್ತವ್ಯ ನಿರ್ವಹಿಸುವಂತೆ ರಾಜ್ಯ ಪೊಲೀಸ್ ಮಹಾನಿರ್ದೇಶಕರು (ಡಿಜಿಪಿ) ಹಾಗೂ ಮಹಾನಿರೀಕ್ಷಕರಾದ ಡಾ.ಎಂ.ಎ. ಸಲೀಂ ಅವರು ಅಧಿಕಾರಿಗಳಿಗೆ ಸೂಚಿಸಿದರು.

ನಗರದ ಜಿಲ್ಲಾ ಪೊಲೀಸ್ ಕಚೇ–ರಿಯ ಸಭಾಂಗಣದಲ್ಲಿ ಹಿರಿಯ ಪೊಲೀಸ್ ಅಧಿಕಾರಿಗಳೊಂದಿಗೆ ವಿಮರ್ಶನಾ ಸಭೆ ನಡೆಸಿ ಅವರು ಮಾತನಾಡಿದರು.

ಇಲಾಖೆಗೆ ಹೊಸದಾಗಿ ಸೇರ್ಪಡೆಯಾಗುತ್ತಿರುವ ಕಿರಿಯ ಅಧಿಕಾರಿಗಳಿಗೆ ಹಿರಿಯರು ತಮ್ಮ ಅನುಭವಗಳನ್ನು ಹಂಚಿಕೊಳ್ಳುವ ಮೂಲಕ ಅವರ ವೃತ್ತಿ ಕೌಶಲ್ಯವನ್ನು ಹೆಚ್ಚಿಸಬೇಕು ಎಂದು ಕಿವಿಮಾತು ಹೇಳಿದರು.ಆಧುನಿಕ ಕಾಲಘಟ್ಟದಲ್ಲಿ ಅಪರಾಧ ತಡೆಗೆ ತಂತ್ರಜ್ಞಾನದ ಪಾತ್ರ ದೊಡ್ಡದಿದೆ. ಪೊಲೀಸ್ ವ್ಯವಸ್ಥೆಯಲ್ಲಿ ಅಳವಡಿಸಲಾಗಿರುವ ಅತ್ಯಾಧುನಿಕ ತಂತ್ರಜ್ಞಾನದ ಕುರಿತು ಸಿಬ್ಬಂದಿಗಳು ಸೂಕ್ತ ತರಬೇತಿ ಪಡೆಯಬೇಕು. ಪ್ರಕರಣಗಳ ತನಿಖೆಯಲ್ಲಿ ಈ ತಂತ್ರಜ್ಞಾನವನ್ನು ಸಮರ್ಪಕವಾಗಿ ಬಳಸಿಕೊಳ್ಳುವ ಮೂಲಕ ಕಾನೂನು ಸುವ್ಯವಸ್ಥೆಯನ್ನು ಕಾಪಾಡಬೇಕು ಎಂದು ಅವರು ನಿರ್ದೇಶನ ನೀಡಿದರು.

*ಪೊಲೀಸ್ ವಸತಿ ಗೃಹಗಳಿಗೆ ಭೇಟಿ:

ಸಭೆಯ ನಂತರ ರಾಜ್ಯ ಪೊಲೀಸ್ ಮಹಾನಿರ್ದೇಶಕರು (ಡಿಜಿಪಿ) ಹಾಗೂ ಮಹಾನಿರೀಕ್ಷಕರಾದ ಡಾ.ಎಂ.ಎ. ಸಲೀಂ ಅವರು ಡಿ.ಎ.ಆರ್ ಪೊಲೀಸ್ ವಸತಿ ಗೃಹಗಳ ಸಂಕೀರ್ಣಕ್ಕೆ ಭೇಟಿ ನೀಡಿ, ಅಲ್ಲಿ ವಾಸಿಸುತ್ತಿರುವ ಅಧಿಕಾರಿಗಳು ಹಾಗೂ ಸಿಬ್ಬಂದಿ ಕುಟುಂಬದವರ ಕುಂದುಕೊರತೆಗಳನ್ನು ಆಲಿಸಿದರು. ಇದಾದ ಬಳಿಕ ಬಳ್ಳಾರಿ ನಗರದ ಬ್ರೂಸ್‌ಪೇಟೆ ಪೊಲೀಸ್ ಠಾಣೆಗೂ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಈ ವೇಳೆ ಬಳ್ಳಾರಿ ವಲಯ ಪೊಲೀಸ್ ಉಪಮಹಾನಿರೀಕ್ಷಕರಾದ ಡಾ.ಹರ್ಷ, ಜಿಲ್ಲಾ ಪೊಲೀಸ್ ಅಧೀಕ್ಷಕರಾದ ಡಾ.ಸುಮನ್ ಡಿ.ಪೆನ್ನೇಕರ್, ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಸ್.ನವೀನ್ ಕುಮಾರ್ ಸೇರಿದಂತೆ ಡಿಎಸ್‌ಪಿ ಅಧಿಕಾರಿಗಳು ಹಾಗೂ ಇತರೆ ಪೊಲೀಸ್ ಅಧಿಕಾರಿಗಳು ಉಪಸ್ಥಿತರಿದ್ದರು.

## ಆಕ್ಷೇಪಣೆ ಸಲ್ಲಿಸಲು ಅವಕಾಶ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಬಳ್ಳಾರಿ ಮಹಾನಗರ ಪಾಲಿಕೆ ವ್ಯಾಪ್ತಿಯ ವಿವಿಧ ವೃತ್ತ ಹಾಗೂ ರಸ್ತೆಗಳಿಗೆ ನಾಮಕರಣ ಮಾಡಲು ಉದ್ದೇಶಿಸಲಾಗಿದ್ದು, ಈ ಕುರಿತು ಸಲಹೆ, ಆಕ್ಷೇಪಣೆಗಳಿದ್ದಲ್ಲಿ ಸಾರ್ವಜನಿಕರು ಪಾಲಿಕೆ ಕಚೇರಿಗೆ ಸಲ್ಲಿಸಬಹುದಾಗಿದೆ ಎಂದು ಮಹಾನಗರ ಪಾಲಿಕೆ ಆಯುಕ್ತ ಪಿ.ಎಸ್ ಮಂಜುನಾಥ್ ಅವರು ತಿಳಿಸಿದ್ದಾರೆ.

ವೃತ್ತ ಮತ್ತು ರಸ್ತೆಗಳಿಗೆ ಹೊಸದಾಗಿ ಹೆಸರು ನಾಮಕರಣ ಮಾಡಲು ಇತ್ತೀಚೆಗೆ ನಡೆದ ಸಾಮಾನ್ಯ ಸಭೆಯಲ್ಲಿ ತೀರ್ಮಾನಿಸಿ, ಸಭೆಯ ಸರ್ವಾನುಮತದಿಂದ ಮಂಜೂರಾತಿ ನೀಡಿದೆ.

ಬಳ್ಳಾರಿ ನಗರದ ವಾರ್ಡ್ ನಂ.34ರ ವಿದ್ಯಾನಗರ ವೃತ್ತಕ್ಕೆ "ಶ್ರೀ ದಿ॥ ಎ.ಸಿ.ವೆಂಕಟಸ್ವಾಮಿ ವೃತ್ತ", ಸಂಗನಕಲ್ಲು (ಮೋಕಾ ರಸ್ತೆ) ರಸ್ತೆಯ ರೇಣುಕಾ ಕಿಚನ್ ಎದುರುಗಡೆ ಭಗೀರಥ ನಾಮಫಲಕ ಅಳವಡಿಕೆ ಮತ್ತು ನಗರದ ಕೆ.ಕೆ.ಆರ್.ಟಿ.ಸಿ ಹೊಸ ಬಸ್ ನಿಲ್ದಾಣದ ಮುಂದೆ ಇರುವ ಮುಖ್ಯ ರಸ್ತೆಯಿಂದ ಶ್ರೀ ಮಾರ್ಕಂಡೇಶ್ವರ ದೇವಸ್ಥಾನಕ್ಕೆ ಸಂಪರ್ಕ ಕಲ್ಪಿಸುವ ರಸ್ತೆಯನ್ನು "ಶ್ರೀ ಭಕ್ತ ಮಾರ್ಕಂಡೇಶ್ವರ ರಸ್ತೆ" ಎಂದು ನಾಮಕರಣ ಮಾಡಲು ಉದ್ದೇಶಿಸಲಾಗಿದೆ.

ಹಾಗಾಗಿ, ಸಾರ್ವಜನಿಕರಿಂದ ಸಲಹೆ ಹಾಗೂ ಆಕ್ಷೇಪಣೆಗಳು ಇದ್ದಲ್ಲಿ, ಬಳ್ಳಾರಿ ಮಹಾನಗರಪಾಲಿಕೆಯ ಆಯುಕ್ತರ ಕಚೇರಿಗೆ 30 ದಿನಗಳೊಳಗಾಗಿ ಲಿಖಿತ ರೂಪದಲ್ಲಿ ಸಲ್ಲಿಸಬಹುದಾಗಿದೆ.

ನಿಗಧಿಪಡಿಸಿದ ಅವಧಿಯೊಳಗೆ ಯಾವುದೇ ಆಕ್ಷೇಪಣೆಗಳು ಸಲ್ಲಿಕೆಯಾಗದೇ ಇದ್ದಲ್ಲಿ ಸರ್ಕಾರದ ನಿಯಮಾನುಸಾರ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಆರೋಗ್ಯ ಕೇಂದ್ರದ ಕಟ್ಟಡ ದುರಸ್ತಿ; ಚಿಕಿತ್ಸೆಗೆ ಅವಕಾಶ

• ಮಲ್ಲಮ್ಮ ನುಡಿ ವಾರ್ತೆ, ಬಳ್ಳಾರಿ

ಬಳ್ಳಾರಿ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಕೇಂದ್ರದ (ಬಿಎಂಸಿಆರ್‌ಸಿ) ಅಡಿಯಲ್ಲಿ ಬರುವ ನಗರ ಆರೋಗ್ಯ ಕೇಂದ್ರದ ಕಟ್ಟಡದ ದುರಸ್ತಿ ಕಾರ್ಯ ಕೈಗೊಳ್ಳುತ್ತಿರುವುದರಿಂದ ಸಾರ್ವಜನಿಕರ ಹಿತದೃಷ್ಟಿಯಿಂದ ಚಿಕಿತ್ಸಾ ಸ್ಥಳವನ್ನು ತಾತ್ಕಾಲಿಕವಾಗಿ ಬದಲಾವಣೆ ಮಾಡಲಾಗಿದೆ.

ನಗರ ಆರೋಗ್ಯ ಕೇಂದ್ರದ ಕಟ್ಟಡ ನವೀಕರಣ ಮತ್ತು ದುರಸ್ತಿ ಕಾಮಗಾರಿ ನಡೆಯುತ್ತಿರುವ ಹಿನ್ನೆಲೆಯಲ್ಲಿ, ಅಲ್ಲಿಗೆ ಬರುವ ರೋಗಿಗಳಿಗೆ ಯಾವುದೇ ತೊಂದರೆಯಾಗಬಾರದು ಎಂಬ ಉದ್ದೇಶದಿಂದ ಚಿಕಿತ್ಸೆಯನ್ನು ಪರ್ಯಾಯ ಸ್ಥಳಕ್ಕೆ ವರ್ಗಾಯಿಸಲಾಗಿದ್ದು, ಕಾಮಗಾರಿ ಪೂರ್ಣಗೊಳ್ಳುವವರೆಗೆ ರೋಗಿಗಳು ಚಿಕಿತ್ಸೆಗಾಗಿ ಪಾರ್ವತಿ ನಗರದ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಬಹುದಾಗಿದೆ.

ಸಾರ್ವಜನಿಕರು ಸಹಕರಿಸಬೇಕು ಎಂದು ಬಳ್ಳಾರಿ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಕೇಂದ್ರದ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಏ.09 ಕ್ಕೆ ನೇರ ಸಂದರ್ಶನ

• ಮಲ್ಲಮ್ಮ ನುಡಿ ವಾರ್ತೆ, ಬಳ್ಳಾರಿ

ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ವತಿಯಿಂದ ಏ.09 ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 01 ಗಂಟೆಯವರೆಗೆ ನಗರದ ಹಳೆಯ ತಾಲ್ಲೂಕು ಕಚೇರಿ ಆವರಣದಲ್ಲಿನ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯಲ್ಲಿ ನೇರ ಸಂದರ್ಶನ ಏರ್ಪಡಿಸಲಾಗಿದೆ.

ಈ ನೇರ ಸಂದರ್ಶನದಲ್ಲಿ ಎಪ್ಸಿಲಾನ್ ಕಾರ್ಬನ್ ಪ್ರೈ. ಲಿ. ಮತ್ತು ಧ್ರುವ ಸೋಲಾರ್ ಪವರ್ ಕಂಪನಿಗಳು ಭಾಗವಹಿಸಲಿದ್ದು, ಇವರು ತಮ್ಮಲ್ಲಿನ ಖಾಲಿ ಇರುವ ಹುದ್ದೆಗಳನ್ನು ಸಂದರ್ಶನದ ಮೂಲಕ ನೇಮಕಾತಿ ಮಾಡಿಕೊಳ್ಳುವರು.ವಿದ್ಯಾರ್ಹತೆ: ಐಟಿಐ (ಫಿಟ್ಟರ್) ಅಥವಾ ಯಾವುದೇ ಪದವಿ ಹೊಂದಿದ ಪುರುಷ ಅಭ್ಯರ್ಥಿಗಳು ಮಾತ್ರ ಸಂದರ್ಶನದಲ್ಲಿ ಭಾಗವಹಿಸಬಹಿದಾಗಿದೆ.

ಅಭ್ಯರ್ಥಿಗಳು ತಮ್ಮ ಆಧಾರ್ ಕಾರ್ಡ್ ಪ್ರತಿ, ಸ್ವ–ವಿವರ ಪ್ರತಿ (ಬಯೋಡೇಟಾ) ಗಳೊಂದಿಗೆ ನೇರ ಸಂದರ್ಶನದಲ್ಲಿ ಭಾಗವಹಿಸಬಹುದು. ಯಾವುದೇ ಶುಲ್ಕ ಇರುವುದಿಲ್ಲ.ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದೋಗ ವಿನಿಮಯ ಕಚೇರಿ ಅಥವಾ ಮೊ.7619207762, 9663263086, 7676774293, 6360408094 ಗೆ ಕರೆ ಮಾಡಿ ಸಂಪರ್ಕಿಸಬಹುದು ಎಂದು ಉದ್ಯೋಗಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಾರ್ವಜನಿಕರಿಗೆ ಕುಡಿಯುವ ನೀರಿಗೆ ಸಮಸ್ಯೆಯಾಗದಿರಲಿ: ಸಿಇಒ

• ಮಲ್ಲಮ್ಮ ನುಡಿ ವಾರ್ತೆ, ವಿಜಯನಗರ



ಬೇಸಿಗೆ ಆರಂಭವಾಗಿರುವುದರಿಂದ ಜಿಲ್ಲೆಯಾದ್ಯಂತ ಸಾರ್ವಜನಿಕರಿಗೆ, ಅದರಲ್ಲೂ ಗ್ರಾಮೀಣ ಭಾಗದ ಜನ, ಜಾನುವಾರುಗಳಿಗೆ ಬೇಸಿಗೆಯ ಅವಧಿಯಲ್ಲಿ ಕುಡಿಯುವ ನೀರಿನ ಅಭಾವ ಉಂಟಾಗದಂತೆ ಅಗತ್ಯ ಮುನ್ನೆಚ್ಚರಿಕೆ ಕ್ರಮ ವಹಿಸಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಹಣಾಧಿಕಾರಿ ನೋಂಗ್ಜಾಯ್ ಮಹ್ಮದ್ ಅಲಿ ಅಕ್ರಮ್ ಷಾ ಸೂಚಿಸಿದರು.

ನಗರದ ಜಿಲ್ಲಾ ಪಂಚಾಯತ್ ಕಚೇರಿಯಲ್ಲಿ ಮಂಗಳವಾರ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು

ಜಲ ಜೀವನ್ ಮಿಷನ್ ಯೋಜನೆಯಡಿ ಪ್ರತಿ ಮನೆಗೆ ನಳದ ಸಂಪರ್ಕ ಕಲ್ಪಿಸುವ ನೀರು ಪೂರೈಕೆ ಮಾಡಲಾಗುತ್ತದೆ. ವಿವಿಧ ತಾಂತ್ರಿಕ ಕಾರಣಗಳಿಂದ ಕಾಮಗಾರಿ ಅಪೂರ್ಣಗೊಂಡಿದ್ದಲ್ಲಿ ತ್ವರಿತವಾಗಿ ಪೂರ್ಣಗೊಳಿಸಿ ಸಮರ್ಪಕವಾಗಿ ನೀರು ಸರಬರಾಜು ಮಾಡಬೇಕು. ಬಾಕಿ ಇರುವ ಪೈಪ್‌ಲೈನ್ ಅಳವಡಿಕೆ ಹಾಗೂ ಟ್ಯಾಂಕ್ ನಿರ್ಮಾಣ ಕಾರ್ಯವನ್ನು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಬೇಸಿಗೆ ಆರಂಭವಾಗಿರುವುದರಿಂದ ಅಂತರ್ಜಲ ಮಟ್ಟ ಕುಸಿದಿರುವ ಹಳ್ಳಿಗಳನ್ನು ಗುರುತಿಸಿ, ಅಂತಹ ಕಡೆಗಳಲ್ಲಿ ಖಾಸಗಿ ಕೊಳವೆ ಬಾವಿ ಬಾಡಿಗೆಗೆ ಪಡೆದು ಅಥವಾ ಟ್ಯಾಂಕರ್ ಮೂಲಕ ನೀರು ಪೂರೈಸಬೇಕು. ದುರಸ್ತಿಗೆ ಬಂದ ಕೈಪಂಪುಗಳನ್ನು ನಿರ್ಲಕ್ಷ್ಯವಹಿಸದೇ ತ್ವರಿತವಾಗಿ ದುರಸ್ತಿಗೊಳಿಸಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ನಿರ್ದೇಶಿಸಿದರು.

ನಗರ ಮತ್ತು ಗ್ರಾಮೀಣ ಭಾಗದಲ್ಲಿ ಸ್ಥಾಪಿಸಲಾಗಿರುವ ಶುದ್ಧ ಕುಡಿಯುವ ನೀರಿನ ಘಟಕಗಳು ಸುಸ್ಥಿತಿಯಲ್ಲಿರುವಂತೆ ನೋಡಿಕೊಳ್ಳುವುದು. ತಾಂತ್ರಿಕ ದೋಷದಿಂದ ಸ್ಥಗಿತಗೊಂಡಿರುವ ಘಟಕಗಳ ವಸ್ತುಸ್ಥಿತಿ ಪರಿಶೀಲಿಸಿ ಸಮಗ್ರವರದಿ ನೀಡಬೇಕು. ದುರಸ್ತಿಗೆ ಬಂದಿರುವ ಘಟಕಗಳನ್ನು ತಕ್ಷಣವೇ ಸರಿಪಡಿಸಿ ಜನರಿಗೆ ಶುದ್ಧ ಕುಡಿಯುವ ನೀರು ಒದಗಿಸುವಂತೆ ತಿಳಿಸಿದ ಅವರು, ಮುಂದಿನ ದಿನಗಳಲ್ಲಿ ಮಳೆಗಾಲವೂ ಸಮೀಪಿಸುತ್ತಿರುವುದರಿಂದ ಸಾಂಕ್ರಾಮಿಕ ರೋಗಗಳು ಹರಡುವ ಸಂಭವ ಹೆಚ್ಚಿರುತ್ತದೆ. ಆದ್ದರಿಂದ ನೀರಿನ ಮೂಲಗಳ ಸ್ವಚ್ಛ ಮತ್ತು ಶುಚಿತ್ವ ಕಾಪಾಡಿಕೊಳ್ಳಬೇಕು.ಗ್ರಾಮ ಮಟ್ಟದಲ್ಲಿ ನೀರಿನ ಗುಣಮಟ್ಟ ಪರೀಕ್ಷಿಸಲು ನೀಡಲಾಗಿರುವ ಫೀಲ್ಡ್ ಟೆಸ್ಟ್ ಕಿಟ್ ಬಳಸಿ ಕಾಲಕಾಲಕ್ಕೆ ನೀರಿನ ಮಾದರಿ ಪರೀಕ್ಷಿಸಬೇಕು ಮತ್ತು ಕಡ್ಡಾಯವಾಗಿ ಇದರ ದಾಖಲೆಯನ್ನು ಗ್ರಾಮ ಪಂಚಾಯತಿಯಲ್ಲಿ ನಿರ್ವಹಿಸಬೇಕು. ನಿರ್ಲಕ್ಷ್ಯ ವಹಿಸುವ ಅಥವಾ ಕರ್ತವ್ಯ ಲೋಪ ಎಸಗುವ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಜರುಗಿಸಲಾಗುವುದು ಎಚ್ಚರಿಕೆ ನೀಡಿದರು.

ನೀರಿನ ಸಮಸ್ಯೆಗೆ 24/7 ಸಹಾಯವಾಣಿ ಆರಂಭ :

ಜಿಲ್ಲೆಯ 6 ತಾಲ್ಲೂಕುಗಳಲ್ಲಿ ಮುಂಜಾಗೃತಕ್ರಮವಾಗಿ ಸಾರ್ವಜನಿಕರಿಗೆ ನೀರಿನ ಸಮಸ್ಯೆ ಉಂಟಾಗದಂತೆ ಈಗಾಗಲೇ ಸಾಕಷ್ಟು ಅಗತ್ಯ ಕ್ರಮ ಕೈಗೊಳ್ಳಲಾಗಿದೆ. ಆದಾಗ್ಯೂ ಕೂಡ ನೀರಿನ ಸಮಸ್ಯೆ ಉಲ್ಬಣಗೊಂಡಲ್ಲಿ ಸಾರ್ವಜನಿಕರ ಸಮಸ್ಯೆ ಅಥವಾ ದೂರು ದಾಖಲಿಸಿಕೊಂಡು ನಿವಾರಿಸಲು ಹಾಗೂ ಬರಪರಿಸ್ಥಿತಿಯನ್ನು ಸಮರ್ಪಕವಾಗಿ ನಿರ್ವಹಿಸಲು, ಜಿಲ್ಲಾ ಪಂಚಾಯಿತಿಯಲ್ಲಿ 24/7 ಕಾರ್ಯಾಚರಣೆಯ ಕಂಟ್ರೋಲ್ ರೂಮ್ ತೆರೆಯಲಾಗಿದೆ. ಈ ನಿಟ್ಟಿನಲ್ಲಿ ಸಾರ್ವಜನಿಕರು ನೀರಿನ ಸಮಸ್ಯೆ ಉಂಟಾದಲ್ಲಿ ಕಂಟ್ರೋಲ್ ರೂಂ ದೂರವಾಣಿ ಸಂಖ್ಯೆ:9480837823ಗೆ ಕರೆ ಮಾಡಿ ದೂರು ದಾಖಲಿಸಬಹುದು ಎಂದು ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಕೆ.ತಿಮ್ಮಪ್ಪ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ಕಾರ್ಯಪಾಲಕ ಇಂಜಿನಿಯರ್ ಎಸ್.ದೀಪಾ, ಡಿಡಿಪಿಐ ವೆಂಕಟೇಶ್ ರಾಮಚಂದ್ರಪ್ಪ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

## ಪಿಎಸ್‌ಐ ಆಗಿ ಅಮರೇಗೌಡ ಅಧಿಕಾರ ಸ್ವೀಕಾರ



• ಮಲ್ಲಮ್ಮ ನುಡಿವಾರ್ತೆ ಕೊಪ್ಪಳ

ಜಿಲ್ಲೆಯ ಮುನಿರಾಬಾದ್ ಪೊಲೀಸ್ ಠಾಣೆಗೆ ನೂತನ ಪಿಎಸ್‌ಐ ಆಗಿ ಅಮರೇಗೌಡ ಸೋಮವಾರ ಅಧಿಕಾರ ಸ್ವೀಕರಿಸಿಕೊಂಡರು.

ಮುನಿರಾಬಾದ್ ಪೊಲೀಸ್ ಠಾಣೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಪಿಎಸ್‌ಐ ಅಮಾನತುಗೊಂಡ ಹಿನ್ನೆಲೆಯಲ್ಲಿ ತೆರವಾಗಿದ್ದ ಸ್ಥಾನಕ್ಕೆ ಅಮರೇಗೌಡ ಅವರನ್ನು ನೂತನ ಪಿಎಸ್‌ಐ ಆಗಿ ಆದೇಶ ಹೊರಡಿಸಿದ್ದರ ಪ್ರಯುಕ್ತ ಅಮರೇಗೌಡ ಅಧಿಕಾರ ಸ್ವೀಕರಿಸಿಕೊಂಡಿರುತ್ತಾರೆ. ಅಧಿಕಾರ ಸ್ವೀಕರಿಸುವ ಮೊದಲು ಆದಿಶಕ್ತಿ ಯಾದ ಹುಲಿಗೆಮ್ಮ ದೇವಿ ದೇವಾಲಯಕ್ಕೆ ತೆರಳಿ ವಿಶೇಷ ಪೂಜೆ ಸಲ್ಲಿಸಿ ನಂತರ ಸೇವೆಗೆ ಹಾಜರಾಗಿರುತ್ತಾರೆ.

# ವೀರಭದ್ರೇಶ್ವರ ಜಾತ್ರಾ ಮಹೋತ್ಸವ ಯಶಸ್ವಿಗೊಳಿಸಿ



ಭಾಲ್ಕಿ ತಾಲೂಕಿನ ಭಾತಂಬ್ರಾ ಗ್ರಾಮದಲ್ಲಿ ವೀರಭದ್ರೇಶ್ವರ ಜಾತ್ರಾ ಮಹೋತ್ಸವ ನಿಮಿತ್ತ ವಾಲ್‌ಪೋಸ್ಟರ್ ಬಿಡುಗಡೆಗೊಳಿಸಲಾಯಿತು. ಶಿವಯೋಗೀಶ್ವರ ಸ್ವಾಮೀಜಿ, ಮಹಾದೇವ ಬೇಲೂರೆ, ಕಾಶಿನಾಥ ಲದ್ದೆ ಸೇರಿದಂತೆ ಹಲವರು ಇದ್ದರು.

- ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ತಾಲೂಕಿನ ಭಾತಂಬ್ರಾ ಗ್ರಾಮದಲ್ಲಿ ಏ.9 ರಿಂದ 15ರ ವರೆಗೆ ನಡೆಯಲಿರುವ ವೀರಭದ್ರೇಶ್ವರ ಜಾತ್ರಾ ಮಹೋತ್ಸವದಲ್ಲಿ ಸದ್ಭಕ್ತರು ತನು, ಮನ ಮತ್ತು ಧನದಿಂದ ಸಹಕರಿಸಿ ಯಶಸ್ವಿಗೊಳಿಸಬೇಕು ಎಂದು ನಿರಂಜನ ಜಗದ್ಗುರು ಸಂಸ್ಥಾನ ಮಠದ ಶಿವಯೋಗೀಶ್ವರ ಸ್ವಾಮೀಜಿ ಹೇಳಿದರು.

ತಾಲೂಕಿನ ಭಾತಂಬ್ರಾ ಗ್ರಾಮದ ಜಗದ್ಗುರು ನಿರಂಜನ ಸಂಸ್ಥಾನ ಮಠದಲ್ಲಿ ಮಂಗಳವಾರ ವೀರಭದ್ರೇಶ್ವರ ಜಾತ್ರಾ ಮಹೋತ್ಸವದ ವಾಲ್ ಪೋಸ್ಟರ್ ಬಿಡುಗಡೆಗೊಳಿಸಿ ಅವರು ಮಾತನಾಡಿದರು.

ಪ್ರತಿ ವರ್ಷದಂತೆ ಈ ಬಾರಿಯು ಸದ್ಭಕ್ತರ ಸಹಕಾರದೊಂದಿಗೆ ಜಾತ್ರಾ ಮಹೋತ್ಸವ ಅದ್ಧೂರಿ ಮತ್ತು ಅರ್ಥಪೂರ್ಣವಾಗಿ ಜರುಗಲಿದೆ ಎಂದು ವಿಶ್ವಾಸ ವ್ಯಕ್ತ ಪಡಿಸಿದರು.

ವೀರಭದ್ರೇಶ್ವರ ದೇವಸ್ಥಾನ ಸಮಿತಿ ಅಧ್ಯಕ್ಷ ಮಹಾದೇವ ಬೇಲೂರೆ ಮಾತನಾಡಿ, ಜಗದ್ಗುರು ಶಿವಯೋಗೀಶ್ವರ ಸ್ವಾಮೀಜಿ ಸಾನ್ನಿಧ್ಯದಲ್ಲಿ ವೀರಭದ್ರೇಶ್ವರ ಜಾತ್ರಾ ಮಹೋತ್ಸವ ಶ್ರದ್ಧೆ, ಭಕ್ತಿಯಿಂದ ಆಚರಿಸಲು ಅಗತ್ಯ ಸಿದ್ಧತೆ ಮಾಡಿಕೊಳ್ಳಲಾಗುತ್ತಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಪ್ರಮುಖರಾದ ಕಾಶಿನಾಥ ಲದ್ದೆ, ಮಹಾಂತೇಶ ಪಾಟೀಲ್, ನಾಗನಾಥ ಗಾಮಾ, ಪ್ರೇಮನಾಥ ಗಾಮಾ, ಶಾಲಿವಾನ ಖರಾಬೆ, ಪ್ರಭು ಪಂಚಾಕ್ಷರೆ, ಡಾ. ಅನಿಲ ಹನಪಟ್ಟೆ, ಸೋಮನಾಥ ಟೋಕರೆ, ಚಂದ್ರಕಾಂತ ಲದ್ದೆ, ಬಸವ ಭೂರಾಳೆ, ಶಂಕರ ಪಂಚಾಕ್ಷರೆ, ಕಿರಣ ಬಿರಾದಾರ ಸೇರಿದಂತೆ ಹಲವರು ಇದ್ದರು.

# ಮಹನೀಯರ ಜಯಂತಿ ಅದ್ದೂರಿ ಆಚರಣೆ: ಮಹಮ್ಮದ್ ಝುಬೇರ್

- ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಜಿಲ್ಲಾ ಕೇಂದ್ರದಲ್ಲಿ ಏ.20 ರಂದು ಬಸವ ಜಯಂತಿ, ಏ.21 ರಂದು ಶ್ರೀ ಶಂಕರಾಚಾರ್ಯ ಜಯಂತಿ ಹಾಗೂ ಏ.23 ರಂದು ಶ್ರೀ ಭಗೀರಥ ಜಯಂತಿ ಕಾರ್ಯಕ್ರಮಗಳನ್ನು ಅರ್ಥಪೂರ್ಣವಾಗಿ, ಅದ್ದೂರಿಯಾಗಿ ಆಚರಿಸಲಾಗುವುದು ಎಂದು ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್.ಎನ್ ಅವರು ಹೇಳಿದರು.

ನಗರದ ನೂತನ ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ಮಹನೀಯರ ಜಯಂತಿ ಕಾರ್ಯಕ್ರಮ ಆಚರಣೆ ಕುರಿತು ಅಧಿಕಾರಿಗಳು, ಸಮುದಾಯದ ಮುಖಂಡರೊಂದಿಗೆ ಮಂಗಳವಾರ ಏರ್ಪಡಿಸಿದ್ದ ಪೂರ್ವಭಾವಿ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಏ.20 ರಂದು ಬಸವ ಜಯಂತಿ ಕಾರ್ಯಕ್ರಮವನ್ನು ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ, ಏ.21 ರಂದು ಶ್ರೀ ಶಂಕರಾಚಾರ್ಯ ಜಯಂತಿ ಕಾರ್ಯಕ್ರಮವನ್ನು ನಗರದ ಸಂಗನಕಲ್ಲು ರಸ್ತೆಯ ಶ್ರೀ ಭಾರತೀತೀರ್ಥ ಸಭಾಭವನದಲ್ಲಿ ಹಾಗೂ ಏ.23 ರಂದು ಶ್ರೀ ಭಗೀರಥ ಜಯಂತಿ ಕಾರ್ಯಕ್ರಮವನ್ನು ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ಅಚ್ಚುಕಟ್ಟಾಗಿ ಆಯೋಜಿಸಲು ನಿರ್ಧರಿಸಲಾಯಿತು. ಅದರಂತೆ ಇದಕ್ಕೆ ಬೇಕಾದ ಎಲ್ಲಾ ವ್ಯವಸ್ಥೆ ಮಾಡಿಕೊಳ್ಳಬೇಕು ಎಂದು ಹೇಳಿದರು. ಜಯಂತಿ ಆಚರಣೆಯ ಸಂದರ್ಭದಲ್ಲಿ ಡಿಜೆ ಬಳಕೆ ಮತ್ತು ಪಟಾಕಿ ಸಿಡಿಸುವುದನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ. ವೇದಿಕೆ ಕಾರ್ಯಕ್ರಮದ ಆವರಣದಲ್ಲಿ ಮಾತ್ರ ಬ್ಯಾನರ್ ಅಳವಡಿಸಲು ಅವಕಾಶವಿದ್ದು, ನಗರದ ಇತರ ಯಾವುದೇ ಸಾರ್ವಜನಿಕ ಸ್ಥಳಗಳಲ್ಲಿ ಬ್ಯಾನರ್ ಹಾಕುವುದನ್ನು ನಿರ್ಬಂಧಿಸಲಾಗಿದೆ. ಶಾಂತಿ-ಸುವ್ಯವಸ್ಥೆಗೆ ಧಕ್ಕೆಯಾಗದಂತೆ ಭಕ್ತಿ-ಭಾವದಿಂದ ಮಹನೀಯರ ಜಯಂತಿ ಆಚರಿಸೋಣ. ಇದಕ್ಕೆ ಎಲ್ಲರ ಸಹಕಾರ ಅಗತ್ಯವಿದೆ ಎಂದು ತಿಳಿಸಿದರು.

ಶಿಷ್ಟಾಚಾರದಂತೆ ಆಹ್ವಾನ ಪತ್ರಿಕೆ ಮುದ್ರಿಸಿ ಗಣ್ಯರಿಗೆ, ಸಂಘ-ಸಂಸ್ಥೆಗಳ ಪದಾಧಿಕಾರಿಗಳಿಗೆ ವಿತರಿಸಿ ಕಾರ್ಯಕ್ರಮಕ್ಕೆ ಆಹ್ವಾನಿಸಬೇಕು. ಮಹನೀಯರ ಆಚಾರ-ವಿಚಾರಗಳನ್ನು ಪರಿಣಿತರಿಂದ ವಿಶೇಷ ಉಪನ್ಯಾಸ ಮೂಲಕ ತಲುಪಿಸಲು ಸಂಪನ್ಮೂಲ ವ್ಯಕ್ತಿಗಳನ್ನು ನಿಯೋಜಿಸಬೇಕು. ಮೆರವಣಿಗೆಯಲ್ಲಿ ಸಾಂಸ್ಕೃತಿಕ ಕಲಾ ತಂಡಗಳು ಭಾಗವಹಿಸಲಿವೆ. ವಚನ ಸಂಗೀತ ಗಾಯನ ಏರ್ಪಡಿಸಬೇಕು ಎಂದರು. ಸಾಂಸ್ಕೃತಿಕ ನಾಯಕ, ವಿಶ್ವಗುರು ಬಸವೇಶ್ವರರ ಜಯಂತಿ ಅಂಗವಾಗಿ ವಿವಿಧ ಇಲಾಖೆಗಳ ವತಿಯಿಂದ ಸ್ತಬ್ಧ ಚಿತ್ರ ಆಯೋಜಿಸಲಾಗುವುದು ಎಂದು ತಿಳಿಸಿದ ಅವರು, ಜಯಂತಿ ಕಾರ್ಯಕ್ರಮಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಭಾಗವಹಿಸಿ, ಯಶಸ್ವಿಗೊಳಿಸಬೇಕು ಎಂದರು. ಇದೇ ವೇಳೆ ಸಮಾಜದ ಮುಖಂಡರು ಜಯಂತಿ ಕಾರ್ಯಕ್ರಮ ಯಶಸ್ವಿಗೆ ತಮ್ಮ ಸಲಹೆ-ಸೂಚನೆ ನೀಡಿದರು. ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ, ಮಹಾನಗರ ಪಾಲಿಕೆ, ಪೊಲೀಸ್ ಅಧಿಕಾರಿಗಳು, ತೋಟಗಾರಿಕೆ ಅಧಿಕಾರಿಗಳು ಮತ್ತು ಸಮಾಜದ ಮುಖಂಡರು ಉಪಸ್ಥಿತರಿದ್ದರು.



# ಮತಗಟ್ಟೆಗೆ: ವಾಹನ ಸೌಲಭ್ಯ

- ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

ಬಾಗಲಕೋಟೆ ವಿಧಾನಸಭಾ ಉಪ ಚುನಾವಣೆಗೆ ಸಂಬಂಧಿಸಿದಂತೆ ಎಪ್ರೀಲ್ 9 ರಂದು ಮತದಾನ ನಡೆಯಲಿದ್ದು, ವಿಕಲಚೇತನರಿಗೆ, ಹಿರಿಯ ನಾಗರಿಕರಿಗೆ ಹಾಗೂ ಅನಾರೋಗ್ಯ ಪೀಡಿತರಿಗೆ ಬಾಗಲಕೋಟೆ ನಗರಸಭೆ ವ್ಯಾಪ್ತಿಯಲ್ಲಿ ತಮ್ಮ ಮತಗಟ್ಟೆಗೆ ತೆರಳಿ ಮತ ಚಲಾಯಿಸಲು ಬಾಗಲಕೋಟೆ ನಗರಸಭೆಯಿಂದ ವಾಹನಗಳ ವ್ಯವಸ್ಥೆ ಮಾಡಲಾಗಿದೆ.

ವಾಹನ ಅವಶ್ಯಕತೆವುಳ್ಳವರು ರಾಜೇಶ ಕೊಟಬಾಗಿ (7019772949), ರೇಣುಕಾರ ಐಕೂರ (7349446087), ಪರವೀನಬಾನು ಎಸ್ ಮಲ್ಲಾಬಾದಿ (8431102513) ಇವರನ್ನು ಸಂಪರ್ಕಿಸಿ, ವಾಹನ ಸೌಲಭ್ಯ ಪಡೆದುಕೊಂಡು ತಪ್ಪದೇ ಮತದಾನ ಮಾಡುವಂತೆ ನಗರಸಭೆ ಪೌರಾಯುಕ್ತ ವಾಸಣ್ಣ ಆರ್ ಪ್ರಕಟಣೆಯಲ್ಲಿ ಕೋರಿದ್ದಾರೆ.

# ಮತದಾನ ದಿನ ಸಂತೆ ರದ್ದು

- ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

ಬಾಗಲಕೋಟೆ ವಿಧಾನಸಭಾ ಉಪ ಚುನಾವಣೆ ಹಿನ್ನಲೆಯಲ್ಲಿ ಎಪ್ರೀಲ್ 9 ರಂದು ಚುನಾವಣೆ ನಡೆಯುತ್ತಿರುವದರಿಂದ ಸದರಿ ದಿನದಂದು ಬಾಗಲಕೋಟೆ ನಗರಸಭೆ ವ್ಯಾಪ್ತಿಯಲ್ಲಿ ಜರುಗವ ಎಲ್ಲ ಸಂತೆಗಳನ್ನು ರದ್ದು ಪಡಿಸಲಾಗಿದೆ ಎಂದು ನಗರಸಭೆ ಪೌರಾಯುಕ್ತ ವಾಸಣ್ಣ ಆರ್. ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವೇತನ ಸಹಿತ ರಜೆ ಘೋಷಣೆ

- ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

ಬಾಗಲಕೋಟೆ ವಿಧಾನಸಭಾ ಉಪ ಚುನಾವಣೆಗೆ ಎಪ್ರೀಲ್ 9 ರಂದು ಮತದಾನ ನಡೆಯಲಿದ್ದು, ಉಪ ಚುನಾವಣಾ ಕ್ಷೇತ್ರದ ವ್ಯಾಪ್ತಿಯಲ್ಲಿರುವ ಎಲ್ಲ ಸರಕಾರಿ ಕಚೇರಿಗಳಿಗೆ, ಶಾಲಾ ಕಾಲೇಜುಗಳಿಗೆ (ಅನುದಾನಿತ ಶಿಕ್ಷಣ ಸಂಸ್ಥೆ ಒಳಗೊಂಡಂತೆ) ಹಾಗೂ ರಾಷ್ಟ್ರೀಕೃತ ಬ್ಯಾಂಕುಗಳು, ಜೀವವಿಮಾ ನಿಗಮ, ಹಣಕಾಸು ಸಂಸ್ಥೆಗಳು ಹಾಗೂ ಇನ್ನೀತರೇ ಔದ್ಯಮಿಕ ಸಂಸ್ಥೆಗಳಲ್ಲಿ ಖಾಯಂ ಆಗಿ ಅಥವಾ ದಿನಗೂಲಿ ಮೇಲೆ ಕೆಲಸ ನಿರ್ವಹಿಸುತ್ತಿರುವ ಎಲ್ಲ ಅರ್ಹ ಮತದಾರರಿಗೆ ಸೀಮಿತವಾದಂತೆ ಹಾಗೂ ಮತದಾನ ಮಾಡಲು ಅನುಕೂಲವಾಗುವಂತೆ ಕಲಂ 25ರಡಿ ಮತ್ತು ಕಲಂ 135ಬಿ ಅಡಿಯಲ್ಲಿನ ಎಲ್ಲ ಉಪಬಂಧಗಳನ್ವಯ ಒಂದು ದಿನದ ವೇತನ ಸಹಿತಿ ರಜೆ ಮಂಜೂರು ಮಾಡಲು ಅಧಿಕಾರವುಳ್ಳ ಅಧಿಕಾರಿಗಳು ಮಂಜೂರು ಮಾಡತಕ್ಕದ್ದು ಎಂದು ಎಂಬ ಷರತ್ತಿಗೆ ಒಳಪಟ್ಟು ಒಂದು ದಿನ ವೇತನ ಸಹಿತ ರಜೆಯನ್ನು ನೀಡುವಂತೆ ಸರಕಾರದ ಅಧೀನ ಕಾರ್ಯದರ್ಶಿಗಳು ಆದೇಶಿಸಿದ್ದಾರೆ ಎಂದು ಜಿಲ್ಲಾ ಚುನಾವಣಾಧಿಕಾರಿಗಳು ತಿಳಿಸಿದ್ದಾರೆ.

### ಕಾರ್ಮಿಕರಿಗೆ ವೇತನ ಸಹಿತ ರಜೆ

ಮತದಾನ ದಿನದಂದು ಬಾಗಲಕೋಟೆ ಮತಕ್ಷೇತ್ರದ ಎಲ್ಲ ಕಾರ್ಖಾನೆಗಳು, ಅಂಗಡಿಗಳು, ವಾಣಿಜ್ಯ ಸಂಸ್ಥೆಗಳು ಹಾಗೂ ಇತರೆ ಸಂಸ್ಥೆಗಳಲ್ಲಿ ಕೆಲಸ ಮಾಡುವ ಕಾರ್ಮಿಕರಿಗೆ 1951ರ ಪ್ರಜಾ ಪ್ರತಿನಿಧಿ ಕಾಯ್ದೆ, ಸೆಕ್ಷನ್ 135(ಬಿ) ರಡಿ ಹಾಗೂ ಕೈಗಾರಿಕೆ ಸಂಸ್ಥೆಗಳ (ರಾಷ್ಟ್ರೀಯ ಮತ್ತು ಹಬ್ಬದ ರಜೆಗಳು) ಕಾಯ್ದೆ-1963 ಕಲಂ 3(ಎ) ರನ್ವಯ ಅರ್ಹ ಮತದಾರರಿಗೆ ವೇತನ ಸಹಿತ ರಜೆ ಘೋಷಿಸಿ ಸಂವಿಧಾನಾತ್ಮಕ ಹಕ್ಕಾದ ಮತವನ್ನು ಚಲಾಯಿಸುವುದಕ್ಕಾಗಿ ಎಲ್ಲ ಮಾಲಿಕರು, ನಿಯೋಜಕರು ಅನುವು ಮಾಡಿ ಕೊಡಬೇಕಾಗಿರುವದರಿಂದ ಸದರಿ ದಿನದಂದು ಅರ್ಹ ಕಾರ್ಮಿಕರಿಗೆ ವೇತನ ಸಹಿತ ರಜೆ ನೀಡಬೇಕು. ತಪ್ಪಿದಲ್ಲಿ ಸಂಬಂಧಪಟ್ಟ ಸಂಸ್ಥೆ, ನಿಯೋಜನರ ವಿರುದ್ಧ ನಿಯಮಾನುಸಾರ ಅನ್ವಯವಾಗುವ ಕಾಯ್ದೆಗಳನ್ವಯ ಕಾನೂನು ಕ್ರಮ ಜರುಗಿಸಲಾಗುವುದೆಂದು ಜಿಲ್ಲಾ ಕಾರ್ಮಿಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅನುಮಾನಗಳಿಗೆ ಆಸ್ಪದವಾದ ಸಾವು

- ಮಲ್ಲಮ್ಮ ನುಡಿವಾರ್ತೆ , ಕುಕನೂರ

ತಾಲೂಕಿನ ಸೋಂಪುರ ಗ್ರಾಮದಲ್ಲಿ 27 ವರ್ಷದ ಯುವತಿ ಸಾವಿಗೀಡ್ ಆಗಿದ್ದು ಹಲವು ರೀತಿಯ ಅನುಮಾನಗಳಿಗೆ ಆಸ್ಪದವಾಗಿದೆ.

ಸೋಂಪುರ ಗ್ರಾಮದ ನಿವಾಸಿಯಾದ ಮಾಳವಿಕಾ (27) ಮೂಲತಹ ದೆಹಲಿ ಮೂಲದ ಯುವತಿ ಎಂದು ತಿಳಿದುಬಂದಿದ್ದು ಸೋಂಪುರ ಗ್ರಾಮದ ಯುವಕ 28 ವರ್ಷದ ಎಗ್ ರೈಸ್ ವ್ಯಾಪಾರ ಮಾಡುವ ಯುವಕನನ್ನು ಸುಮಾರು ನಾಲ್ಕೈದು ವರ್ಷಗಳ ಹಿಂದೆ ಪ್ರೀತಿಸಿ ಮದುವೆಯಾಗಿದ್ದರು ಎಂದು ತಿಳಿದುಬಂದಿದ್ದು. ತುಮಕೂರು ನಗರದಲ್ಲಿ ಯಾವುದೇ ತರಬೇತಿಗೆಂದು ತೆರಳಿದಾಗ ಇಬ್ಬರು ನಡುವೆ ಬೆಳೆದ ಸ್ನೇಹ ಪ್ರೀತಿಯಾಗಿ ನಂತರ ಕೋವಿಡ್ ಸಂದರ್ಭದಲ್ಲಿ ಮದುವೆಯಾಗಿರುತ್ತಾರೆ, ಮದುವೆ ನಂತರ ಅವರ ದಾಂಪತ್ಯ ಜೀವನದಲ್ಲಿ ಇಲ್ಲಿಯವರೆಗೆ ಇಬ್ಬರೂ ಅನ್ಯೂನ್ಯವಾಗಿ ಜೀವನ ಸಾಗಿಸುತ್ತಿದ್ದು ಇಬ್ಬರಲ್ಲಿ ಯಾವುದೇ ರೀತಿಯ ಜಗಳಗಳನ್ನು ಕಂಡಿರುವುದಿಲ್ಲ ಎಂದು ಗ್ರಾಮಸ್ಥರು ತಿಳಿಸಿರುತ್ತಾರೆ. ಆದರೂ ಸಹ ಸೋಮವಾರ ಸಂಜೆಯ ವೇಳೆಯಲ್ಲಿ ಗಂಡ ಹೆಂಡರಲಿ ಯಾವುದೋ ವಿಷಯಕ್ಕೆ ಮನಸ್ತಾಪ ಉಂಟಾಗಿ ಮನಸ್ತಾಪ ವಿಕೋಪಕ್ಕೆ ತೆರಳಿ ಯುವತಿಯನ್ನು ಆಕೆಯ ಗಂಡ ಸುತ್ತಿಗೆ ತೆಗೆದುಕೊಂಡು ತಲೆಗೆ ಪಡೆದಿರುತ್ತಾನೆ. ಆ ಏಟಿನಿಂದ ಬಳಲಿದ ಯುವತಿ ಸಾವನ್ನಪ್ಪಿದೆ ಎಂದು ಒಂದು ಮೂಲಗಳಿಂದ ತಿಳಿದು ಬಂದರೆ ಮತ್ತೊಂದು ಮೂಲಗಳ ಪ್ರಕಾರ ಗಂಡ ಹೆಂಡಿರಲಿ ಯಾವುದೇ ಮನಸ್ಸನ್ನು ಇರುವುದಿಲ್ಲ ಹೆಂಡತಿ ಕಾಲು ಜಾರಿ ಬಿದ್ದು ತಲೆಗೆ ಪೆಟ್ಟು ಮಾಡಿಕೊಂಡಿರುತ್ತಾರೆ. ಇದನ್ನು ನೋಡಿದ ಗಂಡ ತಕ್ಷಣವೇ ಆಸ್ಪತ್ರೆಗೆ ಕರೆದುಕೊಂಡು ಹೋಗಿದ್ದು ಆಸ್ಪತ್ರೆಯಲ್ಲಿ ಚಿಕಿತ್ಸೆ ಸಲ್ಲಿಸದೆ ಮೃತಪಟ್ಟಿದ್ದಾಳೆ ಎಂದು ತಿಳಿದು ಬಂದಿರುತ್ತದೆ.

ಕುಕನೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು ಪೊಲೀಸರು ತನಿಖೆ ಚುರುಕುಗೊಳಿಸಿರುತ್ತಾರೆ. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಸಹ ಕುಕನೂರು ಪಟ್ಟಣಕ್ಕೆ ಭೇಟಿ ನೀಡಿ ಪ್ರಕರಣ ಕುರಿತಂತೆ ಮಾಹಿತಿ ಪಡೆದುಕೊಂಡಿರುತ್ತಾರೆ. ಪೊಲೀಸರ ತನಿಖೆಯ ನಂತರವೇ ವಾಸ್ತವ ತಿಳಿಯಲಿದ್ದು ಗ್ರಾಮಸ್ಥರು ಈ ಘಟನೆಯಿಂದ ಆಶ್ಚರ್ಯ ವ್ಯಕ್ತಪಡಿಸಿರುತ್ತಾರೆ.



ಬಳ್ಳಾರಿ : ಮಹಿಳಾ ಕ್ರಿಕೆಟ್ ಅಕಾಡೆಮಿ ಬಳ್ಳಾರಿ ವತಿಯಿಂದ 11, 13 , 15 ಮತ್ತು 17 ವರ್ಷದ ವಯೋಮಿತಿ ಒಳಗಿನ ಮಹಿಳಾ ಕ್ರಿಕೆಟ್ ಪಂದ್ಯಾವಳಿಯನ್ನು ನಡೆಸಲು ಉದ್ದೇಶಿಸಿರುವ ಹಿನ್ನೆಲೆಯಲ್ಲಿ ನಗರದ ಕಿತ್ತೂರು ರಾಣಿ ಚೆನ್ನಮ್ಮ ಪ್ರೌಢಶಾಲೆಯ ಆವರಣದಲ್ಲಿ ಕ್ರೀಡಾಪಟುಗಳ ಆಯ್ಕೆಯನ್ನು ನಡೆಸಲಾಯಿತು. ಈ ಸಂದರ್ಭದಲ್ಲಿ ಸುಮಾರು 64 ಜನ ಬಾಲಕಿಯರು ಸಂದರ್ಶನಕ್ಕೆ ಹಾಜರಾಗಿದ್ದು ಅದರಲ್ಲಿ 28 ಜನ ಬಾಲಕಿಯರು ಆಯ್ಕೆಯಾಗಿದ್ದಾರೆ ಎಂದು ಅಕಾಡೆಮಿಯ ಸಂಚಾಲಕರಾದ ಬಿ ಎಚ್ ಎಂ ವಿರೂಪಾಕ್ಷಯ್ಯ ತಿಳಿಸಿದ್ದಾರೆ. ಈ ಸಂದರ್ಶನದಲ್ಲಿ ಆಯ್ಕೆಯಾದ ಕ್ರೀಡಾಪಟುಗಳಿಗೆ ಕ್ರಿಕೆಟ್ ಕಿಟ್ ಮತ್ತು ಡ್ರೆಸ್ ಉಚಿತವಾಗಿ ಒದಗಿಸಲಾಗುವುದು ಜೊತೆಗೆ ಅವರ ಶಿಕ್ಷಣವನ್ನು ಸಹ ಮುಂದುವರಿಸಲು ಅನುಕೂಲ ಮಾಡಿಕೊಡಲಾಗುವುದು ಎಂದರು. ಈ ಸಂದರ್ಭದಲ್ಲಿ ಅಕಾಡೆಮಿಯ, ಕಾರ್ಯದರ್ಶಿ ನಾಗವೇಣಿ, ಸಂಘಟನಾ ಕಾರ್ಯದರ್ಶಿ ರೇಣುಕಾ ಸೇರಿದಂತೆ ಸೇರಿದಂತೆ ಅಕಾಡೆಮಿಯ ಇತರ ಸದಸ್ಯರಿದ್ದರು.

# ಪ್ರವೇಶಾತಿಗಾಗಿ ಅರ್ಜಿ ಸಲ್ಲಿಸುವ ಅವಧಿ ವಿಸ್ತರಣೆ

- ಮಲ್ಲಮ್ಮ ನುಡಿ ವಾರ್ತೆ , ಬೀದರ

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಪ್ರಾದೇಶಿಕ ಕೇಂದ್ರ, ಬೀದರದಲ್ಲಿ ಶೈಕ್ಷಣಿಕ ವರ್ಷ 2025-26ರ ಜನವರಿ ಆವೃತ್ತಿಯಲ್ಲಿ ಪ್ರಥಮ ವರ್ಷಕ್ಕೆ ಶೈಕ್ಷಣಿಕ ಕಾರ್ಯಕ್ರಮಗಳ ಪ್ರವೇಶಾತಿಗಾಗಿ ಆನ್‌ಲೈನ್ ಮೂಲಕ ಬಿ.ಎ /ಬಿ.ಕಾಂ /ಬಿ.ಬಿ.ಎ /ಬಿ.ಸಿ.ಎ /ಬಿ.ಎಸ್ಸಿ /ಬಿ.ಎಸ್.ಡಬ್ಲ್ಯೂ /ಬಿ.ಲಿಬ್.ಐ.ಎಸ್ಸಿ /ಎಂ.ಎ /ಎಂ.ಕಾಂ /ಎಂ.ಬಿ.ಎ /ಎಂ.ಎಸ್ಸಿ /ಎಂ.ಸಿ.ಎ /ಎಂ.ಎಸ್.ಡಬ್ಲ್ಯೂ /ಎಂ.ಲಿಬ್.ಐ.ಎಸ್ಸಿ ಮತ್ತು ಯುಜಿ/ಪಿಜಿ/ಡಿಪ್ಲೋಮಾ ಸರ್ಟಿಫಿಕೇಟ್ ಕೋರ್ಸಗಳಿಗೆ ಅರ್ಜಿಗಳನ್ನು ಸಲ್ಲಿಸಲು ದಿನಾಂಕ:30-03-2026 ನಿಗದಿಪಡಿಸಲಾಗಿದ್ದು, ಇದನ್ನು ದಿನಾಂಕ:10-04-2026 ರವರೆಗೆ ವಿಸ್ತರಿಸಲಾಗಿದೆ ಎಂದು ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಪ್ರಾದೇಶಿಕ ಕೇಂದ್ರ ಬೀದರನ ಪ್ರಾದೇಶಿಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವಿದ್ಯಾರ್ಥಿಗಳಿಗೆ ಸುವರ್ಣವಕಾಶ ಎರಡು ಶೈಕ್ಷಣಿಕ ಕಾರ್ಯಕ್ರಮಗಳನ್ನು ಏಕಕಾಲದಲ್ಲಿ ಅಧ್ಯಯನ ಮಾಡಲು ಅವಕಾಶವಿರುತ್ತದೆ. ಒಂದು ಭೌತಿಕ ಕ್ರಮದಲ್ಲಿ ಮತ್ತೊಂದು ದೂರ ಶಿಕ್ಷಣ ಕ್ರಮದಲ್ಲಿ ಇದರ ಸದುಪಯೋಗವನ್ನು ವಿದ್ಯಾರ್ಥಿಗಳು ಪಡೆದುಕೊಳ್ಳಬಹುದು. ಬಿಪಿಎಲ್ ಕಾರ್ಡ ಹೊಂದಿದ ಮಹಿಳಾ ವಿದ್ಯಾರ್ಥಿನಿಯರಿಗೆ, ಡಿಫೆನ್ಸ/ಮಾಜಿ ಸೈನಿಕರಿಗೂ, ಆಟೋ/ಕ್ಯಾಬ್ ಚಾಲಕರು ಮತ್ತು ಅವರ ಮಕ್ಕಳಿಗೆ ಹಾಗೂ ಕೆಎಆಟಿಸಿ, ಕೆಕೆಆಟಿಸಿ, ಎಡಬ್ಲ್ಯೂಕೆಆಟಿಸಿ, ಬಿಎಚಿಟಿಸಿ ಚಾಲಕರಿಗೆ ಬೋಧನಾ ಶುಲ್ಕದಲಿ 10% ರಿಯಾಯಿತಿ ನೀಡಲಾಗಿದೆ.ಆಸಕ್ತ ವಿದ್ಯಾರ್ಥಿಗಳು ಪ್ರವೇಶಾತಿ ಪಡೆಯಲು ವಿ.ವಿಯ ಅಂತರ್ಜಾಲದಲ್ಲಿರುವ ಅಡ್ಮಿಷನ್ ಪೋರ್ಟಲ್ https://ksou-portal.com/views/studenthome.aspx ನಲ್ಲಿ ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಿ ಆಯಾ ಶಿಕ್ಷಣಕ್ರಮಗಳಿಗೆ ನಿಗದಿಪಡಿಸಿರುವ ಶೈಕ್ಷಣಿಕ ವಿದ್ಯಾರ್ಹತೆ ಅನುಸಾರ ದಾಖಲಾತಿಗಳೊಂದಿಗೆ ಪ್ರಾದೇಶಿಕ ಕೇಂದ, ಬೀದರದಲ್ಲಿ ಸಲ್ಲಿಸಿ ಪ್ರವೇಶಾತಿ ಪಡೆಯಬಹುದು. ಹೆಚ್ಚಿನ ಮಾಹಿತಿಗಾಗಿ ವಿದ್ಯಾರ್ಥಿಗಳು ಈ ದೂರವಾಣಿ ಸಂಖ್ಯೆಗಳಿಗೆ 9986696487, 9901216737 ಕರೆ ಮಾಡಲು ಅಥವಾ ಖುದ್ದಾಗಿ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ ಪ್ರಾದೇಶಿಕ ಕೇಂದ್ರ, ಸರ್ಕಾರಿ ಪ್ರಥಮ ದರ್ಜೆ ಕಾಲೇಜು ನೌಬಾದ, ಬೀದರಕ್ಕೆ ಭೇಟಿ ನೀಡಿ ಪ್ರವೇಶಾತಿ ಸಂಬಂಧ ಮಾಹಿತಿ ಪಡೆಯಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

**IN THE COURT OF THE ADDL CIVIL JUDGE & JM.F.C.. AT BASAVAKALYAN**

**Crl. Misc. No. 42/2026**

**Petitioner**

Amrut & others

Versus

**Respondent**

The Tahasildar, Basavakalyan.

**Sub: For issue of Death Certificate.**

**PETITION U/SEC 13(3) OF BIRTH AND DEATH REGISTRATION**

ACT 1969

**PAPER PUBLICATION**

Whereas the above named petitioner has filed petition under section 13(3) of Birth & Death Registration Act 1969 for issue the direction to respondent to give death certificate of petitioner Brother of petitioners, by name "Prabhu S/o Kalyani Uppar who was died on 02/02/2023 in his house at Village Hiranagaon, Tq: Basavakalyan, Dist; Bidar.

Hence this paper publication is issued to all concerned person to file necessary objection if any on 11 /05/2026 at 11:00 AM.

Given under my hand seal of the court on this 4/4/2026

**By order of the court**
**Chief Ministerial Officer**
**JMFC Court Basavakalyan**

# ಸಮಾಜ ಸುಧಾರಣೆಯ ಹರಿಕಾರ ಬಾಬು ಜಗಜೀವನರಾಂ

- ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಬಾಬು ಜಗಜೀವನರಾಂ ಅವರು ಬುದ್ಧ, ಬಸವ, ಅಂಬೇಡ್ಕರರಂತೆ ಸಮಾಜ ಸುಧಾರಣೆಯ ಧೋರಣೆಗಳನ್ನು ಸದಾಕಾಲ ಹೊಂದಿದ್ದರು ಎಂದು ಡಾ.ಬಾಬು ಜಗಜೀವನರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷ ಮುಂಡರಗಿ ನಾಗರಾಜ್ ಅವರು ಹೇಳಿದರು.

ಸೋಮವಾರ ವಿಶ್ವವಿದ್ಯಾಲಯದ ಡಾ.ಬಿ.ಆರ್.ಅಂಬೇಡ್ಕರ್ ಸಭಾಂಗಣದಲ್ಲಿ ವಿವಿಯ ಬಾಬು ಜಗಜೀವನರಾಂ ಸಂಶೋಧನಾ ಮತ್ತು ಅಧ್ಯಯನ ಕೇಂದ್ರ ಹಾಗೂ ಬೆಂಗಳೂರು ಸಮಾಜ ಕಲ್ಯಾಣ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ 'ಪ.ಜಾ/ ಪ.ಪಂ ಪಿಎಚ್.ಡಿ ವಿದ್ಯಾರ್ಥಿಗಳಿಗೆ ಮೂರು ದಿನಗಳ ಸಂಶೋಧನಾ ವಿಧಾನ' ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಬಳ್ಳಾರಿ ಸುತ್ತಮುತ್ತಲಿನ ಪ್ರದೇಶಗಳಲ್ಲಿರುವ ಮೌಢ್ಯ ಆಚರಣೆಯ ಪದ್ಧತಿಗಳಾದ ದೇವದಾಸಿ, ಜಾತಿ ಪದ್ಧತಿ, ದಲಿತರಿಗೆ ದೇಗುಲ ಪ್ರವೇಶ ನಿರಾಕರಣೆಯಂತಹ ಹಲವಾರು ಅನಿಷ್ಟ ಪದ್ಧತಿಗಳ ವಿರುದ್ಧ ಹೋರಾಟ ನಡೆಸಿ ಅವುಗಳ ನಿರ್ಮೂಲನೆಗೆ ಬಾಬೂಜಿ ಅವರು ನಿರಂತರ ಹೋರಾಟ ಮಾಡಿದ್ದರು ಎಂದು ತಿಳಿಸಿದರು.

ಸಂಶೋಧನಾ ವಿದ್ಯಾರ್ಥಿಗಳು ಬಾಬು ಜಗಜೀವನರಾಂ ಅವರ



ಜೀವನ ಸಾಧನೆಯನ್ನು ಅಧ್ಯಯನ ಮಾಡಿ, ಅವರಲ್ಲಿದ್ದ ನಾಯಕತ್ವದ ಗುಣವನ್ನು ಬೆಳೆಸಿಕೊಳ್ಳಬೇಕು ಎಂದು ಕರೆ ನೀಡಿದರು.

ಲಿಡ್ಕರ್ ಅಭಿವೃದ್ಧಿ ನಿಗಮವು ತನ್ನ ಅಧೀನಕ್ಕೆ ಒಳಪಡುವ ಉಪಜಾತಿಗಳ ಫಲಾನುಭವಿಗಳಿಗೆ, ಮಹಿಳೆಯರಿಗೆ ವಿಶೇಷ ತರಬೇತಿ ನೀಡುವುದು, ವಿವಿಧ ಕೌಶಲ್ಯಗಳ ತರಬೇತಿಗೆ ಬೆಂಗಳೂರು, ತಮಿಳುನಾಡು ಹಾಗೂ ಇಂಡೋನೇಷ್ಯಾ ದೇಶಕ್ಕೆ ಕಳುಹಿಸಿ ಕೈಗಾರಿಕಾ ತರಬೇತಿ ಒದಗಿಸುತ್ತಿದ್ದು, ಈ ಯೋಜನೆಗಳ ಪ್ರಯೋಜನ ಪಡೆದುಕೊಳ್ಳಬೇಕು ಎಂದು ಸಲಹೆ ನೀಡಿದರು.

ರಾಜ್ಯ ಉನ್ನತ ಶಿಕ್ಷಣ ಇಲಾಖೆಯ ನಿವೃತ್ತ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಬಿ.ಎಚ್.ಅನೀಲ್ ಕುಮಾರ್ ಅವರು ದಿಕ್ಸೂಚಿ ಭಾಷಣದಲ್ಲಿ ಮಾತನಾಡಿ, ಸಂಶೋಧನೆಗೆ ಎಐ ಮತ್ತು ಮಷಿನ್ ಲರ್ನಿಂಗ್ ನಂತಹ ಸಾಧನಗಳನ್ನು ಬಳಸುವ ಮೂಲಕ ಒಳ್ಳೆಯ ಫಲಿತಾಂಶವನ್ನು ಪಡೆಯಬಹುದು. ಯಾವುದೇ ಮಾದರಿಯ ಸಂಶೋಧನೆಗೆ ವಸ್ತುನಿಷ್ಠತೆ, ನಿರ್ದಿಷ್ಟ ಉದ್ದೇಶಗಳು ಹಾಗೂ ನೀತಿ ಸಂಹಿತೆ ಪಾಲಿಸಬೇಕು. ಇದರಿಂದ ಸಂಶೋಧನೆಯಲ್ಲಿ ನೈಜವಾದ ದತ್ತಾಂಶಗಳು ಸಂಶೋಧನೆಯ ವಿಶ್ವಾಸಾರ್ಹತೆಯನ್ನು ಹೆಚ್ಚಿಸುತ್ತದೆ ಎಂದರು.

ವಿವಿಯ ಕುಲಪತಿ ಪ್ರೊ.ಎಂ ಮುನಿರಾಜು ಅವರು ಮಾತನಾಡಿ, ರಾಜ್ಯದ ಬಹುತೇಕ ವಿವಿಗಳಲ್ಲಿರುವ ಅಧ್ಯಯನ ಪೀಠಗಳು ಆಳವಾದ ಮತ್ತು ಸ್ಥೂಲವಾದ ಉತ್ಕೃಷ್ಟ ಸಂಶೋಧನೆಯನ್ನು ಹೊರ ತರಲು ಮುಂದಾಗಬೇಕು ಎಂದು ತಿಳಿಸಿದರು.

ಬಾಬು ಜಗಜೀವನರಾಂ ಅವರ ಕುರಿತು ಅತ್ಯುತ್ತಮ ಸಂಶೋಧನಾ ಲೇಖನ ಮಂಡಿಸುವ ಸಂಶೋಧನಾ ವಿದ್ಯಾರ್ಥಿಗೆ ಪೀಠದ ವತಿಯಿಂದ 10 ಸಾವಿರ ರೂ. ನಗದು ಬಹುಮಾನ ನೀಡುವುದಾಗಿ ಇದೇ ಸಂದರ್ಭದಲ್ಲಿ ಘೋಷಿಸಿದರು.

ವಿವಿಯ ವ್ಯಾಪ್ತಿಗೆ ಒಳಪಡುವ ಗ್ರಾಮೀಣ ಶಾಲೆಗಳಿಗೆ ಮೂಲಭೂತ ಸೌಕರ್ಯವನ್ನು ಒದಗಿಸಲು ವರ್ಷಕ್ಕೆ ಒಂದು ಲಕ್ಷ ರೂ. ವ್ಯಯಿಸಲು ಕಾರ್ಯಯೋಜನೆ ಸಿದ್ಧಪಡಿಸುವಂತೆ ಪೀಠದ ಸಂಯೋಜಕರಿಗೆ ಈ ಸಂದರ್ಭದಲ್ಲಿ ಸೂಚಿಸಿದರು.

ಕಾರ್ಯಾಗಾರದ ಸಂಯೋಜಕ ಡಾ.ತಿಪ್ಪೇಸ್ವಾಮಿ ಎಚ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯಕ್ರಮವನ್ನು ಡಾ.ಸುಷ್ಮಾ ಜೋಗನ್ ನಿರೂಪಿಸಿದರು. ಡಾ.ಸಂತೋಷ ಅತಿಥಿಗಳನ್ನು ಸ್ವಾಗತಿಸಿದರು. ಸಂಶೋಧನಾರ್ಥಿ ನರಸಿಂಹ ವಂದಿಸಿದರು.

ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಪಿಎಚ್.ಡಿ ವಿದ್ಯಾರ್ಥಿಗಳಿಗೆ ಮೂರು ದಿನಗಳ ಸಂಶೋಧನಾ ವಿಧಾನ ಕಾರ್ಯಾಗಾರದಲ್ಲಿ 200ಕ್ಕೂ ಹೆಚ್ಚು ಪ್ರತಿನಿಧಿಗಳು ಭಾಗಿಯಾಗಲಿದ್ದಾರೆ. ಮೂರು ದಿನಗಳ ಕಾಲ ವಿವಿಧ ತಾಂತ್ರಿಕ ಗೋಷ್ಠಿಗಳು ನಡೆಯಲಿದ್ದು, ಸಂಶೋಧನಾ ಕ್ಷೇತ್ರದ ಪರಿಣಿತರು ಉಪನ್ಯಾಸ ನೀಡಲಿದ್ದಾರೆ.

ವಿವಿಯ ಎಲ್ಲ ನಿಕಾಯದ ಡೀನರು, ಎಲ್ಲ ವಿಭಾಗಗಳ ಮುಖ್ಯಸ್ಥರು, ಪ್ರಾಧ್ಯಾಪಕರು, ಬೋಧಕ ಬೋಧೇತರ ಸಿಬ್ಬಂದಿ, ವಿದ್ಯಾರ್ಥಿಗಳು ಹಾಜರಿದ್ದರು.

# ಕುಂದುಕೊರತೆಯ ಜಾಗೃತಿ ಕಾರ್ಯಕ್ರಮ

- ಮಲ್ಲಮ್ಮ ನುಡಿವಾರ್ತೆ, ಕೊಪ್ಪಳ

ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗದ ಅಧ್ಯಕ್ಷರಾದ ಯು. ನಿಸಾರ್ ಅಹಮದ್ ಅವರ ಅಧ್ಯಕ್ಷತೆಯಲ್ಲಿ ಅಲ್ಪಸಂಖ್ಯಾತರ ಕುಂದು ಕೊರತೆ, ಅಲ್ಪಸಂಖ್ಯಾತ ಮಹಿಳೆಯರ ಮತ್ತು ಸ್ಥಳೀಯ ಮಹಿಳಾ ಅಧಿಕಾರೇತರ ಸಂಸ್ಥೆಗಳಿಗೆ ಸಾಕ್ಷರತೆಯನ್ನು ಪ್ರೇರೇಪಿಸಲು ಜಾಗೃತಿ ಕಾರ್ಯಕ್ರಮವನ್ನು ಏಪ್ರಿಲ್ 9 ರಂದು ಬೆಳಿಗ್ಗೆ 10.30 ಗಂಟೆಗೆ ಕೊಪ್ಪಳ ತಾಲ್ಲೂಕಿನ ಟಣಕನಕಲ್ ಗ್ರಾಮದ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ಆಯೋಜಿಸಲಾಗಿದೆ.

ಅಲ್ಪಸಂಖ್ಯಾತರ ಸಮುದಾಯದ ಚುನಾಯಿತ ಪ್ರತಿನಿಧಿಗಳು, ಸ್ಥಳಿಯ ಅಧೀಕಾರೇತರ ಮುಖಂಡರು, ಮಹಿಳಾ ಚುನಾಯಿತ ಪ್ರತಿನಿಧಿಗಳು, ಮಹಿಳಾ ಅಧಿಕಾರೇತರ ಸಂಘ ಸಂಸ್ಥೆಯವರು ಹಾಗೂ ಸಾರ್ವಜನಿಕರು ಈ ಕಾರ್ಯಕ್ರಮದಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಕೊಪ್ಪಳ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಯೋಜನೆ ಪೂರ್ಣಕ್ಕೆ ಅಧಿಕಾರಿಗಳಿಗೆ ಡಿಸಿ ಎಚ್ಚರಿಕೆ

• ಮಲ್ಲಮ್ಮ ನುಡಿ ವಾರ್ತೆ ವಿಜಯಪುರ

ಜಲಧಾರೆ ಯೋಜನೆ ಅನುಷ್ಠಾನದಲ್ಲಿ ವಿಳಂಬ ಸಲ್ಲದು. ಬೇರೆ ಬೇರೆ ಇಲಾಖಾ ಅಧಿಕಾರಿಗಳು ಸಮನ್ವಯತೆಯಿಂದಕೆಲಸಮಾಡುವಮೂಲಕಯೋಜನೆ ಪೂರ್ಣಗೊಳಿಸಬೇಕು ಎಂದು ಜಿಲ್ಲಾಧಿಕಾರಿಗಳಾದ ಡಾ.ಆನಂದ ಕೆ. ಅವರು ಹೇಳಿದರು.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಜಲಧಾರೆ ಯೋಜನೆ ಕುರಿತು ಜಿಲ್ಲಾಧಿಕಾರಿ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಮಾತನಾಡಿದರು.

ಆಲಮಟ್ಟಿ ಹಾಗೂ ನಾರಾಯಣಪುರ ಹಿನ್ನೀರಿನ ಮೂಲಕ ನೀರು ಪೂರೈಸುವ ಮಹತ್ವಾಕಾಂಕ್ಷೆಯ ಈ ಯೋಜನೆ ನಮ್ಮಜಿಲ್ಲೆಗೆ ವರದಾನವಾಗಿದೆ. ಯೋಜನೆ ಅನುಷ್ಠಾನದಲ್ಲಿ ವಿಳಂಬ ಸಲ್ಲದು ಎಂದರು. ಈ ಯೋಜನೆ ಅನುಷ್ಠಾನ ಪ್ರಕ್ರಿಯೆಯಲ್ಲಿ ವಿಳಂಬವಾಗಿದ್ದು,ಅಧಿಕಾರಿಗಳು ಯುದ್ಧೋಪಾದಿಯಲ್ಲಿ ಯೋಜನೆ ಪೂರ್ಣಗೊಳಿಸಬೇಕು ಎಂದರು.

ಯೋಜನೆ ಅನುಷ್ಠಾನಕ್ಕೆ ಅನುದಾನದ ಕೊರತೆ ಇಲ್ಲ. ಸಮಸ್ಯೆ ಎಲ್ಲಿದೆ ಗುರುತಿಸಿ, ಜಾಗ ಗುರುತಿಸುವಿಕೆ ಪೈಪ್ ಲೈನ್ ಅಳವಡಿಸಲು ಅಧಿಕಾರಿಗಳು ಸಮನ್ವಯತೆಯಿಂದ ಕೆಲಸ ಮಾಡಬೇಕು ಎಂದರು.

43 ಸೈಟ್ ನಲ್ಲಿ ಸಮಸ್ಯೆ ಇದೆ. 35 ಕಿಮೀ ಪೈಪ್ ಲೈನ್ ಮಾಡಲು ಅಧಿಕಾರಿಗಳು ಒಗ್ಗಟ್ಟಾಗಿ ಕಾರ್ಯ ನಿರ್ವಹಿಸಬೇಕು ಎಂದರು.




ತಹಸೀಲ್ದಾರ್ ಹಾಗೂ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಉದ್ಭವಿಸುವ ತಾಂತ್ರಿಕ ಸಮಸ್ಯೆ ನಿವಾರಿಸಿಕೊಂಡು ಸುಗಮವಾಗಿ ಯೋಜನೆ ಅನುಷ್ಠಾನಕ್ಕೆ ಸಹಕರಿಸಬೇಕು. ಈ ಮಹತ್ವದ ಕುಡಿಯುವ ನೀರಿನ ಯೋಜನೆ ಅನುಷ್ಠಾನ ವಿಷಯದಲ್ಲಿ ನಿರ್ಲಕ್ಷ್ಯ ವಹಿಸಬಾರದು ಸೂಚಿಸಿದರು

ತಹಶೀಲ್ದಾರ ಹಾಗೂ ಇಒ ಅವರು ಸ್ಥಳೀಯವಾಗಿ ಸಮಸ್ಯೆ ಇತ್ಯರ್ಥಪಡಿಸಲು ನಿರಂತರ ಕಾಲಕಾಲಕ್ಕೆ ಸಭೆ ನಡೆಸಿ ಯೋಜನೆ ಅನುಷ್ಠಾನ ಕುರಿತು ಫಾಲೋಅಪ್ ಮಾಡಬೇಕು ಎಂದರು.

ಇನ್ನೊಂದೆಡೆ ಸಾರ್ವಜನಿಕರು ರೈತರನ್ನು ಕರೆದು ಮಾತಾಡಿ, ಅವರಿಗೆ ಪರ್ಯಾಯ ವ್ಯವಸ್ಥೆ ಮಾಡಿಕೊಡಬೇಕು ಎಂದರು.

ಬಸವನಬಾಗೇವಾಡಿಯ ಕೆಲವು ಸೈಟ್ ಕ್ಲೀಯರ್ ಆಗಿಲ್ಲ. ಆ ಸೈಟ್ ಗಳನ್ನು ಕ್ಲೀಯರ್ ಮಾಡಲು ಸಂಬಂಧಿಸಿದ ಅಧಿಕಾರಿಗಳು ತಕ್ಷಣ ಗಮನಹರಿಸಬೇಕು ಎಂದರು.

ಇದು ಕೇವಲ ಇಲಾಖೆಯೊಂದರ ಕಾರ್ಯವಲ್ಲ. ಎಲ್ಲೆಲ್ಲಿ ಸಮಸ್ಯೆ ಇದೆ. ಅದಕ್ಕೆ ಎಲ್ಲ ಇಲಾಖೆಯವರು ಸಮನ್ವಯತೆಯಿಂದ ಕಾರ್ಯನಿರ್ವಹಿಸಬೇಕು ಎಂದರು. ವಿಜಯಪುರದಲ್ಲಿ ಸೈಟ್ ಸಮಸ್ಯೆ ಅಧಿಕಾರುಗಳು ಮುತುವರ್ಜಿ ವಹಿಸಬೇಕು ಎಂದ ಜಿಲ್ಲಾಧಿಕಾರಿಗಳು, ಸಭೆಯಲ್ಲಿ ಕೇವಲ ಕಥೆ ಹೇಳಬಾರದು. ಸಮಸ್ಯೆ ಪರಿಹಾರವಾಗಬೇಕು. ಇದು ಅವರ ಕೆಲಸ ಅಂತ ನಿರ್ಲಕ್ಷ್ಯ ವಹಿಸಬಾರದು. ನೀವು ಆಸಕ್ತಿ ವಹಿಸಿ, ಯೋಜನೆ ಅನುಷ್ಠಾನದತ್ತ ಗಮನಹರಿಸಬೇಕು ಎಂದರು.

ಗ್ರಾಮೀಣ ಜನರಿಗೋಸ್ಕರ ಇರುವ ಈ ಯೋಜನೆ ಶುದ್ಧ ಕುಡಿಯುವ ನೀರು ಪೂರೈಸುವುದಾಗಿದೆ. ಹಾಗಾಗಿ ಎಲ್ಲರೂ ಆಸಕ್ತಿ ವಹಿಸಿ ಯುದ್ಧೋಪಾದಿಯಲ್ಲಿ ಕೆಲಸ ಮಾಡಬೇಕು ಎಂದರು.

ಖಾತೆ ಅಭಿಯಂತರರು ಸಭೆ ಕರೆದು ಚರ್ಚಿಸಿ, ಸಮಸ್ಯೆಗಳನ್ನು ಸಿಇಒ ಅವರ ಗಮನಕ್ಕೆ ತಂದು ಎಲ್ಲೆಲ್ಲಿ ಸೈಟ್ ಸಮಸ್ಯೆ ಇದೆ ಎಂಬುದನ್ನು ಸಿಇಒ ಗಮನಕ್ಕೆ ತರಬೇಕು.

44 ಸೈಟಿನಲ್ಲಿ ಯಾವುದೇ ಸಮಸ್ಯೆ ತಲೆದೋರದಂತೆ ಎಲ್ಲರೂ ನೋಡಿಕೊಳ್ಳಬೇಕು. ಎಲ್ಲ ಇಲಾಖೆಯವರ ಸಮನ್ವಯ ಅತ್ಯಂತ ಮುಖ್ಯವಾಗಿದೆ ಎಂದು ಜಿಲ್ಲಾಧಿಕಾರಿಗಳು ಪುನರ್ ಉಚ್ಚರಿಸಿದರು.

ಅರಣ್ಯ ಭೂಮಿ ಸಮಸ್ಯೆ ನಿವಾರಿಸಿಕೊಂಡು ಕಾಮಗಾರಿಗೆ ವೇಗದ ಸ್ಪರ್ಶ ನೀಡಿ, ತಕ್ಷಣ ಯೋಜನೆ ಹಸ್ತಾಂತರಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಅವರು ಎರಡು ಪ್ರಸ್ತಾವನೆ ಸರ್ಕಾರಕ್ಕೆ ಕಳಿಸಿದ್ದು. 4 ಕಿಮೀ ಅರಣ್ಯ ಇಲಾಖೆಯ ಸಮಸ್ಯೆಯನ್ನು ಅರಣ್ಯ ಇಲಾಖೆಯವರು ಬಗೆಹರಿಸಿಕೊಳ್ಳಬೇಕು ಎಂದರು. ಈ ಸಭೆ ಕರೆದಿರುವ ಉದ್ದೇಶ ಎಲ್ಲ ತಾಲೂಕು ಇಒ, ತಹಶೀಲ್ದಾರರು, ಸಂಬಂಧಿಸಿದ ಇಲಾಖೆಯ ಅಧಿಕಾರಿಗಳನ್ನೆಲ್ಲ ಒಟ್ಟಾಗಿ ನಿಗದಿತ ಯೋಜನೆ ಅನುಷ್ಠಾನಕ್ಕೆ ಚುರುಕಾಗಿ ಕೆಲಸ ಮಾಡಿ ಯೋಜನೆ ಮುಗಿಸಿಕೊಡಬೇಕು ಎಂದರು.

ಯಾವ ತಾಲೂಕಿನಲ್ಲಿ ಯಾವ ಹಳ್ಳಿಯಲ್ಲಿ ಸಮಸ್ಯೆ ಇದೆ ಎಂಬುದನ್ನು ಗುರುತಿಸಿಕೊಂಡು ಅಧಿಕಾರಿಗಳು ಗಮನಹರಿಸಬೇಕು. ಆಗಾಗ ಮೈಕ್ರೋ ಸಭೆ ನಡೆಸಿ ಪರಿಹರಿಸಬೇಕು ಎಂದರು.

## ಮೂರ್ತಿ ಪ್ರತಿಷ್ಠಾಪನೆಗೆ ಮನವಿ



**ಯಲಬುರ್ಗಾ:** ತಾಲೂಕ ಹಡಪದ ಅಪ್ಪಣ್ಣ ಕ್ಷೌರಿಕ ಸಮಾಜ ಸೇವಾ ಸಂಘ ಪದಾಧಿಕಾರಿಗಳು, ಸದಸ್ಯರು, ಸಮಾಜದ ಗುರು ಹಿರಿಯರು ಸೇರಿಕೊಂಡು, ಶ್ರೀಮೊಗ್ಗಿ ಬಸವೇಶ್ವರ ದೇವಸ್ಥಾನದಿಂದ ಹಲವು ವೃತ್ತಗಳ ಮೂಲಕ ಘೋಷಣೆಗಳನ್ನು ಕೂಗುತ್ತಾ ತಹಶೀಲ್ ಕಚೇರಿಗೆ ಆಗಮಿಸಿ ತಮ್ಮ ಬೇಡಿಕೆಗಳ ಬಗ್ಗೆ ತಹಶೀಲ್ದಾರ ಅವರ ಪರವಾಗಿ ಅವರ ಇಲಾಖೆಯ ಅಧಿಕಾರಿಗಳಿಗೆ ಮನವಿಯನ್ನು ಸಲ್ಲಿಸಿದರು. ಮನವಿಯಲ್ಲಿ ಬೀದರ ಜಿಲ್ಲೆಯ ಬಸವಕಲ್ಯಾಣದ ಅನುಭವ ಮಂಟಪದ ತ್ರಿಪುರಾಂತಕ ಕೆರೆ ಹತ್ತಿರ ಇರುವ ಹಡಪದ ಅಪ್ಪಣ್ಣ ಅವರ ಗವಿಯಲ್ಲಿ ಅಪ್ಪಣ್ಣ ಅವರ ಮೂರ್ತಿ ಪುನಃ ಪ್ರತಿಷ್ಠಾಪನೆ ಮಾಡಬೇಕೆಂದು ಇಲಾಖೆಯ ಅಧಿಕಾರಿಗಳ ಗಮನಕ್ಕೆ ತಂದು ಮನವಿಯನ್ನ ಅರ್ಪಿಸಿದರು.

ಶಿವಶರಣ ಹಡಪದ ಅಪ್ಪಣ್ಣನವರ ಅರಿವಿನ ಗವಿಯನ್ನು ಬಸವೇಶ್ವರ ದೇವಸ್ಥಾನದ ಪಂಚ ಕಮಿಟಿ ಅವರು ಅಕ್ರಮವಾಗಿ ಹಸ್ತಕ್ಷೇಪ ಮಾಡಿ ಅನ್ಯ ಶರಣರ ಮೂರ್ತಿಯನ್ನು ಪ್ರತಿಷ್ಠಾಪನೆ ಮಾಡಿರುವುದು ಖೇದಕರ ಸಂಗತಿಯಾಗಿದೆ ಎಂದರು, ಇದರಿಂದ ಸಮುದಾಯದ ಭಕ್ತಿ ಭಾವನೆಗಳಿಗೆ ತೀವ್ರ ನೋವು ಉಂಟಾಗಿದ್ದು ನಮ್ಮ ಚರಣರ ಇತಿಹಾಸದ ಮೌಲ್ಯಗಳು ರಾತ್ರು ರಾತ್ರಿ ಕೆತ್ತು ಹಾಕಿದ್ದಾರೆ ಇದಕ್ಕೆ ಇನ್ನೊಂದು ಕಾರಣವನ್ನು ಮೊದಲಿನಿಂದಲೂ ಕನಿಷ್ಠ ಸಮಾಜ ಎಂದು ಕಾಣುತ್ತಾ ಬಂದಿರುವದು ಕಾರಣವಾಗಿರಬಹುದು ಎಂದರು.

ಈ ಅಕ್ರಮ ವೃತ್ತದಲ್ಲಿ ಭಾಗಿಯಾದ ಪಂಚ ಕಮಿಟಿ ಮತ್ತು ಸಂಬಂಧಪಟ್ಟ ಅಧಿಕಾರಿಗಳು ವಿರುದ್ಧ ತಕ್ಷಣ ಕ್ರಮ ಕೈಗೊಂಡು ಯಥಾ ಸ್ಥಿತಿಗೆ ತರಬೇಕು ಹಾಗೆ ಹಡಪದ ಅಪ್ಪಣ್ಣನವರು ಅರಿವಿನ ಗವಿಯಲ್ಲಿ ಅವರ ಮೂರ್ತಿಯನ್ನು ಪ್ರತಿಷ್ಠಾಪನೆ ಮಾಡಿ ಆ ಸ್ಥಳವನ್ನು ಬಸವಕಲ್ಯಾಣ ಅಭಿವೃದ್ಧಿ ಪ್ರಾಧಿಕಾರಕ್ಕೆ ಸೇರಿಸಿ ಶ್ರೀ ಭಾರತಿ ಅಪ್ಪಣ್ಣ ಮಹಾಸ್ವಾಮಿಗಳನ್ನು ಅಲ್ಲಿನ ಪ್ರಾಧಿಕಾರದ ಸದಸ್ಯರನ್ನಾಗಿ ಮಾಡಿಕೊಂಡು ಸಮರ್ಪಕವಾಗಿ ಅಭಿವೃದ್ಧಿಪಡಿಸಲು ಅಗತ್ಯ ಕ್ರಮಗಳುವಂತೆ ಒತ್ತಾಯಿಸಿದರು.

ಈ ವೇಳೆ ತಾಲೂಕ ಹಡಪದ ಅಪ್ಪಣ್ಣ ಸಮಾಜ ಸೇವಾ ಸಂಘದ ತಾಲೂಕ ಗೌರವ ಅಧ್ಯಕ್ಷ ಶಿವಪ್ಪ ಶಾಸ್ತ್ರೀ, ಅಧ್ಯಕ್ಷ ಈರಣ್ಣ ಹಡಪದ, ಉಪಾಧ್ಯಕ್ಷ ದೇವಪ್ಪ ಶಾಸ್ತ್ರಿ, ಕಾರ್ಯದರ್ಶಿ ಶರಣಪ್ಪ ಹಡಪದ, ಖಜಾಂಚಿ ಪ್ರಭುರಾಜ ಮಾರನಾಳ, ನಗರ ಘಟಕ ಅಧ್ಯಕ್ಷ ಬಸವರಾಜ ಹಡಪದ ಮುಖಂಡರಾದ ಮಲ್ಲಿಕಾರ್ಜುನ ಹಡಪದ, ವೀರೇಶ ಸಂಗನಾಳ, ಪ್ರಭುರಾಜ ತಲ್ಲೂರು, ಶರಣಪ್ಪ ಕರಮುಡಿ,ಸಿದ್ದಪ್ಪ ಹಡಪದ ಮ್ಯಾದನೇರಿ, ಬಸಪ್ಪ ರಾಟಿ ಗುನ್ನಾಳ, ನಾಗರಾಜ ಹಡಪದ ಗುನ್ನಾಳ, ಹನುಮೇಶ ಹಡಪದ , ಶರಣಪ್ಪ ಕುಡುಗುಂಟಿ, ದೇವರಾಜ ಹೊಸೂರು, ರೇವಣಪ್ಪ ಕೊನಸಾಗರ, ಬಸವರಾಜ ಬಂಡಿ, ಶರಣಪ್ಪ ಮ್ಯಾಗೇರಿ, ನಾಗರಾಜ ಹಡಪದ ಬಂಡಿ, ಆನಂದ ಹಡಪದ ವೀರೇಶ ಹಡಗಲಿ,ಬಸಪ್ಪ ಹಡಪದ ಬಂಡಿ, ಶರಣಪ್ಪ ಕರಮುಡಿ, ಶರಣಪ್ಪ ಹಡಪದ ಬಳೂಟಗಿ, ನೀಲಪ್ಪ ತಳಕಲ್, ಚೆನ್ನಪ್ಪ ನಿಡಶೇಷಿ, ಶಿವಕುಮಾರ ಮಾರನಾಳ, ಶಿವಪ್ಪ ಮಾರನಾಳ, ಮಹಾಂತೇಶ ಹಡಪದ, ವೀರೇಶ ಹಡಪದ,, ಪ್ರಭುರಾಜ ಕಲ್ಲೂರ, ಸಿದ್ದು ಹಡಪದ, ಬಸವರಾಜ ಕಲ್ಲೂರು, ಸಂಗಪ್ಪ ಬೇಲಿಹಾಳ, ಬಾಳಪ್ಪ ಹಡಪದ, ಹನುಮಂತ ಹಡಪದ, ಮಂಜುನಾಥ ಹಡಪದ, ದೇವರಾಜ ಹಡಪದ ಮತ್ತಿತರರು ಇದ್ದರು.

## ಪ್ರಾಣಿ ಪಕ್ಷಿಗಳಿಗೆ ನೀರಿನ ಸೌಲಭ್ಯ ಅಗತ್ಯ

• ಮಲ್ಲಮ್ಮ ನುಡಿ ವಾರ್ತೆ ಕಂಪ್ಲಿ

ಬೇಸಿಗೆಯ ತೀವ್ರಬಿಸಿಲಿನಿಂದಾಗಿ ಪ್ರಾಣಿ–ಪಕ್ಷಿಗಳಿಗೆ ನಿರ್ಜಲೀಕರಣ ಉಂಟಾಗಿ ಜೀವಕ್ಕೆ ಆಪತ್ತು ಎದುರಾಗುತ್ತದೆ.



ಈ ಸಮಯದಲ್ಲಿ ಅವುಗಳ ದಾಹ ನೀಗಿಸಲು ಮನೆಗಳ ತಾರಸಿ, ಬಾಲ್ಕನಿ ಅಥವಾ ಮರದ ಕೆಳಗೆ ನೀರಿನ ಬಟ್ಟಲುಗಳನ್ನು ಇಡುವುದು ಅತ್ಯಗತ್ಯ. ದನ, ನಾಯಿ, ಬೆಕ್ಕುಗಳಿಗಾಗಿ ಪ್ರತ್ಯೇಕ ನೀರಿನ ತೊಟ್ಟಿ ನಿರ್ಮಿಸಿ, ಪ್ರತಿದಿನ ಸ್ವಚ್ಛ ನೀರು ಒದಗಿಸುವ ಮೂಲಕ ಮೂಕ ಪ್ರಾಣಿಗಳನ್ನು ರಕ್ಷಿಸಬೇಕು.

ಬೇಸಿಗೆ ಸಮೀಪಿಸುತ್ತಿದ್ದಂತೇ ಕುಡಿಯುವ ನೀರಿನ ಸಮಸ್ಯೆ ಎದುರಾಗುತ್ತದೆ. ಆದರೆ ಈ ಸಮಸ್ಯೆ ಕೇವಲ ಮನುಷ್ಯರು ಮಾತ್ರವಲ್ಲದೇ ಪ್ರಾಣಿಗಳೂ ಎದುರಿಸುತ್ತವೆ. ಅದರಲ್ಲೂ ವನ್ಯಜೀವಿಗಳು ಬೇಸಿಗೆಯಲ್ಲಿ ಕುಡಿಯುವ ನೀರಿನ ಸಮಸ್ಯೆಯಿಂದ ಬಳಲುತ್ತವೆ.ಈ ಹಿನ್ನೆಲೆಯಲ್ಲಿ ವನ್ಯಜೀವಿಗಳಿಗೆ ಕುಡಿಯವ ನೀರಿನ ವ್ಯವಸ್ಥೆ ಮಾಡುವುದು ತನ್ನ ವ್ಯಾಪ್ತಿಯಲ್ಲಿ ಬರುವ ಕೆರೆಗಳನ್ನು ಗುರುತಿಸಿ ಹೂಳೆತ್ತುವ ಕಾರ್ಯ ಆರಂಭಿಸುವುದ, ಅರಣ್ಯ ಇಲಾಖೆಯ ಮುಖ್ಯ ಪಾತ್ರವಾಗಿದೆ.

**ಬೇಸಿಗೆಯಲ್ಲಿ ಪ್ರಾಣಿ–ಪಕ್ಷಿಗಳ ನೀರಿನ ಅವಶ್ಯಕತೆ ಮತ್ತು ರಕ್ಷಣೆ**

**ತೀವ್ರ ಬಾಯಾರಿಕೆ:** ಬಿಸಿಲಿನ ಝಳಕ್ಕೆ ಪ್ರಾಣಿ–ಪಕ್ಷಿಗಳು ನೀರು ಸಿಗದೆ ಬಳಲಿ ಪ್ರಾಣ ಕಳೆದುಕೊಳ್ಳುತ್ತವೆ.

**ನೀರಿನ ಬಟ್ಟಲು ಇಡುವುದು:** ಮನೆಯ ಆವರಣ, ತಾರಸಿ ಅಥವಾ ಗಿಡ–ಮರಗಳ ಮೇಲೆ ಸಣ್ಣ ಪಾತ್ರೆಗಳಲ್ಲಿ ಪ್ರತಿದಿನ ನೀರು ಇಡಬೇಕು.

**ಅರಣ್ಯದಲ್ಲಿ ನೀರಿನ ವ್ಯವಸ್ಥೆ:** ಅರಣ್ಯ ಪ್ರದೇಶಗಳಲ್ಲಿ ವನ್ಯಜೀವಿಗಳಿಗಾಗಿ ಅರಣ್ಯ ಇಲಾಖೆ ಹೊಂಡಗಳನ್ನು ನಿರ್ಮಿಸಿ ನೀರು ತುಂಬಿಸುತ್ತಿದೆ.

## ಜಯಂತಿಗಳನ್ನು ಸೌಹಾರ್ದತೆಯಿಂದ ಆಚರಿಸಬೇಕು

• ಮಲ್ಲಮ್ಮ ನುಡಿ ವಾರ್ತೆ ಕಮಲನಗರ

ಮಹಾಪುರುಷರ ಜಯಂತಿಗಳನ್ನು ಸೌಹಾರ್ದತೆಯಿಂದ ಆಚರಿಸಬೇಕು. ಸಂವಿಧಾನದ ಆಶಯದಂತೆ ಪ್ರತಿಯೊಬ್ಬರೂ ಸಮಾನತೆ ಮತ್ತು ಶಿಸ್ತನ್ನು ಕಾಪಾಡಿಕೊಳ್ಳುವುದು ಅತಿ ಮುಖ್ಯ ಎಂದು ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ (ಇಓ) ಹನಮಂತರಾವ ಕೌಟಗೆ ಅವರು ಹೇಳಿದರು.

ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಜಯಂತಿ ಅಂಗವಾಗಿ ಪಟ್ಟಣದ ಕಮಲನಗರ ಪೊಲೀಸ್ ಠಾಣೆಯಲ್ಲಿ ಪೂರ್ವಭಾವಿಯಾಗಿ ಶಾಂತಿ ಸಭೆಯಲ್ಲಿ ಅವರು ಮಾತನಾಡಿದರು.

ತಹಸೀಲ್ದಾರ್ ಅಮಿತಕುಮಾರ ಕುಲಕರ್ಣಿ ಅವರು ಮಾತನಾಡಿ, ಮೆರವಣಿಗೆ ಮತ್ತು ಕಾರ್ಯಕ್ರಮದ ಸಮಯದಲ್ಲಿ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಎಚ್ಚರ ವಹಿಸಬೇಕು. ಸಾರ್ವಜನಿಕರು ಆಡಳಿತ ಮಂಡಳಿಯೊಂದಿಗೆ ಸಹಕರಿಸಬೇಕು ಎಂದು ಮನವಿ ಮಾಡಿದರು.




ಸಿ.ಪಿ.ಐ ಶ್ರೀಕಾಂತ ಅಲ್ಲಾಪುರೆ ಮತ್ತು ಪಿ.ಎಸ್.ಐ ಆಶಾ ರಾಠೋಡ ಅವರು ಮಾತನಾಡಿ, ಕಾರ್ಯಕ್ರಮದ ವೇಳೆ ಪಾಲಿಸಬೇಕಾದ ನಿಯಮಗಳ ಬಗ್ಗೆ ಕಟ್ಟುನಿಟ್ಟಿನ ಸೂಚನೆಗಳನ್ನು ನೀಡಿದರು. "ಯಾರಾದರೂ ಕಾನೂನು ಕೈಗೆತ್ತಿಕೊಂಡರೆ ಅಥವಾ ಶಾಂತಿಗೆ ಭಂಗ ತಂದರೆ ಅಂತಹವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು. ಪರಸ್ಪರ ಗೌರವದಿಂದ ಹಬ್ಬವನ್ನು ಸಂಭ್ರಮಿಸೋಣ," ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ವಿವಿಧ ಸಂಘಟನೆಗಳ ಮುಖಂಡರು, ಗ್ರಾಮದ ಪ್ರಮುಖರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

## ಸಮಾಜದ ಪ್ರತಿಬಿಂಬ ಪತ್ರಿಕೋದ್ಯಮ



**ಕೆಂಭಾವಿ:** ಪಟ್ಟಣದ ಮಹಾ ಶಿವಶರಣೆ ಹೇಮರಡ್ಡಿ ಮಲ್ಲಮ್ಮ ಆಂಗ್ಲ ಮಾಧ್ಯಮ ಶಾಲೆಯ ಸಂಚಾಲಕರಾದ ಮೋಹನರಡ್ಡಿ ಡಿಗ್ಗಾವಿ ಅವರು, ಮಂಗಳವಾರ 'ಮಲ್ಲಮ್ಮ ನುಡಿ' ದಿನಪತ್ರಿಕೆಯ ವಿಶೇಷ ಸಂಚಿಕೆಯ ಗೌರವ ಪ್ರತಿಯನ್ನು ಸ್ವೀಕರಿಸಿದರು. ಈ ಸಂದರ್ಭದಲ್ಲಿ ಸಂಚಿಕೆಗೆ ಶುಭಕೋರಿ ಮಾತನಾಡಿದ ಅವರು, "ಪತ್ರಿಕೋದ್ಯಮ ಎನ್ನುವುದು ಕೇವಲ ಸುದ್ದಿಯಲ್ಲ, ಅದು ಸಮಾಜದ ಪ್ರತಿಬಿಂಬ. ಇತ್ತೀಚೆಗೆ ಮಲ್ಲಮ್ಮ ನುಡಿ ದೈನಿಕವು ವಿಭಿನ್ನ ವಿನ್ಯಾಸದೊಂದಿಗೆ ಶೋಷಿತರ ಧ್ವನಿಯಾಗಿ ಹೊರಹೊಮ್ಮುತ್ತಿದೆ. ಕೇವಲ ಸುದ್ದಿಯನ್ನಷ್ಟೇ ನೀಡದೆ ಸಾಹಿತ್ಯ, ಕಲೆ, ವಿಜ್ಞಾನ ಮತ್ತು ಸಂಸ್ಕೃತಿಯನ್ನು ಪೋಷಿಸುತ್ತಾ, ವಿಶೇಷ ಅಂಕಣಗಳ ಮೂಲಕ ಜ್ಞಾನವನ್ನು ಹಂಚುತ್ತಾ ಮುನ್ನುಗ್ಗುತ್ತಿರುವುದು ಸಂತಸ ತಂದಿದೆ" ಎಂದರು.

## ಎಐಸಿಸಿ ಅಧ್ಯಕ್ಷರನ್ನು ಬಂಧಿಸಿ

**ಬೆಂಗಳೂರು:** ಬಿಜೆಪಿ ಮತ್ತು ಆರೆಸ್ಸೆಸ್ ವಿರುದ್ಧ ಆಕ್ಷೇಪಾರ್ಹ ಹೇಳಿಕೆ ನೀಡಿದ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಯವರ ವಿರುದ್ಧ ಮೊಕದ್ದಮೆ ದಾಖಲಿಸಿ ಅವರನ್ನು ಬಂಧಿಸಲು ಒತ್ತಾಯಿಸಿದ್ದಾಗಿ ಶಾಸಕ ಎಸ್.ಮುನಿರಾಜು ಅವರು ತಿಳಿಸಿದ್ದಾರೆ.

ಅಸ್ಸಾಂನಲ್ಲಿ ನಿನ್ನೆ ಚುನಾವಣಾ ಭಾಷಣ ಮಾಡುವಾಗ ಕಾಂಗ್ರೆಸ್ ಪಕ್ಷದ ರಾಷ್ಟ್ರೀಯ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ನಮಾಜ್ ಮಾಡುವಾಗ ವಿಷಸರ್ಪ ಬಂದರೆ ನೀವು ನಮಾಜನ್ನು ನಿಲ್ಲಿಸಿ ಅದನ್ನು ಕೊಲ್ಲಿ; ನಮಾಜ್ ಮಾಡುವಾಗ ಬಿಜೆಪಿ, ಬಂದರೆ ನಮಾಜನ್ನು ನಿಲ್ಲಿಸಿ ಅವರನ್ನು ಕೊಲ್ಲಿ; ಇದು ಉಲ್ಲೇಖ ಆಗಿದೆ ಎಂದಿದ್ದಾರೆ ಎಂದು ಆಕ್ಷೇಪಿಸಿದರು. ಇದು ಬೆಂಕಿ ಹಚ್ಚುವ ಕೆಲಸ ಎಂದು ಟೀಕಿಸಿದರು. ಕೋಮುಗಲಭೆ ಹರಡುವ ಸಂದರ್ಭಗಳು ಬರಬಹುದು. ದೇಶದ್ರೋಹಿಗಳು, ಮೂಲಭೂತವಾದಿಗಳಿಗೆ ಬೆಂಬಲ ಸೂಚಿಸುವ ಮಾತುಗಳಿವು. ಇದರ ವಿರುದ್ಧ ಹೋರಾಟ ಮಾಡಲಾಗುತ್ತಿದೆ. ನಾನು, ಜಿಲ್ಲಾಧ್ಯಕ್ಷ ಹರೀಶ್, ಶಾಸಕ ಮತ್ತು ಜಿಲ್ಲಾಧ್ಯಕ್ಷ ಸಿ.ಕೆ.ರಾಮಮೂರ್ತಿ, ಪ್ರಮುಖರಾದ ಪ್ರಕಾಶ್ ಮತ್ತಿತರರು ಡಿ.ಜಿ.ಪಿ. ಯವರನ್ನು ಭೇಟಿ ಮಾಡಿ ದೂರು ನೀಡಿದ್ದೇವೆ ಎಂದರು.

ಇದನ್ನು ಕೂಲಂಕಷವಾಗಿ ಪರಿಶೀಲಿಸಿ ಕ್ರಮ ಕೈಗೊಳ್ಳುವುದಾಗಿ ಹೇಳಿದ್ದಾರೆ ಎಂದು ತಿಳಿಸಿದರು. ಇದು ದೇಶದ್ರೋಹಿ ಮಾತು. ಇದನ್ನಾಡಿದ ಖರ್ಗೆಯವರನ್ನು ಬಂಧಿಸಲು ಒತ್ತಾಯಿಸಿದರು.

## ಟ್ರೇಲರ್ ನಲ್ಲೇ ಗಮನ ಸೆಳೆದ ಎಲ್ರ ಕಾಲೆಳೆಯತ್ತೆ ಕಾಲ

• ಮಲ್ಲಮ್ಮ ನುಡಿ ವಾರ್ತೆ ಹುಣಸೂರು

ಸುಜಯ್ ಶಾಸ್ತ್ರಿ ನಿರ್ದೇಶನದ, ಗೋಕುಲ ಎಂಟರ್ಟೈನರ್ಸ್ ಲಾಂಛನದಲ್ಲಿ ಗೋವಿಂದರಾಜು ಅವರು ನಿರ್ಮಿಸಿರುವ ಹಾಗೂ ಚಂದನ್ ಶೆಟ್ಟಿ ನಾಯಕನಾಗಿ ನಟಿಸಿರುವ "ಎಲ್ರ ಕಾಲೆಳಿಯತ್ತೆ ಕಾಲ" ಚಿತ್ರದ ಟ್ರೇಲರ್ ಆನಂದ್ ಆಡಿಯೋ ಮೂಲಕ ಬಿಡುಗಡೆಯಾಗಿದೆ. 90 ರ ಕಾಲಘಟ್ಟದ ರೆಟ್ರೊ ಶೈಲಿಯ ಕಥಾಹಂದರ ಹೊಂದಿರುವ ಈ ಚಿತ್ರದ ಟ್ರೇಲರ್ ಗೆ ಚಂದನ್ ಶೆಟ್ಟಿ ಅಭಿಮಾನಿಗಳು ಫಿದಾ ಆಗಿದ್ದಾರೆ. ಏಪ್ರಿಲ್ 17 ರಂದು ಚಿತ್ರ ಬಿಡುಗಡೆಯಾಗುತ್ತಿದ್ದು, ಚಿತ್ರ ನೋಡಲು ಅಭಿಮಾನಿಗಳು ಕಾತುರದಿಂದ ಕಾಯುತ್ತಿದ್ದಾರೆ. ಟ್ರೇಲರ್ ಬಿಡುಗಡೆ ನಂತರ ಚಿತ್ರತಂಡದ ಸದಸ್ಯರು ಚಿತ್ರದ ಬಗ್ಗೆ ಹೇಳಿದ್ದು ಹೀಗೆ.




ಮೊದಲಿಗೆ ಕೇಳಿದನ್ನೆಲ್ಲಾ ಕೊಟ್ಟು ಒಂದೊಳ್ಳೆ ಚಿತ್ರ ಮೂಡಿಬರಲು ಸಹಕಾರ ನೀಡಿದ ನಿರ್ಮಾಪಕರಿಗೆ ಧನ್ಯವಾದ ಎಂದು ಮಾತನಾಡಿದ ನಿರ್ದೇಶಕ ಸುಜಯ್ ಶಾಸ್ತ್ರಿ, ರಿಯಾಲಿಟಿ ಶೋ ವೊಂದರಲ್ಲಿ ಚಂದನ್ ಶೆಟ್ಟಿ ಅವರನ್ನು ನೋಡಿದ ನನಗೆ ನಮ್ಮ ಕಥೆಗೆ ಇವರು ಸೂಕ್ತ ನಾಯಕ ಎಂದೆನಿಸಿತು. ನಂತರ ಚಂದನ್ ಶೆಟ್ಟಿ ಅವರಿಗೆ ನನ್ನ ಗೆಳೆಯ ರಾಜಗುರು ಹೊಸಕೋಟೆ ಬರೆದಿರುವ ಈ ಚಿತ್ರದ ಕಥೆ ಹೇಳಿದ್ದೆವು. ಚಂದನ್ ಅಭಿನಯಿಸಲು ಒಪ್ಪಿದರು. ಚಿತ್ರೀಕರಣಕ್ಕೂ ಮುನ್ನ ಪೂರ್ವತಯಾರಿ ನೀಡಲಾಯಿತು. ಈ ಚಿತ್ರಕ್ಕಾಗಿ ಚಂದನ್ ಬಹಳ ಶ್ರಮ ಪಟ್ಟಿದ್ದಾರೆ. ನಾಯಕಿ ಅರ್ಚನಾ ಕೊಟ್ಟಿಗೆ ಸಹ ಉತ್ತಮವಾಗಿ ಅಭಿನಯಿಸಿದ್ದಾರೆ. ಎಲ್ಲರ ಮನಸ್ಸಿಗೂ ಹತ್ತಿರವಾಗುವಂತಹ ಕಥೆಯನ್ನು ರಾಜಗುರು ಹೊಸಕೋಟೆ ಬರೆದಿದ್ದಾರೆ. ಪ್ರವೀಣ್ – ಪ್ರದೀಪ್ ಸುಮಧುರ ಸಂಗೀತ ನೀಡಿದ್ದಾರೆ. ತಂತ್ರಜ್ಞರ ಕಾರ್ಯ ವೈಖರಿ ಹಾಗೂ ಸಹ ಕಲಾವಿದರ ನಟನೆ ಸೊಗಸಾಗಿದೆ. ಏಪ್ರಿಲ್ 17 ನಮ್ಮ ಚಿತ್ರ ತೆರೆಗೆ ಬರುತ್ತಿದೆ. ಎಲ್ಲರೂ ನೋಡಿ. ಪ್ರೋತ್ಸಾಹ ನೀಡಿ ಎಂದರು.

ನಾನು ಈ ಚಿತ್ರದಲ್ಲಿ ನಟಿಸಲು ಮೊದಲ ಕಾರಣ ಕಥೆ. ಅಂತಹ ಅದ್ಭುತ ಕಥೆ ಇದು. ಇಂತಹ ಚಿತ್ರವನ್ನು ದಯವಿಟ್ಟು ಎಲ್ಲರೂ ನೋಡಿ ಗೆಲ್ಲಿಸಬೇಕು. ನಾಯಕನಾಗಿ ಇದು ನನ್ನ ಮೊದಲ ಚಿತ್ರ. ಸುಜಯ್ ಶಾಸ್ತ್ರಿ, ರಾಜಗುರು ಹೊಸಕೋಟೆ ಅವರೆಲ್ಲಾ ರಂಗಭೂಮಿ ಹಿನ್ನೆಲೆಯವರು. ಅವರು ಒಂದು ರೀತಿ ಶಾಲೆ ಇದ್ದ ಹಾಗೆ. ಅವರಿಂದ ನಾನು ಸಾಕಷ್ಟು ಕಲಿತಿದ್ದೇನೆ. ಟ್ರೇಲರ್ ಗೆ ನಿರೀಕ್ಷೆಗೂ ಮೀರಿ ಮೆಚ್ಚುಗೆ ಸಿಕ್ಕಿದೆ. ಮನೆಮಂದಿಯೆಲ್ಲಾ ಒಟ್ಟಿಗೆ ಕುಳಿತು ನೋಡುವ ಒಂದೊಳ್ಳೆ ಚಿತ್ರ ಇದೇ ಹದಿನೇಳರಂದು ನಿಮ್ಮ ಮುಂದೆ ಬರಲಿದೆ. ಕನ್ನಡಿಗರಿಂದ ಕನ್ನಡಿಗರಿಗಾಗಿಯೇ ಮಾಡಿರುವ ಈ ಕನ್ನಡ ಚಿತ್ರವನ್ನು ಚಿತ್ರಮಂದಿರಗಳಲ್ಲೇ ನೋಡಿ ಎಂದರು ನಾಯಕ ಚಂದನ್ ಶೆಟ್ಟಿ.

## ಶರಣರ ಅರಿವಿನ ದೀಪ: ಮನುಷ್ಯತ್ವದಿಂದ ವಿಶ್ವಮಾನವ ಪ್ರಜ್ಞೆಯವರೆಗೆ



ಭೋಗ–ಐಭೋಗ
• ವೀರಣ್ಣ ಕಲಕೇರಿ
ಕೆಂಭಾವಿ

ಕನ್ನಡ ನಾಡಿನ ಸಾಂಸ್ಕೃತಿಕ ಚರಿತ್ರೆಯಲ್ಲಿ 12ನೇ ಶತಮಾನದ ಶರಣರ ಕ್ರಾಂತಿ ಮತ್ತು 20ನೇ ಶತಮಾನದ ಕುವೆಂಪು ಅವರ ವೈಚಾರಿಕ ಕ್ರಾಂತಿಗಳು ಸಮ ಸಮಾಜದ ಪರಿಕಲ್ಪನೆಯ ಅತ್ಯಂತ ಪ್ರಮುಖ ಮೈಲಿಗಲ್ಲುಗಳೆ ಎನ್ನಬಹುದು. ಬಸವಪೂರ್ವ ಕೆಂಭಾವಿ ಭೋಗಣ್ಣ, ಮುದನೂರು ದಾಸಿಮಾರ್ಯ ಸೇರಿದಂತೆ ಬಸವಾದಿ ಶರಣರು ತಮ್ಮ ವಚನಗಳ ಮೂಲಕ ಕಾಯಕ ಪರಿಕಲ್ಪನೆ, ಮೌಢ್ಯ ವಿರೋಧ ಮತ್ತು ನಿಜ ಧರ್ಮವನ್ನು ಅರಿವೆಡೆಗೆ ಕೊಂಡೊಯ್ದು 'ಮನುಷ್ಯತ್ವ'ದ ಬುನಾದಿ ಹಾಕಿದರು. ಅದರಂತೆ ರಾಷ್ಟ್ರಕವಿ ಕುವೆಂಪು ಅವರು 'ರೂಪ ರೂಪಗಳನ್ನು ದಾಟಿ ನಾಮಕೋಟಿಗಳನ್ನು ಮೀಟಿ, ನೂರು ಮತದ ಹೊಟ್ಟ ತೂರಿ, ಎಲ್ಲ ತತ್ವದೆಲ್ಲೆ ಮೀರಿ, ಓ ನನ್ನ ಚೇತನ ಆಗು ನೀ ಅನಿಕೇತನ' ಎಂದು 'ವಿಶ್ವಮಾನವ' ಪ್ರಜ್ಞೆಯನ್ನಾಗಿ ಬಿತ್ತಿದರು. ಇಲ್ಲಿ ಕಾಲಘಟ್ಟಗಳು ಬೇರೆ ಬೇರೆಯಾದರೂ ಈ ಅರಿವಿನ ಪಯಣದಲ್ಲಿ ಮನುಕುಲದ ಏಳಿಗೆಯ ಆಶಯದಲ್ಲಿ ನಿರಂತರತೆಯನ್ನು ಕಾಣುತ್ತೇವೆ.

ಕನಕದಾಸರು ಕೂಡ "ಕುಲಕುಲವೆಂದು ಹೊಡೆದಾಡದಿರಿ, ನಿಮ್ಮ ಕುಲದ ನೆಲೆಯನೇನಾದರೂ ಬಲ್ಲಿರಾ?" ಎಂದು ಪ್ರಶ್ನಿಸುವ ಮೂಲಕ ಮನುಕುಲದಲ್ಲಿನ ಮೇಲು–ಕೀಳು ಎಂಬ ಭ್ರಮೆಯನ್ನು ಎತ್ತಿ ತೋರಿಸಿದರೆ, ಸರ್ವಜ್ಞನು ತನ್ನ ತ್ರಿಪದಿಗಳ ಮೂಲಕ, "ಜಾತಿಹೀನನ ಮನೆಯ ಜ್ಯೋತಿ ತಾ ಹೀನವೇ? ಜಾತಿ ವಿಜಾತಿಯನ್ನಬೇಡ, ದೇವನೊಲಿದಾತನೇ ಜಾತ ಸರ್ವಜ್ಞ" ಎಂದು ಸಾಮಾಜಿಕ ಅಂಕುಡೊಂಕುಗಳನ್ನು ತಿದ್ದಿ ನಿಜ ತತ್ವ ಸಾರಿದರು. ಇದೇ ಹಾದಿಯಲ್ಲಿ ಸಾಗಿದ ಆಧುನಿಕ ಚಿಂತಕರಲ್ಲಿ ಒಬ್ಬರಾದ ಸಿದ್ಧಯ್ಯ ಪುರಾಣಿಕರು (ಕಾವ್ಯಾನಂದ) "ಏನಾದರು ಆಗು ನೀ ಬಯಸಿದಂತಾಗು, ನಿನ್ನೊಲವಿನಂತಾಗು, ಏನಾದರು ಆಗು ಮೊದಲು ಮಾನವನಾಗು" ಎಂದು ಮನುಷ್ಯತ್ವದ ಅರಿವಿನ ಹಾದಿಯನ್ನು ತೋರಿದರು. ಸಮನ್ವಯ ಕವಿ ಜಿ.ಎಸ್. ಶಿವರುದ್ರಪ್ಪನವರು ಮನುಷ್ಯ ಸಂಬಂಧಗಳ ಬೆಸುಗೆಯ ಬಗ್ಗೆ ಬರೆಯುತ್ತಾ: ಪ್ರೀತಿ ಇಲ್ಲದ ಮೇಲೆ ಮಾತಿಗೆ ಮಾತು ಕೂಡೀತು ಹೇಗೆ ? ಅರ್ಥ ಹುಟ್ಟೀತು ಹೇಗೆ? ಸಂಶಯದ ಗಡಿಗಳುದ್ದಕ್ಕು ಸಿಡಿಗುಂಡುಗಳ ಕದನ ನಿಂತೀತು ಹೇಗೆ ? "ಎದೆಯ ದನಿಯನ್ನು ಎದೆಯು ಆಲಿಸಬಲ್ಲ ಪ್ರೀತಿ ಇರಲಿ, ಎಂದು ಮನುಷ್ಯತ್ವದ ಮಹತ್ವವನ್ನು ಸಾರಿದರು. ಇನ್ನು ದಲಿತ ಕವಿ ಡಾ. ಸಿದ್ಧಲಿಂಗಯ್ಯನವರು ತಮ್ಮ ಕ್ರಾಂತಿಕಾರಿ ಸಾಲುಗಳ ಮೂಲಕ, "ಯಾರಿಗೆ ಬಂತು ಎಲ್ಲಿಗೆ ಬಂತು ನಲವತ್ತೇಳರ ಸ್ವಾತಂತ್ರ್ಯ?" ಎಂದು ಪ್ರಶ್ನಿಸುತ್ತಲೇ, ಅಂತಿಮವಾಗಿ ಶೋಷಿತರ ದನಿಯಾಗಿ ಸಮ ಸಮಾಜದ ಕನಸು ಕಂಡರು. ಹೀಗೆ ಈ ಎಲ್ಲಾ ಮಹನೀಯ ಚಿಂತಕರ ಗುರಿ, ಅದು 'ಮನುಷ್ಯನನ್ನು ಮನುಷ್ಯನನ್ನಾಗಿ ಕಾಣುವುದೇ ಆಗಿತ್ತು.

**ಸಮಾನತೆ ಮತ್ತು ಮೌಢ್ಯ ಮುಕ್ತ ಸಮಾಜ:** 12ನೇ ಶತಮಾನದಲ್ಲಿ ಶರಣರು ಜಾತಿ ಮತ್ತು ವರ್ಗದ ಸಂಕೋಲೆಗಳನ್ನು ಕಳಚಲು "ಇವ ನಾರವ ಇವ ನಾರವ ಎನ್ನದೆ ಇವ ನಮ್ಮವ ಇವ ನಮ್ಮವ" ಎಂಬ ತತ್ವ ಸಾರಿದರು. ಅದನ್ನೇ ಕುವೆಂಪು ಅವರು "ಓ ನನ್ನ ಚೇತನ, ಆಗು ನೀ ಅನಿಕೇತನ" ಎಂದು ಕರೆ ನೀಡುವ ಮೂಲಕ, ಮನುಷ್ಯ ಯಾವುದೇ ಜಾತಿ ಮತ ಪಂಥ ಎಂಬ ಒಂದು ಸೀಮಿತ ಚೌಕಟ್ಟಿಗೆ ಬಂಧಿಯಾಗದೆ ವಿಶ್ವಪ್ರಜೆಯಾಗಬೇಕು ಎಂದರು. ಶರಣರು "ಅರಿವೇ ಗುರು" ಎಂದರೆ, ಕುವೆಂಪು ಅವರು ವಿಜ್ಞಾನ ಮತ್ತು ವೈಚಾರಿಕತೆಯೇ ಮನುಷ್ಯನ ದಾರಿದೀಪವಾಗಬೇಕು ಎಂದರು.

"ಜಾತಿ ಜನಿತವಲ್ಲ ಜನಿತ ಜಾತಿ ಇಲ್ಲ,
ಜನಿತಕ್ಕೆ ಸಜೆಯಾದ ಜಾತಿ,
ಜಾತಿಯನ್ನು ಎಣಿಸಿದವ
ಜಾತನಲ್ಲ ಸೃಷ್ಟಿಬಲೇಶ"

ಎನ್ನುವಂತೆ, ಶರಣರು "ದೇಹವೇ ದೇಗುಲ" ಎಂಬ ಅರಿವಿನ ಮೂಲಕ ದೇವರು ನಮ್ಮೊಳಗೆ ಇದ್ದಾನೆ ಎಂದು ತೋರಿಸಿಕೊಟ್ಟರು. ಕುವೆಂಪು ಅವರು "ಮಗು ಹುಟ್ಟುವಾಗ ವಿಶ್ವಮಾನವನಾಗಿರುತ್ತದೆ, ಬೆಳೆಯುತ್ತಾನೆ ನಾವು ಅವನನ್ನು ಅಲ್ಪಮಾನವನನ್ನಾಗಿ ಮಾಡುತ್ತೇವೆ" ಎಂದು ಎಚ್ಚರಿಸುತ್ತಾ, ಮೌಢ್ಯದಿಂದ ಹೊರಬರಲು ಆಧುನಿಕ ಕಾಲಕ್ಕೆ 'ಮನುಜಮತ'ವನ್ನು ಸಾರಿದರು. "ದಯವಿಲ್ಲದ ಧರ್ಮವದಾವುದಯ್ಯಾ?" ಎಂಬ ಬಸವಣ್ಣನವರ ನುಡಿ ಸಕಲ ಜೀವರಾಶಿಗಳ ಲೇಸನ್ನು ಬಯಸುವ ವಿಶ್ವಪ್ರೇಮದ ದ್ಯೋತಕವಾದರೆ, ಇದೇ ಪೂರ್ಣದೃಷ್ಟಿಯನ್ನು ಕುವೆಂಪು ಅವರು ಪ್ರಕೃತಿಯ ಪ್ರತಿ ಜೀವಿಯನ್ನು ಗೌರವಿಸುವ, ಅಹಂಕಾರವನ್ನು ತೊರೆದು ಸಮನ್ವಯ ಸಾಧಿಸುವ 'ವಿಶ್ವಮಾನವ ಸಂದೇಶ'ದಲ್ಲಿ ಅಳವಡಿಸಿದರು.

**ಕಾಯಕ ಪ್ರಜ್ಞೆ ಮತ್ತು ಶ್ರಮದ ಗೌರವ:** ಶರಣರು ಯಾವುದೇ ಕೆಲಸವನ್ನು 'ಹೆಚ್ಚು' ಅಥವಾ 'ಕಡಿಮೆ' ಎಂದು ನೋಡಲಿಲ್ಲ. ಒಬ್ಬ ವ್ಯಕ್ತಿ ಮಾಡುವ ಕಾಯಕವು ಯಾವುದಾದರೇನು ಪ್ರಾಮಾಣಿಕವಾಗಿದ್ದರೆ, ಅದು ಭಗವಂತನ ಪೂಜೆಗೆ ಸಮಾನ ಎಂದು ಸಾರಿದರು ಮತ್ತು ತಿಳಿಸಿದರು. ಆ ಮೂಲಕ ಸಮಾಜದಲ್ಲಿ ಕೀಳಾಗಿ ಕಾಣುತ್ತಿದ್ದ ವೃತ್ತಿಯವರಿಗೂ ಘನತೆ ದೊರೆಯಿತು. ಅಲ್ಲದೆ ಕಾಯಕದಿಂದ ಬಂದ ಹಣವನ್ನು ಕೇವಲ ತನಗಾಗಿ ಬಳಸದೆ, ಸಮಾಜದ ಹಿತಕ್ಕಾಗಿ ಮೀಸಲಿಡುವ ಮಹತ್ವದ ದಾಸೋಹದ ಕಲ್ಪನೆಯನ್ನು ಕೊಟ್ಟರು. ಇದು ವ್ಯಕ್ತಿಯನ್ನು ಸಾರ್ವತ್ರಿಕ ಜವಾಬ್ದಾರಿ ಮತ್ತು ಸಮಾಜದ ಪೋಷಕನನ್ನಾಗಿ ರೂಪಿಸಿತು. "ಕಾಯಕವೇ ಕೈಲಾಸ" ಎಂಬ ತತ್ವದ ಮೂಲಕ ಶ್ರಮಜೀವಿಗಳಿಗೆ ಆತ್ಮಗೌರವ ತಂದುಕೊಟ್ಟರು. ಅದನ್ನೇ ಕುವೆಂಪು ಅವರು "ರಾಜ್ಯಗಳು ಉರುಳಲಿ ರಾಜ್ಯಗಳು ಅಳಿಯಲಿ ಅತಿಸುಖ ಬಯಸದೆ ತನ್ನೀ ಕಾಯಕ ಮಾಡುವ ಉಳುವ ಯೋಗಿಯ ನೋಡಲ್ಲಿ" ಎಂದು ರೈತನನ್ನು ( ಶ್ರಮ ಜೀವಿಯನ್ನು) "ನೇಗಿಲ ಯೋಗಿ" ಎಂದು ಕರೆದು ಲೌಕಿಕ ಶ್ರಮದಲ್ಲಿ ದೈವತ್ವವನ್ನು ಕಾಣಿಸಿದರು. ಹಾಗಾಗಿ ಜಾಗತಿಕವಾಗಿ ಅಶಾಂತಿ, ಜಾತೀಯತೆ ಮತ್ತು ಸಂಕುಚಿತ ಮನೋಭಾವಗಳು ಹೆಚ್ಚುತ್ತಿರುವ ಇಂದಿನ ಕಾಲಘಟ್ಟದಲ್ಲಿ, ಶರಣರು ಮತ್ತು ಅವರ ವಚನಗಳು ಹಾಕಿಕೊಟ್ಟ ಸಮಾನತೆಯ ಹಾದಿ ಮತ್ತು ಕುವೆಂಪು ಅವರ 'ಅನಿಕೇತನ' ಪ್ರಜ್ಞೆ ಅತ್ಯಂತ ತುರ್ತು ಅಗತ್ಯಗಳಾಗಿವೆ. "ಮನುಜಮತ ವಿಶ್ವಪಥ" ಎಂಬ ಕನಸು ನನಸಾಗಲು ಶರಣರ ಅನುಭವ ಮಂಟಪದ ಚಿಂತನೆಗಳೇ ಇಂದಿನ ಆಧುನಿಕ ಬದುಕಿನ ಜೀವನಾಡಿಗಳಾಗಬೇಕಿದೆ ಎನ್ನುವಂತೆ ಜಾತಿ, ಮತ, ಗಡಿಗಳನ್ನೂ ಮೀರಿ ನಿಲ್ಲುವ ಮನುಷ್ಯತ್ವವೇ, ಧರ್ಮಗಳಾಚೆಯ ನಿಜ ಧರ್ಮದ ಮೂಲ ತತ್ವ ಎನ್ನುವುದೆ ಇವರ ಸಂದೇಶದ ಸಾರವಾಗಿದೆ ಅಲ್ಲವೆ.

ಧರ್ಮ ಹುಟ್ಟಿ ಮರ್ಮ ಮರೆತು
ಧರ್ಮಕ್ಕೊಬ್ಬ ಗುರುವಾದನೆಂದೊಡೆ
ಜಾತಿಗೊಬ್ಬ ಗುರು ಹುಟ್ಟಿ ಜಗದೋಳು ಜಗಳ ಹೆಚ್ಚಿ
ಜನ್ಮ ಮೂಲಕ್ಕೆ ಪೊರೆಬಂತು
ನೋಡಾ ಸೃಷ್ಟಿಬಲೇಶ.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.

PRGI NO. 120927
(RNINO:KARKAN/2011/48371)